ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೨

**ಪಟ್ಟಿ – ೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತ ನಾಲ್ಕನೇ ಅಧಿವೇಶನ**

**ಬುಧವಾರ, ದಿನಾಂಕ: ೨೧ನೇ ಫೆಬ್ರವರಿ, ೨೦೧೮**

---

## ಸಮೂಹ – III

೧. ಕಂದಾಯ ಸಚಿವರು.

೨. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.

೩. ಅರಣ್ಯ ಸಚಿವರು.

೪. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.

೫. ಕಾರ್ಮಿಕ ಸಚಿವರು.

೬. ವಸತಿ ಸಚಿವರು.

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು.

---

## ಬಳ್ಳಾರಿ ಜಿಲ್ಲೆಯ ಕೊಟ್ಟೂರು ಪಟ್ಟಣ ಪಂಚಾಯ್ತಿಯ ಅಂಬೇಡ್ಕರ್ ವಸತಿ ನಿಲಯದ ಬಿಲ್ ಬಗ್ಗೆ

**ಶ್ರೀ ಅಮರನಾಥ ಪಾಟೀಲ್(ಪದವೀಧರರ ಕ್ಷೇತ್ರ) :–**

೬೧೬ (೮೨೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಬಳ್ಳಾರಿ ಜಿಲ್ಲೆಯ ಕೊಟ್ಟೂರು ಪಟ್ಟಣ ಪಂಚಾಯ್ತಿಗೆ ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಮಂಜೂರಾದ ಮನೆಗಳಿಗೆ ಸರ್ಕಾರ ನೀಡಿದ ಅನುದಾನವೆಷ್ಟು; ಫಲಾನುಭವಿಗಳಿಗೆ ಪಾವತಿಸಿದ ಮೊತ್ತವೆಷ್ಟು ;

(ಇ) ಇನ್ನು ಕೆಲ ಫಲಾನುಭವಿಗಳಿಗೆ ಎಲ್ಲಾ ದಾಖಲೆಗಳು ಸರಿಯಾಗಿದ್ದರೂ ಅಧಿಕಾರಿಗಳು ಬಿಲ್ ಪಾವತಿ ಮಾಡದೆ ತೊಂದರೆ ನೀಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಬಿಲ್ ಪಾವತಿಯ ವಿಳಂಬಕ್ಕೆ ಕಾರಣವೇನು ;

(ಉ) ಬಿಲ್ ಪಾವತಿಯ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ? (ಸಂಪೂರ್ಣ ವಿವರ ನೀಡುವುದು)

## ಏತ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೭ (೮೭೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಗೆ ಸರ್ಕಾರವು ಆಯವ್ಯಯದಲ್ಲಿ ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಅನುದಾನದ ಮೊತ್ತವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಏತ ನೀರಾವರಿ ಯೋಜನೆಗಳು ಕೈಗೆತ್ತಿಕೊಳ್ಳಲಾಗಿದೆ ; (ವರ್ಷಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಅವಧಿಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕೈಗೆತ್ತಿಕೊಂಡ ಪ್ರತಿ ಏತ ನೀರಾವರಿ ಯೋಜನೆಗಳಲ್ಲಿ ಪೂರ್ಣಗೊಂಡ ಪ್ರಗತಿ ಹಂತದಲ್ಲಿರುವ ಮತ್ತು ಅನುಷ್ಠಾನಗೊಳ್ಳದಿರುವ ಯೋಜನೆಗಳು ಯಾವುವು ; ಪ್ರತಿ ಯೋಜನೆಗೂ ನಿಗಧಿಪಡಿಸಿದ ಪರಿಷ್ಕೃತ ಅಂದಾಜು ಹಾಗೂ ಖರ್ಚಾದ ಮೊತ್ತವೆಷ್ಟು ; (ಪ್ರತಿ ಯೋಜನಾವಾರು ಮತ್ತು ವಾರ್ಷಿಕವಾರು ಮಾಹಿತಿ ನೀಡುವುದು)

(ಈ) ಈ ಅವಧಿಯಲ್ಲಿ ಸರ್ಕಾರ ಕೈಗೆತ್ತಿಕೊಂಡು ಪೂರ್ಣಗೊಂಡ ಯೋಜನೆಗಳಿಂದ ಕುಡಿಯುವ ನೀರು ಸೇರಿದಂತೆ ಎಷ್ಟು ಹೆಕ್ಟೇರ್/ ಅಚ್ಚುಕಟ್ಟು ಪ್ರದೇಶದಲ್ಲಿ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ; ಯೋಜನೆಯ ಲಾಭ ಪಡೆದ ಗ್ರಾಮಗಳು ಯಾವುವು ; (ತಾಲ್ಲೂಕುವಾರು, ಪ್ರತಿ ಯೋಜನಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಭೂ ಮಾಪನ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೮ (೮೭೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದ ಭೂಮಾಪನ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮವನ್ನು ರೂಪಿಸಿ ಎಷ್ಟು ವರ್ಷಗಳಾಗಿವೆ ; (ಮಾಹಿತಿ ನೀಡುವುದು)

(ಆ) ರಾಜ್ಯದ ಭೂ ಮಾಪನ ಇಲಾಖೆಯಲ್ಲಿ ಸೂಪರ್‌ವೈಸರ್ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕರ (ಕಾರ್ಯನಿರ್ವಾಹಕ) ಎಷ್ಟು ಹುದ್ದೆಗಳು, ಎಷ್ಟು ವರ್ಷದಿಂದ ಖಾಲಿ ಇವೆ ; ಹಾಗಿದ್ದಲ್ಲಿ, ಇದುವರೆವಿಗೂ ಈ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದ ಭೂ ಮಾಪನ ಇಲಾಖೆಯ ವೃಂದ ಮತ್ತು ನೇಮಕಾತಿಯ ನಿಯಮಗಳ ತಿದ್ದುಪಡಿ ಕಡತ ಸಂಖ್ಯೆ: ಭೂದಾಸ: ೪೬:೨೦೧೪ ದಿನಾಂಕ: ೦೯.೦೧.೨೦೧೫ ರಲ್ಲಿ ಚಾಲನೆಯಲ್ಲಿದ್ದು, ನಾಲ್ಕು ವರ್ಷಗಳು ಆಗಿದ್ದರೂ ಈ ನಿಯಮವನ್ನು ರೂಪಿಸದೇ ಇರಲು ಕಾರಣಗಳೇನು ; ಹಾಗಿದ್ದಲ್ಲಿ, ವಿವರ ನೀಡುವುದು:

(ಈ) ರಾಜ್ಯದ ಭೂ ಮಾಪನ ಇಲಾಖೆಯಲ್ಲಿ ಸೂಪರ್‌ವೈಸರ್ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕರ (ಕಾರ್ಯನಿರ್ವಾಹಕ) ನೇರ ನೇಮಕಾತಿಯನ್ನು ರದ್ದುಪಡಿಸಲು ಪ್ರಸ್ತಾವನೆಯಾಗಿರುವ ಕಡತ ಸಂಖ್ಯೆ: ಭೂದಾಸ: ೪೬:೨೦೧೪, ದಿನಾಂಕ: ೦೯.೦೧.೨೦೧೫ ರಂತೆ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು ; (ವಿವರ ನೀಡುವುದು)

(ಉ) ಈ ಪ್ರಸ್ತಾವನೆಯ ಪ್ರಕಾರ ನಿಯಮ ತಿದ್ದುಪಡಿ ಮಾಡಿ, ಕಳೆದ ೨೦ ವರ್ಷಗಳಿಂದ ವಂಚಿತರಾದ ಸೂಪರ್‌ವೈಸರ್ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕರುಗಳಿಗೆ (ಕಾರ್ಯನಿರ್ವಾಹಕ) ಮುಂಬಡ್ತಿ ನೀಡಿದ್ದಲ್ಲಿ, ಸಾರ್ವಜನಿಕರ

ರೈತರ ಹದ್ದುಬಸ್ತು, ದರಕಾಸ್ತು, ಮುಟೇಷನ್, ಭೂ ಸ್ವಾಧೀನ ಹಾಗೂ ಇತರೆ ಪ್ರಕರಣಗಳು ಶೀಘ್ರವಾಗಿ ಇತ್ಯರ್ಥವಾಗಿ ಸಾರ್ವಜನಿಕರಿಗೆ ಶೀಘ್ರ ನ್ಯಾಯ ಸಿಗಲು ಅನುಕೂಲವಾಗುವುದಿಲ್ಲವೆ ; ಹಾಗಿದ್ದಲ್ಲಿ, ಎಷ್ಟು ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಅರಣ್ಯ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳ ಮತ್ತು ಆನೆ ಹಾವಳಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೯ (೮೭೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯಲ್ಲಿ ಫಾರೆಸ್ಟ್ ಗಾರ್ಡ್, ಡಿ.ಆರ್.ಎಫ್.ಓ ಹಾಗೂ ಆರ್.ಎಫ್.ಓ ಹುದ್ದೆಗಳು ಖಾಲಿ ಇವೆಯೇ ; (ಖಾಲಿ ಇರುವ ಹುದ್ದೆವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ತುಂಬಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಇ) ರಾಜ್ಯದ ಯಾವ ಅರಣ್ಯ ಪ್ರದೇಶದಲ್ಲಿ ಕಾಡಿನಿಂದ ನಾಡಿಗೆ ಆನೆಗಳು ಲಗ್ಗೆ ಇಟ್ಟಿವೆ ; ಆನೆಗಳ ಹಾವಳಿಗೆ ತುತ್ತಾಗಿ ಪ್ರಾಣತೆತ್ತವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಆನೆ ಹಾವಳಿಗೆ ತುತ್ತಾದ ಕುಟುಂಬಗಳಿಗೆ ಸರ್ಕಾರದಿಂದ ದೊರೆತ ಪರಿಹಾರ ಧನ ಹಾಗೂ ಸೌಲಭ್ಯವೇನು ; (ಕುಟುಂಬದ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಉ) ಆನೆ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು; ಕಳೆದ ನಾಲ್ಕು ವರ್ಷಗಳಲ್ಲಿ ಆನೆ ಹಾವಳಿ ತಡೆಗಟ್ಟಲು ಅರಣ್ಯ ಇಲಾಖೆ ಖರ್ಚು ಮಾಡಿದ ಮೊತ್ತವೆಷ್ಟು ? (ವರ್ಷವಾರು ಖರ್ಚಿನ ವಿವರ ನೀಡುವುದು)

## ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಕೊಪ್ಪ ಹೋಬಳಿ, ಬೋಳಾರೆ ಕೆರೆ ದುರಸ್ತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೦ (೮೭೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು, ಕೊಪ್ಪ ಹೋಬಳಿ, ಬೋಳಾರೆ ಕೆರೆಯ ವಿಸ್ತೀರ್ಣ ಎಷ್ಟು ; ಹೂಳು ತೆಗೆಯಲು ಮತ್ತು ಕೆರೆ ವಿಸ್ತೀರ್ಣ, ಗಡಿ ಸುತ್ತ, ರಸ್ತೆ ನಿರ್ಮಾಣ ಹಾಗೂ ಕೆರೆ ದುರಸ್ತಿಗೆ ಮಂಜೂರಾದ ಹಣವೆಷ್ಟು ; ಯಾವಾಗ ದುರಸ್ತಿ ಕಾರ್ಯ ಪ್ರಾರಂಭವಾಗುತ್ತದೆ ; ಗುತ್ತಿಗೆದಾರರು ಯಾರು;

(ಆ) ಈ ಬೋಳಾರೆ ಕೆರೆಗೆ ಕೊಡಗುಬಾಳು ಹತ್ತಿರ ಶಿಂಷಾನದಿಗೆ ಅಡ್ಡಲಾಗಿ ವೀಯರ್ ನಿರ್ಮಾಣ ಮಾಡಿ ಏರುಕೊಳವೆಯ ಮುಖಾಂತರ ಬೋಳಾರೆ ಕೆರೆಗೆ ಸಂಪರ್ಕ ಕಲ್ಪಿಸಿ, ಜಾಕ್‌ವೇಲ್ ನಿರ್ಮಾಣ ಮಾಡಿ ವಿಶ್ವೇಶ್ವರಯ್ಯ ಮುಖ್ಯ ನಾಲೆಗೆ (ಮಲ್ಲಿಗೆರೆ) ಬಳಿ–೨ ಕಿ.ಲೋ ಮೀಟರ್ ಸಂಪರ್ಕ ಕಲ್ಪಿಸಲು ಶಿಂಷಾ ನಾಲಾ ರೈತ ಹಿತರಕ್ಷಣಾ ಸಮಿತಿಯವರು ಮನವಿ ಸಲ್ಲಿಸಿದ್ದು, ಈ ಬಗ್ಗೆ

ಶಿಂಷಾ ನದಿ "ಯಡವನಹಳ್ಳಿ ಚೆಕ್ ಡ್ಯಾಂ" ಎ ಮತ್ತು ಬಿ (ಬಿಂದುವಿನಿಂದ) ವಿಶ್ವೇಶ್ವರಯ್ಯ ನಾಲೆ ಸೋಮನಹಳ್ಳಿ ರೆಗ್ಯೂಲೇಟರ್ ವಿಶ್ವೇಶ್ವರಯ್ಯ ನಾಲೆ ಏತಾ ನೀರಾವರಿ ಯೋಜನೆ ಏರ್ಪಡಿಸಿ ಶಿಂಷಾನಾಲೆ–ತರೀಕೆರೆ ಕಾಲೋನಿ ಹತ್ತಿರ ವಿ.ಸಿ.ನಾಲೆಗೆ ಸಂಪರ್ಕ ಕಲ್ಪಿಸಲು, ಅಂದಾಜು ಪಟ್ಟಿ ತಯಾರಿಸಿದೆಯೇ ; ವಿ.ಸಿ. ನಾಲಾ ಕುಂಠಿತ ಅಚ್ಚುಕಟ್ಟು ಪ್ರದೇಶ ಕೊಪ್ಪ ಹೋಬಳಿ ಜಮೀನುಗಳಿಗೆ ನೀರು ಒದಗಿಸಲು ಈ ಕಾಮಗಾರಿ ಮಂಜೂರು ಮಾಡಲು ಕ್ರಮ ತೆಗೆದುಕೊಂಡಿದೆಯೇ?

## ಸಾರ್ವಜನಿಕರ, ರೈತರ ಜಮೀನಿನ ಅರ್ಜಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೧ (೮೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಜಮೀನಿನ ಅಳತೆಗಾಗಿ ರೈತರು ಮತ್ತು ಸಾರ್ವಜನಿಕರಿಂದ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಹದ್ದುಬಸ್ತು, ದರಕಾಸ್ತು, ಮುಟೇಷನ್‌ಗಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ನಾಲ್ಕು ವರ್ಷಗಳಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಅರ್ಜಿಗಳು ಬಾಕಿ ಇರಲು ಕಾರಣವೇನು ; ಇದಕ್ಕೆ ಹೊಣೆಗಾರರು ಯಾರು ; ಬಾಕಿ ಇರಲು ಕಾರಣರಾದವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಅರ್ಜಿಗಳನ್ನು ಎಷ್ಟು ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಸಣ್ಣ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨೨ (೬೪೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಕ್ರೀಡಾಂಗಣಗಳ ಸಂಖ್ಯೆ ಎಷ್ಟು ; ವಾರ್ಷಿಕ ನಿರ್ವಹಣೆಗೆ ನಿಗಧಿ ಮಾಡಿದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡವುದು)

(ಆ) ಕ್ರೀಡಾಂಗಣದಲ್ಲಿ ಕ್ರೀಡಾಪಟುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ಸರ್ಕಾರದ ಕ್ರೀಡಾಂಗಣದಲ್ಲಿ ಕ್ರೀಡೆಗಳು ನಡೆದಾಗ ಕ್ರೀಡಾ ಪಟುಗಳಿಗೆ ಅವಶ್ಯವಿರುವ ಎಲ್ಲಾ ಸೌಲಭ್ಯಗಳನ್ನು ನೀಡಲು ಅನುದಾನ ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಈ) ಕ್ರೀಡಾ ಪಟುಗಳಿಗೆ ಸೂಕ್ತ ತರಬೇತಿದಾರರನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ; ಈಗ ಯಾವ ಯಾವ ಜಿಲ್ಲೆಗಳಲ್ಲಿ

ಯಾವ ಯಾವ ತರಬೇತಿಗಳಿಗೆ ಪ್ರಾಶಸ್ತ್ಯ ನೀಡಲಾಗಿದೆ. ; ಪ್ರಾಶಸ್ತ್ಯ ನೀಡಿದ ಕ್ರೀಡೆಗಳಿಗೆ ಸೂಕ್ತ ತರಬೇತಿದಾರರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಕೌಶಲ್ಯ ತರಬೇತಿ ನೀಡಿದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೩ (೫೧೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿರುವ ನಿರುದ್ಯೋಗಿ ಯುವಕರಿಗೆ ತಾವು ಇಚ್ಛಿಸುವ ವೃತ್ತಿಯಲ್ಲಿ ತರಬೇತಿ ಹೊಂದಲು ಸರ್ಕಾರ ಕೌಶಲ್ಯ ತರಬೇತಿ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದು, ಇಲ್ಲಿಯವರೆಗೆ ಎಷ್ಟು ಅರ್ಜಿಗಳು ಬಂದಿವೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ಕಾರ್ಯಕ್ರಮದಲ್ಲಿ ಯಾವ ಯಾವ ಕೌಶಲ್ಯಗಳ ಬಗ್ಗೆ ತರಬೇತಿ ನೀಡಲಾಗುವುದು ; ಹಾಗೂ ಕೌಶಲ್ಯ ತರಬೇತಿಗೆ ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಕೌಶಲ್ಯ ತರಬೇತಿ ಹೊಂದಿರುವರಿಗೆ ಸ್ವಯಂ ಉದ್ಯೋಗ ಪಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಮೀನುಗಾರರ ಅಭಿವೃದ್ಧಿಗೆ ರೂಪಿಸಿರುವ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨೪ (೬೪೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೀನುಗಾರರ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು ; (ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಯಾವ ಸ್ಥಳದಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ವಸತಿ ಯೋಜನೆಯಡಿ ನಿರ್ಮಾಣವಾದ ಮನೆಗಳು ಹಾಗೂ ಅನುದಾನದ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨೫ (೬೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ನೇ ಸಾಲಿನಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸಾಮಾನ್ಯ ವರ್ಗದವರಿಗೆ ನಿರ್ಮಾಣ ಮಾಡಲಾದ ಮನೆಗಳ ಸಂಖ್ಯೆ ಎಷ್ಟು ; ಯಾವ ಯೋಜನೆಯಡಿಯಲ್ಲಿ ನಿರ್ಮಾಣ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೭–೧೮ ನೇ ಸಾಲಿನಲ್ಲಿ ಸಾಮಾನ್ಯ ವರ್ಗದವರಿಗೆ ಮನೆ ನಿರ್ಮಾಣಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ ;

(ಇ) ಪ್ರಸ್ತುತ ಸಾಲಿನಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗೆ ಯಾವ ಯಾವ ಯೋಜನೆಗಳಲ್ಲಿ ಸಾಮಾನ್ಯ ವರ್ಗದವರಿಗೆ ಮನೆ ನಿರ್ಮಾಣ ಮಾಡಲಾಗಿದೆ ; ಬಿಡುಗಡೆ ಮಾಡಲಾದ ಅನುದಾನ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಐ.ಟಿ.ಐ ಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೬೨೬ (೮೬೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಇರುವ ಒಟ್ಟು ಸರ್ಕಾರಿ ಐ.ಟಿ.ಐ. ಗಳೆಷ್ಟು ;

(ಆ) ಐ.ಟಿ.ಐ. ಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹೆಸರು ಸಮೇತ ವಿವರ ಒದಗಿಸುವುದು)

(ಇ) ಇವರಲ್ಲಿ ಎಷ್ಟು ಬೋಧಕ ಸಿಬ್ಬಂದಿಗಳು ಅತಿಥಿ ಉಪನ್ಯಾಸಕರಾಗಿ ಎಷ್ಟು ವರ್ಷಗಳಿಂದ ಯಾವ ವೇತನದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; ಇವರುಗಳ ಬೇಡಿಕೆಗಳೇನು ; (ವಿವರ ನೀಡುವುದು)

(ಈ) ಈ ಅತಿಥಿ ಉಪನ್ಯಾಸಕರನ್ನು ಹಂತ ಹಂತವಾಗಿ ಆಯಾ ಐ.ಟಿ.ಐ ನಲ್ಲಿ ಖಾಯಂಗೊಳಿಸಲಾಗುವುದೇ ; ಇಲ್ಲವಾದಲ್ಲಿ ಇರುವ ತೊಂದರೆಗಳೇನು ?

## ಸಣ್ಣ ನೀರಾವರಿ ಇಲಾಖೆಗೆ ಸೇರಿರುವ ಕೆರೆಗಳು, ಏತ ನೀರಾವರಿಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೭ (೯೦೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿರುವ ಕೆರೆಗಳ ಸಂಖ್ಯೆ ಎಷ್ಟು ; ಸದರಿ ಕೆರೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಸದರಿ ಕೆರೆಗಳ ಅಭಿವೃದ್ಧಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು ;

(ಇ) ರಾಯಚೂರು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿರುವ ಏತ ನೀರಾವರಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಏತ ನೀರಾವರಿಗಳು ರೈತರಿಗೆ ಉಪಯೋಗವಾಗಿವೆ (ಕಾರ್ಯಗತವಾಗಿವೆ) ?

## ಅರಣ್ಯ ಪ್ರದೇಶವನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೮ (೯೦೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಅರಣ್ಯ ಪ್ರದೇಶವನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ ಪಟ್ಟಣದಲ್ಲಿ 'ಟ್ರೀ ಪಾರ್ಕ್' ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇದಕ್ಕೆ ಮಂಜೂರಾಗಿರುವ ಅನುದಾನ ಎಷ್ಟು ?

## ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೯ (೯೦೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಈ ಮೂರು ಯೋಜನೆಗಳನ್ನು ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಜಿಲ್ಲೆಯಲ್ಲಿ ಮೂರು ಯೋಜನೆಗಳಿಂದ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ?

## ತುಂಗಭದ್ರಾ ಅಣೆಕಟ್ಟಿನಲ್ಲಿ ತುಂಬಿರುವ ಹೂಳಿನ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೩೦ (೮೯೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಂಗಭದ್ರಾ ಅಣೆಕಟ್ಟಿನಲ್ಲಿ ತಂಬಿರುವ ೩೩ TMC ಹೂಳಿನ (Spelt) ಪರಿಣಾಮವಾಗಿ ನೀರಿನ ಸಾಮರ್ಥ್ಯ ಕಡಿಮೆ ಆಗಿರುವುದರಿಂದ ಮೂರು ಜಿಲ್ಲೆಗಳ (ರಾಯಚೂರು, ಕೊಪ್ಪಳ, ಬಳ್ಳಾರಿ) ರೈತರಿಗೆ ಆಗಿರುವ ಸಂಕಷ್ಟವನ್ನು ಸರಿಪಡಿಸಲು ನವಲೀ ಗ್ರಾಮದ ಹತ್ತಿರ ಸಮತೋಲನ ಜಲಾಶಯ ನಿರ್ಮಿಸಲು ಉದ್ದೇಶಿಸಿರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಇತ್ತೀಚೆಗೆ ಚಿತ್ರದುರ್ಗ ಜಿಲ್ಲೆಯ ಪಾವಗಡ ಹಾಗೂ ಇತರೇ ಪ್ರದೇಶಗಳಿಗೆ ಕುಡಿಯುವ ನೀರಿನ ತುಂಗಭದ್ರಾ ಅಣೆಕಟ್ಟಿನಿಂದ ಹಂಚಿಕೆಯಾಗಿರುವ ನೀರಿನ ಪ್ರಮಾಣ ಎಷ್ಟು?

## ಅನುಕಂಪ ಆಧಾರಿತ ಹುದ್ದೆಯ ನೇಮಕಾತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೬೩೧ (೮೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕಂದಾಯ ವಿಭಾಗ ಹಾಗೂ ಉಪ ಕಂದಾಯ ವಿಭಾಗಗಳು ಎಷ್ಟು ; ಅವು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಅನುಕಂಪ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ೨೦೦೧ ರಿಂದ ಇಲ್ಲಿಯವರೆಗೆ ಸ್ವೀಕರಿಸಿದ ಪ್ರಸ್ತಾವನೆಗಳು ಎಷ್ಟು; ಆದೇಶ ಹೊರಡಿಸಿದವು ಎಷ್ಟು ; ಹಾಲಿ ಚಾಲ್ತಿಯಲ್ಲಿರುವವು ಎಷ್ಟು ; ಬಾಕಿ ಇರುವ ಮತ್ತು ತಿರಸ್ಕೃತಗೊಂಡ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ? (ವಿವರವಾಗಿ ಶಿಫಾರಸ್ಸು ಮಾಡಿದ ಇಲಾಖೆ, ಅಭ್ಯರ್ಥಿಯ ಹೆಸರು, ನೇಮಕಗೊಂಡ ಹುದ್ದೆ, ಹಾಗೂ ಇಲಾಖೆಯ ಹೆಸರಿನೊಂದಿಗೆ ಮಾಹಿತಿ ನೀಡುವುದು)

## ಮಜರೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ರಚಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೬೩೨ (೮೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಜರೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಹೊಸದಾಗಿ ರಚನೆ ಮಾಡಲು ಇರುವ ಮಾನದಂಡಗಳೇನು ;

(ಆ) ಇಲ್ಲಿಯವರೆಗೂ ಕಳೆದ ೫ ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಎಷ್ಟು ಮಜರೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಹೊಸದಾಗಿ ರಚನೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆ, ತುಮಕೂರು ತಾಲ್ಲೂಕು ಕಸಬಾ ಹೋಬಳಿ ವ್ಯಾಪ್ತಿಯಲ್ಲಿ ಬರುವ ಗ್ರಾ,ಮದಿಂದ ತಾಂಡಾ/ಗೊಲ್ಲರಹಟ್ಟಿ/ ವಡ್ಡರಹಟ್ಟಿ/ಮಜರೆ/ಪಾಳ್ಯ ಇತ್ಯಾದಿ ದಾಖಲೆ ರಹಿತ ಜನವಸತಿ

ಪ್ರದೇಶವನ್ನು ಬೇರ್ಪಡಿಸಿ, ಹೊಸ ಕಂದಾಯ ಗ್ರಾಮವನ್ನು ರಚಿಸುವ ಕುರಿತು ಇಲ್ಲಿಯುವರೆಗೆ ಎಷ್ಟು ಅರ್ಜಿಗಳು ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆರವರಿಗೆ ಬಂದಿರುತ್ತದೆ ; (ವಿವರವಾದ ಮಾಹಿತಿ ನೀಡುವುದು)

(ಈ) ಇದರ ಸಂಬಂಧ ಇಲ್ಲಿಯವರೆಗೂ ಎಷ್ಟು ಮಜರೆ ಗ್ರಾಮಗಳನ್ನು ಕಂದಾಯ ಹೊಸ ಗ್ರಾಮಗಳಾಗಿ ರಚನೆ ಮಾಡಲಾಗಿದೆ; ಬಾಕಿ ಉಳಿದ ಅರ್ಜಿಗಳೆಷ್ಟು ; ವಿಳಂಬವಾಗಲು ಕಾರಣವೇನು ? (ವಿವರವಾದ ಮಾಹಿತಿ ನೀಡುವುದು)

## ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿನ ಯೋಜನೆಗಳ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೬೩೩ (೮೪೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಹಾಲಿ ಜಾರಿ ಇರುವ ಯೋಜನೆಗಳಾವುವು ; ಇವುಗಳಿಗೆ ಕಳೆದ ೩ ವರ್ಷಗಳಿಂದ ಎಷ್ಟು ಹಣ ಖರ್ಚು ಮಾಡಲಾಗಿದೆ ; (ವಿವರವಾಗಿ ಯೋಜನಾವಾರು ಮಾಹಿತಿ ಕೊಡುವುದು)

(ಆ) ಸದರಿ ಇಲಾಖೆಗೆ ಕಳೆದ ಮೂರು ವರ್ಷಗಳಿಂದ ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಂದಿದೆ ; ಇದನ್ನು ಯಾವ ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಇಲಾಖೆಯಡಿ ಕೆಲಸ ನಿರ್ವಹಿಸುತ್ತಿರುವ ನೌಕರರು ಎಷ್ಟು; (ವಿವರವಾಗಿ ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ ಪಡೆಯುತ್ತಿರುವ ತಿಂಗಳ ವೇತನ ಸಹಿತ ಮಾಹಿತಿ ಕೊಡುವುದು)

(ಈ) ಸಮಾಲೋಚನಾ ಶುಲ್ಕ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ಹುದ್ದೆಯ ಪದನಾಮ, ಪಡೆಯುತ್ತಿರುವ ಸಮಾಲೋಚನಾ ಶುಲ್ಕದೊಂದಿಗೆ ಮಾಹಿತಿ ಕೊಡುವುದು)

(ಉ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಹಣ ನೀಡಲಾಗಿದೆ; (ಸಂಸ್ಥೆವಾರು ವಿವರವಾದ ಮಾಹಿತಿ ಕೊಡುವುದು)

## ವಿಜ್ಞಾನ ಗುಡ್ಡದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೬೩೪ (೮೩೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜ್ಞಾನಗುಡ್ಡ ಎಂದರೇನು ; ರಾಜ್ಯದಲ್ಲಿರುವ ವಿಜ್ಞಾನಗುಡ್ಡಗಳ ಸಂಖ್ಯೆ ಎಷ್ಟು ; ಈ ಕಾರ್ಯಕ್ರಮವನ್ನು ಯಾರ–ಯಾರ ಸಹಯೋಗದೊಂದಿಗೆ ಎಂದಿನಿಂದ ಅನುಷ್ಠಾನಗೊಳಿಸಲಾಗಿದೆ; (ವಿವರವಾದ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾರ್ಯಕ್ರಮಕ್ಕೆ ಅಧ್ಯಕ್ಷರು ಯಾರು, ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ದೊರೆತಿರುವ ಅನುದಾನವೆಷ್ಟು ; ಬಾಕಿ ಬಿಡುಗಡೆಯಾಗಬೇಕಿರುವ ಹಣವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಯಾವ ಗುಡ್ಡವನ್ನು "ವಿಜ್ಞಾನಗುಡ್ಡ" ಎಂದು ಆಯ್ಕೆ ಮಾಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಹಣವನ್ನು ಯಾವ-ಯಾವ ಕಾಮಗಾರಿಗಳಿಗೆ ವಿನಿಯೋಗಿಸಲಾಗಿದೆ ; ಬಾಕಿ ಉಳಿದಿರುವ ಹಣವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಈ) ಸರ್ಕಾರವು ವಿಜ್ಞಾನ ಗುಡ್ಡಗಳನ್ನಾಗಿ ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ; ಇದರ ಸಂಬಂಧ ಕೇಂದ್ರ/ರಾಜ್ಯ ಸರ್ಕಾರದ ನೀತಿ ನಿಯಮಗಳ ವಿವರವಾದ ಮಾಹಿತಿ ನೀಡುವುದು?

## ಹಿಂದುಳಿದ ಸಮುದಾಯದ ಜನರು ವಾಸಿಸುವ ಹಲವಾರು ದಾಖಲೆ ರಹಿತ ಜನ ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ವಿಶೇಷ ಕೋಶದ ರಚನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೬೩೫ (೮೬೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಲಂಬಾಣಿ, ಗೊಲ್ಲ, ಭೋವಿ, ನಾಯಕ, ಸೋಲಿಗ, ಕಾಡು ಕುರುಬ ಮುಂತಾದ ಹಿಂದುಳಿದ ಸಮುದಾಯದ ಜನರು ವಾಸಿಸುವ ಹಲವು ದಾಖಲೆ ರಹಿತ ಜನ ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ವಿಶೇಷ ಕೋಶವನ್ನು ರಚಿಸಲಾಗಿದೆಯೇ ;

(ಆ) ರಚಿಸಲಾಗಿದ್ದರೆ, ಈ ಕೋಶದ ಮುಖಾಂತರ ಎಷ್ಟು ಪ್ರಕರಣಗಳಲ್ಲಿ ಅಧಿಸೂಚನೆಗಳನ್ನು ಹೊರಡಿಸಲಾಗಿದೆ ;

(ಇ) ಈ ಕೋಶದ ಮುಖಾಂತರ ಎಷ್ಟು ದಾಖಲೆ ರಹಿತ ಜನ ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಅರಣ್ಯ ವ್ಯಾಪ್ತಿಗೆ ಸೇರಿದ ಜಮೀನಿನ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೬೩೬ (೮೬೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಲಭ್ಯವಿರುವ ಸರ್ಕಾರಿ ಜಮೀನು, ಮೀಸಲು ಅರಣ್ಯ, ಅರಣ್ಯ ವ್ಯಾಪ್ತಿಗೆ ಸೇರಿದ ಜಮೀನಿನ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಪೈಕಿ ಅತಿಕ್ರಮಣವಾಗಿರುವ ಜಮೀನಿನ ವಿಸ್ತೀರ್ಣ ಎಷ್ಟು ? (ಎಕರೆವಾರು ವಿವರ ನೀಡುವುದು)

## ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ. ಯೋಜನೆ ಅಡಿಯಲ್ಲಿ ಮೀಸಲಾಗಿಟ್ಟ ಅನುದಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೬೩೭ (೮೬೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ವಿಶೇಷ ಘಟಕ ಯೋಜನೆ (ಎಸ್.ಸಿ.ಪಿ ) ಹಾಗೂ ಗಿರಿಜನ ಉಪ ಯೋಜನೆಯಡಿಯಲ್ಲಿ (ಟಿ.ಎಸ್.ಪಿ) ಮೀಸಲಾಗಿಟ್ಟ ಅನುದಾನವೆಷ್ಟು ; (ಯೋಜನಾವಾರು ವಿವರ ನೀಡುವುದು)

(ಆ) ಈ ಯೋಜನೆ ಅಡಿಯಲ್ಲಿ ಜನವರಿ ೩೧ರವರೆಗೆ ಖರ್ಚು ಮಾಡಲಾದ ಹಣಕಾಸಿನ ವಿವರ ನೀಡುವುದು ; (೨೦೧೬–೧೭ ಹಾಗೂ ೨೦೧೭–೧೮ ಯೋಜನಾವಾರು)

(ಇ) ಈ ಯೋಜನೆ ಅಡಿಯಲ್ಲಿ ಹಣವನ್ನು ಖರ್ಚು ಮಾಡದೇ ಇರುವಂತಹ ಸಂದರ್ಭದಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ ೨೦೧೩ರ ಕಾನೂನಿನ ಪ್ರಕಾರ ಸಂಬಂಧಿಸಿದವರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ?

## ಅಂತರ್ಜಲ ಕುಸಿತ ತಡೆಯಲು ಸರ್ಕಾರ ಕೈಗೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೬೩೮ (೮೬೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨ ರಿಂದ ರಾಜ್ಯದಲ್ಲಿ ವಾರ್ಷಿಕ ಅಂತರ್ಜಲ ಮಟ್ಟ ಇಳಿಕೆಯಾಗುತ್ತಿರುವ ಪ್ರಮಾಣ ಎಷ್ಟು ; ತಾಲ್ಲೂಕುವಾರು ಅಂತರ್ಜಲ ಮಟ್ಟದ ವಿವರ ನೀಡುವುದು ;

(ಆ) ರಾಜ್ಯದಲ್ಲಿರುವ ಅಂತರ್ಜಲ ಮಾಪನ ತೆರೆದ ಬಾವಿಗಳ ಹಾಗೂ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ;

(ಇ) ಅಂತರ್ಜಲ ಕುಸಿತ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಕ್ರೀಡಾ ಅಕಾಡೆಮಿಗಳನ್ನು ಸ್ಥಾಪಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೬೩೯ (೮೬೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಲಾ ೧ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಬೆಂಗಳೂರಿನ ವಿದ್ಯಾನಗರದಲ್ಲಿ ಬಾಸ್ಕೆಟ್ ಬಾಲ್, ಉಡುಪಿಯಲ್ಲಿ ಈಜುಕೊಳ, ಮೈಸೂರಿನಲ್ಲಿ ಟೆನ್ನಿಸ್ ಮತ್ತು ಚಿತ್ರದುರ್ಗದಲ್ಲಿ ಆರೋಹಣ ಕ್ರೀಡಾ ಅಕಾಡೆಮಿಗಳನ್ನು ಸ್ಥಾಪಿಸಲಾಗಿದೆಯೇ ;

(ಆ) ಈ ನಾಲ್ಕು ಅಕಾಡೆಮಿಗಳಿಗೆ ಜನವರಿ ೩೧ರವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಈ ನಾಲ್ಕು ಅಕಾಡೆಮಿಗಳಲ್ಲಿ ಕೈಗೊಂಡ ಕಾರ್ಯಗಳು ಮುಕ್ತಾಯಗೊಂಡಿವೆಯೇ ; ಇಲ್ಲವಾದಲ್ಲಿ, ಇವುಗಳು ಯಾವ ಯಾವ ಹಂತದಲ್ಲಿ ಇವೆ ? (ವಿವರ ನೀಡುವುದು)

## ಸಣ್ಣ ಕೆರೆಗಳ ಹೂಳೆತ್ತುವ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೦ (೬೫೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ಸಣ್ಣ ಕೆರೆಗಳು ಎಷ್ಟು ; (ವಿವರಗಳನ್ನು ನೀಡುವುದು)

(ಆ) ೨೦೧೫–೧೬ರಿಂದ ೨೦೧೭–೧೮ನೇ ಸಾಲಿನವರೆಗೆ ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಬರುವ ಸಣ್ಣ ಕೆರೆಗಳ ಹೂಳೆತ್ತುವ ಕಾಮಗಾರಿ ಹಾಗೂ ಇನ್ನಿತರೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ; (ವಿವರ ನೀಡುವುದು)

(ಇ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಸಣ್ಣ ಕೆರೆಗಳ ಹೂಳೆತ್ತುವ ಕಾಮಗಾರಿ ಹಾಗೂ ಇನ್ನಿತರೆ ಕಾಮಗಾರಿಗಳನ್ನು ಕೈಗೊಳ್ಳಲು ಬಿಡುಗಡೆಯಾಗಿರುವ ಅನುದಾನ ಹಾಗೂ ಖರ್ಚಾದ ಅನುದಾನ ಎಷ್ಟು ? (ವಿವರ ಒದಗಿಸುವುದು)

## ವಾಯುಮಾಲಿನ್ಯ ಮತ್ತು ಜಲಮಾಲಿನ್ಯಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೧ (೬೫೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಒಳಗೊಂಡಂತೆ ರಾಜ್ಯದ ಇತರೆ ಮಹಾನಗರಗಳಲ್ಲಿ ಉಂಟಾಗುತ್ತಿರುವ ವಾಯುಮಾಲಿನ್ಯ ಮತ್ತು ಜಲಮಾಲಿನ್ಯದ ದುಷ್ಪರಿಣಾಮಗಳ ಕುರಿತು ರಾಜ್ಯ ಸರ್ಕಾರದಿಂದ ಪ್ರತಿ ವರ್ಷ ಸಮೀಕ್ಷೆ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ, ಮಹಾನಗರವಾರು ವಿವರ ನೀಡುವುದು ;

(ಆ) ರಾಜ್ಯದ ಎಲ್ಲಾ ಮಹಾನಗರಗಳಲ್ಲಿ ಕಳೆದ ೫ ವರ್ಷಗಳಲ್ಲಿ ಕಂಡು ಬಂದಿರುವ ವಾಯುಮಾಲಿನ್ಯ ಮತ್ತು ಜಲಮಾಲಿನ್ಯ ಪ್ರಮಾಣದ ವಿವರ ಮತ್ತು ಈ ಮಾಲಿನ್ಯದಿಂದ ಬರುವ ಕಾಯಿಲೆಗಳ ವಿವರ ನೀಡುವುದು ;

(ಇ) ಕಳೆದೆರಡು ವರ್ಷಗಳಿಂದ ದೆಹಲಿ ಮಹಾನಗರದಲ್ಲಿ ಉಲ್ಬಣಗೊಂಡ ವಾಯು ಮಾಲಿನ್ಯದಂತಹ ಗಂಭೀರ ಸಮಸ್ಯೆಗಳು ಮುಂದೊಂದು ದಿನ ಬೆಂಗಳೂರು ನಗರ ಮತ್ತು ರಾಜ್ಯದ ಇತರೆ ನಗರಗಳಲ್ಲಿ ಉಂಟಾಗದಂತೆ ಸರ್ಕಾರವು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ? (ವಿವರ ನೀಡುವುದು)

## ಅರಣ್ಯ ಪ್ರದೇಶದ ಆಸುಪಾಸಿನಲ್ಲಿ ಕಾಡು ಪ್ರಾಣಿಗಳ ಹಾವಳಿ ಕುರಿತು

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೨ (೬೫೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯ ಆಲೂರು ಮತ್ತು ಸಕಲೇಶಪುರ ತಾಲ್ಲೂಕಿನ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿಯಿಂದ ಕಳೆದ ೨ ವರ್ಷಗಳಲ್ಲಿ ಮರಣ ಹೊಂದಿರುವ ವ್ಯಕ್ತಿಗಳ ಸಂಖ್ಯೆ ಎಷ್ಟು ; ಸದರಿ ಕುಟುಂಬ ವರ್ಗಕ್ಕೆ ನೀಡಲಾಗಿರುವ ಪರಿಹಾರದ ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ಹಾಸನ ಜಿಲ್ಲಾದ್ಯಂತ ಇರುವ ಅರಣ್ಯ ಪ್ರದೇಶದ ಆಸುಪಾಸುಗಳಲ್ಲಿ ಕಾಡು ಪ್ರಾಣಿಗಳ ಉಪಟಳ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಕಳೆದ ೨ ವರ್ಷಗಳಲ್ಲಿ ಸರ್ಕಾರವು ಮಾಡಿರುವ ವೆಚ್ಚದ ವಿವರಗಳನ್ನು ತಾಲ್ಲೂಕುವಾರು ನೀಡುವುದು ;

(ಇ) ಹಾಸನ ಜಿಲ್ಲಾದ್ಯಂತ ಅರಣ್ಯ ಪ್ರದೇಶದ ಸುತ್ತಮುತ್ತ ವಾಸಿಸುವ ಕುಟುಂಬಗಳು ಉರುವಲು ಬಳಕೆಗೆ ಸೌದೆಯನ್ನು ಬಳಸುವುದರ ಬದಲು ಸದರಿ ಕುಟುಂಬಗಳಿಗೆ ಅರಣ್ಯ ಇಲಾಖೆಯಿಂದ ಗ್ಯಾಸ್ ಸಿಲೆಂಡರ್ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಎಷ್ಟು ಕುಟುಂಬಗಳಿಗೆ ಅಡುಗೆ ಗ್ಯಾಸ್ ಸಿಲಿಂಡರ್ ವಿತರಣೆ ಮಾಡಲಾಗಿದೆ ; ೨೦೧೭–೧೮ನೇ ಸಾಲಿನಲ್ಲಿ ಎಷ್ಟು ಕುಟುಂಬಗಳಿಗೆ ಅಡುಗೆ ಅನಿಲ ಸಿಲೆಂಡರ್ ವಿತರಿಸಲು ಗುರಿ ನಿಗಧಿಪಡಿಸಲಾಗಿದೆ ? (ಆಯ್ಕೆ ಮಾಡಿರುವ ಫಲಾನುಭವಿಗಳ ವಿವರ ನೀಡುವುದು)

## ಕುಸ್ತಿ ಕಲೆಗೆ ಪ್ರೋತ್ಸಾಹ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೩ (೮೫೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಸ್ತಿ ಕಲೆ ಇತ್ತೀಚಿನ ದಿನಗಳಲ್ಲಿ ಕಡಿಮೆಯಾಗಿ ನಶಿಸಿ ಹೋಗುವ ಹಂತ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಗರಡಿ ಮನೆಗಳ ಸಂಖ್ಯೆ ಎಷ್ಟು ; ಗರಡಿ ಮನೆಗಳ ನವೀಕರಣ ಮತ್ತು ಅಭಿವೃದ್ಧಿಗೆ ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು;

(ಇ) ಕುಸ್ತಿ ಕಲೆ ಬಗ್ಗೆ ಯುವಜನರನ್ನು ಆಕರ್ಷಿಸಲು ಇಲಾಖೆ ಕಾರ್ಯಕ್ರಮ ಹಾಕಿಕೊಂಡಿದೆಯೇ ; ಇಲ್ಲದಿದ್ದಲ್ಲಿ, ಕಾರ್ಯಕ್ರಮ ಹಾಕಿಕೊಳ್ಳಲಾಗುವುದೇ ?

## ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕಾರ್ಯಕ್ರಮಗಳು

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೪ (೮೫೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ರಾಜ್ಯದಲ್ಲಿ ಹಮ್ಮಿಕೊಳ್ಳಲಾಗಿದೆ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಈ ಇಲಾಖೆಯಿಂದ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ; ಎಷ್ಟು ಅನುದಾನ ನೀಡಲಾಗಿದೆ ; ಇದರ ಫಲಾನುಭವಿಗಳು ಯಾರು? (ತಾಲ್ಲೂಕುವಾರು ವಿವರ ನೀಡುವುದು)

## ಮೈಸೂರು ಮತ್ತು ಚಾಮರಾಜನಗರಗಳಲ್ಲಿ ವಸತಿ ನಿರ್ಮಾಣ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೫ (೮೫೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ವಿವಿಧ ಯೋಜನೆಗಳಡಿಯಲ್ಲಿ ಎಷ್ಟು ವಸತಿಗಳನ್ನು ನಿರ್ಮಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ; ಎಷ್ಟು ಹಣ ಖರ್ಚಾಗದೇ ಉಳಿದಿದೆ ;

(ಇ) ಮನೆ ನಿರ್ಮಿಸಿಕೊಂಡವರಿಗೆ ಅವರ ಖಾತೆಗೆ ನೇರವಾಗಿ ಹಣ ಹಾಕಲಾಗುತ್ತಿದೆಯೇ ; ಅನುಸರಿಸುವ ವಿಧಾನವೇನು ;

(ಈ) ೨೦೧೭–೧೮ನೇ ಸಾಲಿನಲ್ಲಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ ; ಅದಕ್ಕಾಗಿ ಎಷ್ಟು ಅನುದಾನ ಒದಗಿಸಲು ಅಂದಾಜಿಸಲಾಗಿದೆ ?

## ರಾಜ್ಯ ಮಟ್ಟದಲ್ಲಿ ಕ್ರೀಡಾ ನೀತಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೬೪೬ (೮೯೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಮಟ್ಟದಲ್ಲಿ ಕ್ರೀಡಾ ನೀತಿಯೊಂದನ್ನು ಜಾರಿಗೆ ತರಲು ಇಲಾಖೆಗೆ ಇರುವ ತೊಂದರೆಗಳೇನು ; ಈ ಕ್ರೀಡಾ ನೀತಿ ಇಲ್ಲದೆ, ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹ ಸಿಗುತ್ತಿಲ್ಲವೆಂಬ ಆರೋಪವಿದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಕ್ರೀಡಾ ಇಲಾಖೆಯಿಂದ ಎಷ್ಟು ಅನುದಾನ ಬಿಡುಗಡೆ ಆಗಿದೆ ; (ವಿವರ ನೀಡುವುದು)

(ಇ) ಕ್ರೀಡಾ ಇಲಾಖೆಯಿಂದ ಯಾವ ಯಾವ ಉದ್ದೇಶಗಳಿಗಾಗಿ ಅನುದಾನ ನೀಡಲಾಗಿದೆ ? (ವಿವರ ನೀಡುವುದು)

## ಸಣ್ಣ ನೀರಾವರಿ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೬೪೭ (೮೯೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಣ್ಣ ನೀರಾವರಿ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳೆಷ್ಟು ; (ಕ್ಷೇತ್ರವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳಿಗೆ ವಿಧಾನಸಭೆ ಶಾಸಕರುಗಳ ಶಿಫಾರಸ್ಸುಗಳನ್ನು ಮಾತ್ರ ಪರಿಗಣಿಸಲಾಗಿದ್ದು, ವಿಧಾನ ಪರಿಷತ್ತಿನ ಸದಸ್ಯರುಗಳ ಶಿಫಾರಸ್ಸುಗಳನ್ನು ಪರಿಗಣಿಸದೇ ಇರಲು ಕಾರಣಗಳೇನು ;

(ಇ) ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಳ್ಳಲಾದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ವಿಳಂಬಗೊಳ್ಳುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಯಾವ ಯಾವ ಜಿಲ್ಲೆಗಳಲ್ಲಿ ವೆಂಟೆಡ್ ಡ್ಯಾಂಗಳ ಹಲಗೆಗಳನ್ನು ಬದಲಾಯಿಸದೆ ಇರುವುದರಿಂದ ನೀರು ಸಂಗ್ರಹಣೆ ಆಗದೇ ಇರುವ ವಿಷಯ ಇಲಾಖೆಯ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆ ಕೈಗೊಂಡ ಯೋಜನೆಗಳಲ್ಲಿ ಅವ್ಯವಹಾರ ಹಾಗೂ ಕಮೀಷನ್ ಪಡೆಯುತ್ತಾರೆಂಬ ಆರೋಪವಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ವಿಳಂಬಗೊಂಡಿರುವ ಕಾಮಗಾರಿ ಎಷ್ಟು ; ಪೂರ್ಣಗೊಂಡ ಕಾಮಗಾರಿಗಳೆಷ್ಟು ? (ವಿವರ ನೀಡುವುದು)

## ಮೂಲಗೇಣಿ ಮತ್ತು ಒಳಮೂಲಗೇಣಿದಾರರ ಮಾಲೀಕತ್ವದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೬೪೮ (೮೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿರುವ ಮೂಲಗೇಣಿ ಮತ್ತು ಒಳಮೂಲಗೇಣಿದಾರರಿಗೆ ಮಾಲೀಕತ್ವವನ್ನು ಪ್ರಧಾನ ಮಾಡುವ ಅಧಿನಿಯಮ ೨೦೧೧ ಕಾನೂನು ಜಾರಿಗೊಳಿಸಲಾಗಿದೆಯೇ ; ಈ ಅಧಿನಿಯಮದ ನಿಯಮಾವಗಳಿಗಳ ವಿವರ ಒದಗಿಸುವುದು ;

(ಆ) ಕರ್ನಾಟಕದಲ್ಲಿರುವ ಮೂಲಗೇಣಿ ಅಥವಾ ಒಳಮೂಲ ಗೇಣಿದಾರರಿಗೆ ಮಾಲಿಕತ್ವವನ್ನು ಪ್ರಧಾನ ಮಾಡುವ ಅಧಿನಿಯಮ ೨೦೧೧ ಕಾನೂನನ್ನು ಜಾರಿಗೆ ತರುವಲ್ಲಿ ಇಲಾಖೆಯ ಅಧಿಕಾರಿಗಳು ಭೂ ಮಾಲೀಕರೊಂದಿಗೆ ಶಾಮೀಲಾಗಿದ್ದಾರೆಂಬ ಬಲವಾದ ಆರೋಪವಿದ್ದು, ಈ ಬಗ್ಗೆ ತನಿಖೆ ನಡೆಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಇ) ೨೦೧೧ರಲ್ಲಿ ಕಾನೂನು ರಚನೆಗೊಂಡ ದಿನದಿಂದ ಈವರೆವಿಗೆ ಎಷ್ಟು ಅರ್ಜಿಗಳು ಸ್ವೀಕೃತಗೊಂಡಿವೆ ; ಎಷ್ಟು ಅರ್ಜಿಗಳನ್ನು, ಇತ್ಯರ್ಥಪಡಿಸಲಾಗಿದೆ ; ಇತ್ಯರ್ಥಪಡಿಸದೇ ಇದ್ದಲ್ಲಿ ಕಾರಣಗಳೇನು ; (ವಿವರ ನೀಡುವುದು)

(ಈ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಮೂಲಗೇಣಿದಾರರಿಗೆ ಮತ್ತು ಒಳಮೂಲಗೇಣಿದಾರರಿಗೆ ಕಾನೂನು ಅನ್ವಯಗೊಳಿಸಲಾಗಿದೆ; ಇವರುಗಳಿಂದ ಇದುವರೆವಿಗೆ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ೯೪ಸಿ, ೯೪ಸಿಸಿ ಅರ್ಜಿ ವಿಲೇವಾರಿಯಲ್ಲಿ ವಿಳಂಬ ಮತ್ತು ಗೋಮಾಳ, ಡೀಮ್ಡ್ ಫಾರೆಸ್ಟ್ ವಿರಹಿತ ಪಡಿಸಿ ಹಕ್ಕು ಪತ್ರ ಮಂಜೂರು ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೯ (೭೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೯೪ಸಿ ಯೋಜನೆ ಜಾರಿಗೆ ಬಂದು ೨ ೧/೨ ವರ್ಷ ಕಳೆದರೂ ಹಕ್ಕುಪತ್ರ ವಿತರಿಸದೇ ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಸ್ವೀಕೃತವಾದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನಸಭಾವಾರು ವಿವರ ನೀಡುವುದು)

(ಆ) ೯೪ಸಿ ಹಕ್ಕುಪತ್ರಕ್ಕೆ ಪಾವತಿಸಬೇಕಾದ ಶುಲ್ಕದ ನಿಗಧಿಗೆ ಇರುವ ನಿಯಮಗಳೇನು ; ಸರ್ಕಾರದ ಶುಲ್ಕ ಕಡಿತಗೊಳಿಸುವ ಆದೇಶ ಹೊರಡಿಸಿರುವುದರಿಂದ, ಈ ಹಿಂದೆ ಹೆಚ್ಚುವರಿ ವಸೂಲಾದ ಮೊತ್ತ ಅರ್ಜಿದಾರರಿಗೆ ಹಿಂದಿರುಗಿಸಲಾಗುವುದೇ ;

(ಇ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಮಂಜೂರಾದ ನಂತರ ಹಕ್ಕುಪತ್ರ ವಿತರಣೆ ಮಾಡಿದ ಮತ್ತು ಹಕ್ಕುಪತ್ರ ನೀಡಲು ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನ ಸಭಾವಾರು ವಿವರ ನೀಡುವುದು)

(ಈ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ತಿರಸ್ಕೃತವಾದ ಹಾಗೂ ತನಿಖೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನಸಭಾವಾರು ವಿವರ ನೀಡುವುದು)

(ಉ) ೯೪ಸಿ ಮತ್ತು ೯೪ಸಿಸಿ ಯಡಿ ಸಿ.ಆರ್.ಝಡ್., ಕುಮ್ಕಿ, ಗೋಮಾಳ, ಗೇರುಲೀಸ್, ಸಿ.ಎನ್.ಡಿ., ಡೀಮ್ಡ್ ಫಾರೆಸ್ಟ್ ವ್ಯಾಪ್ತಿಗೆ ಒಳಪಡುವ ಒಟ್ಟು ಪ್ರಕರಣಗಳೆಷ್ಟು ; ಸಿ.ಆರ್.ಝಡ್., ಕುಮ್ಕಿ, ಗೋಮಾಳ, ಗೇರುಲೀಸ್, ಸಿ.ಎನ್.ಡಿ., ಡೀಮ್ಡ್ ಫಾರೆಸ್ಟ್ ಸಹಿತ ಅಡೆತಡೆ ವಿರಹಿತ ಪಡಿಸಿ ಹಕ್ಕುಪತ್ರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಎಲ್ಲಾ ಅಡೆತಡೆಗಳನ್ನು ನಿವಾರಿಸಿ ಬಡವರಿಗೆ ಕಾಲಮಿತಿಯಲ್ಲಿ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಜಿಲ್ಲಾಧಿಕಾರಿ, ಸಹಾಯಕ ಕಮೀಷನರ್ ಮತ್ತು ತಹಶೀಲ್ದಾರರ ನ್ಯಾಯಾಲಯಗಳಲ್ಲಿ ಬಾಕಿ ಪ್ರಕರಣ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೦ (೬೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳ ನ್ಯಾಯಾಲಯ, ಸಹಾಯಕ ಕಮೀಷನರ್‌ಗಳ ನ್ಯಾಯಾಲಯ ಮತ್ತು ತಹಶೀಲ್ದಾರರ ನ್ಯಾಯಾಲಯದಲ್ಲಿ ಬಾಕಿ ಇರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಹೀಗೆ ಬಾಕಿ ಇರುವ ಪ್ರಕರಣಗಳಲ್ಲಿ ೨೦ ವರ್ಷಕ್ಕಿಂತ ಹಿಂದಿನ ಪ್ರಕರಣಗಳು, ೧೦ ವರ್ಷಕ್ಕಿಂತ ಹಿಂದಿನ ಪ್ರಕರಣಗಳು ಮತ್ತು ೫ ವರ್ಷಗಳ ಹಿಂದಿನ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಈ ಮೇಲಿನ ನ್ಯಾಯಾಲಯಗಳಲ್ಲಿ ಅನೇಕ ಪ್ರಕರಣಗಳು ಅತೀ ವಿಳಂಬವಾಗಿ ವಿಲೇವಾರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ನ್ಯಾಯಾಲಯದಲ್ಲಿ ಅತೀಯಾದ ವಿಳಂಬವು ನ್ಯಾಯ ನಿರಾಕರಣೆಗೆ ಸಮನಾದಂತೆ ಎಂಬುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಉ) ಹೀಗೆ ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳ ನ್ಯಾಯಾಲಯ, ಸಹಾಯಕ ಕಮೀಷನರ್‌ಗಳ ನ್ಯಾಯಾಲಯ ಮತ್ತು ತಹಶೀಲ್ದಾರರ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಯಾವ ಕಾಲಮಿತಿಯಲ್ಲಿ ವಿಲೇವಾರಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ?

## ನಿವೇಶನ ಮತ್ತು ವಸತಿ ಹಂಚಿಕೆಯಲ್ಲಿನ ತೊಡಕುಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೧ (೬೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಯಡಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದರೊಂದಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಆ) ವಸತಿ ಯೋಜನೆಯಡಿ ಕಳೆದ ೫ ವರ್ಷಗಳಲ್ಲಿ ಫೋಟೋ ಆಡಿಟ್ ಸೇರಿದಂತೆ ವಿವಿಧ ಕಾರಣ ನೀಡಿ ಅನುದಾನ ತಡೆಹಿಡಿಯಲಾದ ಮನೆಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದರೊಂದಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ನೀಡಿದ ನಿವೇಶನಗಳ ಸಂಖ್ಯೆ ಎಷ್ಟು ;

(ವರ್ಷವಾರು, ಜಿಲ್ಲಾವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದರೊಂದಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು) ಜಿಲ್ಲಾವಾರು ನಿವೇಶನ ರಹಿತರ ಸಂಖ್ಯೆ ಎಷ್ಟು ;

(ಈ) ರಾಜ್ಯದಲ್ಲಿ ವಸತಿ ರಹಿತ ವಿಧವೆಯರು, ಅಂಗವಿಕಲರು ಸೇರಿದಂತೆ ವಿಶೇಷ ವರ್ಗದಡಿ ಹಾಗೂ ಗ್ರಾಮ ಪಂಚಾಯತ್ ವ್ಯಾಪ್ತಿಯಡಿ ಸರ್ಕಾರದಿಂದ ನಿವೇಶನ ರಹಿತರಿಗೆ ಒದಗಿಸಿರುವ ನಿವೇಶನಗಳ ಸಂಖ್ಯೆಗನುಗುಣವಾಗಿ ಸಂಪೂರ್ಣವಾಗಿ ಬೇಡಿಕೆಗೆ ತಕ್ಕಂತೆ ಸೂರು ಕಲ್ಪಿಸಲು ಸರ್ಕಾರದಿಂದ ಮನೆ ಮಂಜೂರು ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರ ಯಾವ ಹಂತದಲ್ಲಿ ಕ್ರಮ ಕೈಗೊಳ್ಳಲಿದೆ ;

(ಉ) ಉಡುಪಿ, ದಕ್ಷಿಣ ಕನ್ನಡ ಸೇರಿದಂತೆ ೫ ಜಿಲ್ಲೆಗಳಲ್ಲಿ ೧೫ ವರ್ಷಗಳಿಂದ ಸರ್ಕಾರಿ ಜಾಗದಲ್ಲಿ ವಾಸಿಸುವ ವಸತಿ ರಹಿತರಿಗೆ ವಸತಿ ಯೋಜನೆಯಡಿ ಮನೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸುವ ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು) ಸದರಿ ಆದೇಶ ಸಮರ್ಪಕವಾಗಿ ಅನುಷ್ಠಾನವಾಗುವುದಕ್ಕೆ ಅವಕಾಶ ನೀಡದೇ ಇರುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ವರಾಹಿ ಎಡದಂಡೆ ಏತ ನೀರಾವರಿ ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನ ಮಾಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೨ (೭೪೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಮಾನ್ಯ ಮುಖ್ಯಮಂತ್ರಿಗಳು ವರಾಹಿ ಎಡದಂಡೆ ಯೋಜನೆಗೆ ಶಂಕು ಸ್ಥಾಪನೆ ಮಾಡಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ;

(ಆ) ಮಾನ್ಯ ಮುಖ್ಯಮಂತ್ರಿಗಳು ಯಾವಾಗ ಶಂಕುಸ್ಥಾಪನೆ ಮಾಡಿರುತ್ತಾರೆ; ಯೋಜನೆಯ ಒಟ್ಟು ಅಂದಾಜು ಮೊತ್ತವೆಷ್ಟು; ಒಟ್ಟು ಎಷ್ಟು ಗ್ರಾಮ–ಎಷ್ಟು ಪ್ರದೇಶಗಳಿಗೆ ನೀರನ್ನು ಒದಗಿಸುವ ಉದ್ದೇಶವಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸಿದ್ದಾಪುರದಲ್ಲಿರುವ ಉಪ–ನೀರಾವರಿ ಇಲಾಖೆಯ ಅಧಿಕಾರಿಗಳು ಸದರಿ ಕಾಮಗಾರಿ ಅನುಷ್ಠಾನಕ್ಕೆ ತಾಂತ್ರಿಕ, ಮಂಜೂರಾತಿ ಪಡೆಯಲು ಪ್ರಯತ್ನಿಸುತ್ತಿದ್ದು, ಶಿವಮೊಗ್ಗದ ಅಧೀಕ್ಷಕರು ಇಂಜಿನಿಯರ್ ವಿಭಾಗ ಇವರು ಯಾರದ್ದೋ ಒತ್ತಡಕ್ಕೆ ಮಣಿದು, ಟೆಂಡರ್ ಪ್ರಕ್ರಿಯೆಗೆ ಅಡ್ಡಗಾಲು ಹಾಕಿ, ಕಾಮಗಾರಿ ವಿಳಂಬಕ್ಕಾಗಿ ಕಾಲ ಹರಣ ಮಾಡುತ್ತಿರುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಈ) ಮುಂದಿನ ಚುನಾವಣಾ ನೀತಿ ಸಂಹಿತೆ ಜಾರಿಯಾಗುವುದಕ್ಕೆ ಮುಂಚೆ ೨,೭೨೩ ಹೆಕ್ಟೇರಿಗೂ ಹೆಚ್ಚು ನೀರು ಒದಗಿಸುವ ವರಾಹಿ ಎಡದಂಡೆ ಏತ ನೀರಾವರಿ ಯೋಜನೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಚವಿ ಏತ ನೀರಾವರಿ ಯೋಜನೆಯ ವಿಳಂಬದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೩ (೬೫೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸೊರಬ ತಾಲ್ಲೂಕಿನ ಕಚವಿ ಏತ ನೀರಾವರಿ ಯೋಜನೆಯನ್ನು ಕೈಗೆತ್ತಿಕೊಳ್ಳದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಯೋಜನೆಗೆ ಯಾವ ವರ್ಷದ ಆಯವ್ಯಯದಲ್ಲಿ ಅನುದಾನ ನೀಡಲಾಗಿದೆ ; ಮತ್ತು ಯಾವಾಗ ಚಾಲನೆ ನೀಡಲಾಗಿದೆ ; ಈ ಯೋಜನೆಯ ಉದ್ದೇಶವೇನು ;

(ಇ) ಇದಕ್ಕೆ ಬಿಡುಗಡೆಯಾದ ಅನುದಾನವೆಷ್ಟು ; ಕಾಮಗಾರಿ ಇದುವರೆವಿಗೂ ಪ್ರಾರಂಭಿಸದಿರಲು ಕಾರಣವೇನು ; ಯೋಜನೆಗೆ ಸಂಬಂಧಿಸಿದ ಎಲ್ಲಾ ಆದೇಶದ ಪ್ರತಿಗಳನ್ನು ಒದಗಿಸುವುದು ;

(ಈ) ಯೋಜನೆಯ ಸರ್ವೆ ಕಾರ್ಯ, ಅಂದಾಜು, (ಎಸ್ಟಿಮೇಟ್) ಸ್ಕೆಚ್ ಮತ್ತು ಡಿ.ಪಿ.ಆರ್. ತಯಾರಿಸಲಾಗಿದೆಯೇ ; ಇದ್ದಲ್ಲಿ, ಯಾವಾಗ ತಯಾರಿಸಲಾಗಿರುತ್ತದೆ ; ಕಾಮಗಾರಿ ಈಗ ಯಾವ ಹಂತದಲ್ಲಿದೆ ; ಒಟ್ಟಾರೆಯಾಗಿ ಯೋಜನೆಗೆ ಸಂಬಂಧಿಸಿದ ಪೂರ್ಣ ಮಾಹಿತಿ ಒದಗಿಸುವುದು ;

(ಉ) ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು ? (ಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೪ (೬೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ಖಾಲಿ ಇರುವ ಭೂಮಾಪಕರ ಹುದ್ದೆಗಳ ಮಾಹಿತಿ ನೀಡುವುದು ;

(ಆ) ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಯಾವಾಗ ಅರ್ಜಿಯನ್ನು ಆಹ್ವಾನಿಸಲಾಗಿತ್ತು ; (ವಿವರ ನೀಡುವುದು)

(ಇ) ಭೂ ಮಾಪಕರಿಲ್ಲದೆ ಪೋಡಿ ಪ್ರಕರಣಗಳು, ಹಕ್ಕು ಬದಲಾವಣೆ, ಇತರೆ ಕೆಲಸಗಳಿಗೆ ತೊಂದರೆಯಾಗಿ ರೈತರು ಮತ್ತು ಸಾರ್ವಜನಿಕರು ಸಂಕಷ್ಟಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಪೋಡಿ ಮಾಡಲು ಬಾಕಿ ಇರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಪೋಡಿ ಮುಕ್ತ ಜಿಲ್ಲೆಗಳನ್ನಾಗಿ ಮಾಡುವುದಾಗಿ ಹಿಂದಿನ ಮತ್ತು ಇಂದಿನ ಮಾನ್ಯ ಕಂದಾಯ ಸಚಿವರು ಹೇಳಿಕೆ ನೀಡಿರುವುದರಿಂದ ಇಲ್ಲಿಯ ತನಕ ರಾಜ್ಯದ ಯಾವ ಯಾವ ಜಿಲ್ಲೆಗಳನ್ನು ಪೋಡಿ ಮುಕ್ತ ಜಿಲ್ಲೆಯನ್ನಾಗಿ ಮಾಡಲಾಗಿದೆ ; (ವಿವರ ನೀಡುವುದು)

(ಊ) ಬಾಕಿ ಇರುವ ಪೋಡಿ ಪ್ರಕರಣಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ? (ಸ್ಪಷ್ಟ ವಿವರ ನೀಡುವುದು)

## ಮೀನುಗಾರಿಕೆ ಇಲಾಖೆಗೆ ಕಳೆದ ೨ ವರ್ಷಗಳಲ್ಲಿ ನೀಡಿರುವ ಅನುದಾನದ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೫೫ (೬೫೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಗೆ ಸರ್ಕಾರದಿಂದ ನೀಡಿರುವ ಅನುದಾನವೆಷ್ಟು;

(ಆ) ಈ ಅನುದಾನವನ್ನು ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ರಾಜ್ಯದ ಎಷ್ಟು ಕೆರೆಗಳಲ್ಲಿ ಮೀನುಗಾರಿಕೆ ಇಲಾಖೆಯಿಂದ ಮೀನು ಸಾಕಾಣಿಕೆ ಮಾಡಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಮೀನು ಸಾಕಾಣಿಕೆಗಾಗಿ ಖರ್ಚು ಮಾಡಿರುವ ಹಣವೆಷ್ಟು; ಹಾಗೂ ಇದರಿಂದ ಇಲಾಖೆಗೆ ಬಂದಿರುವ ಆದಾಯವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಊ) ತುಮಕೂರು ಜಿಲ್ಲೆಯಲ್ಲಿರುವ ಬೆಸ್ತ ಜನಾಂಗದ ಸಂಖ್ಯೆ ಎಷ್ಟು; ಇವರಿಗೆ ಇಲಾಖೆ ವತಿಯಿಂದ ನೀಡಿರುವ ಸೌಲಭ್ಯಗಳ ವಿವರ ನೀಡುವುದು ?

## ಅರಣ್ಯ ಇಲಾಖೆಯಿಂದ ರೈತರಿಗೆ ನೀಡಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೬೫೬ (೬೫೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅರಣ್ಯದಂಚಿನಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ಮತ್ತು ವ್ಯವಸಾಯ ಮಾಡುತ್ತಿರುವ ರೈತರಿಗೆ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ನೀಡಿರುವ ವಿವಿಧ ಸೌಲಭ್ಯಗಳೇನು ; (ವಿವರ ನೀಡುವುದು)

(ಆ) ಇಂತಹವರನ್ನು ಗುರುತಿಸಿ, ರಾಜ್ಯದಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಒದಗಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಸೌಲಭ್ಯಗಳನ್ನು ನೀಡಲು ಸರ್ಕಾರ ಕಳೆದ ೨ ವರ್ಷಗಳಲ್ಲಿ ಖರ್ಚು ಮಾಡಿರುವ ಹಣವೆಷ್ಟು; ಹಾಗೂ ಇದಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರ ಒದಗಿಸಿದ ಅನುದಾನವೆಷ್ಟು; (ವಿವರ ನೀಡುವುದು)

(ಈ) ೨೦೧೭–೧೮ನೇ ಸಾಲಿನಲ್ಲಿ ಈ ಯೋಜನೆಗೆ ಸರ್ಕಾರ ಒದಗಿಸಿರುವ ಅನುದಾನವೆಷ್ಟು; ಒದಗಿಸಿದ ಅನುದಾನದಲ್ಲಿ ಈಗಾಗಲೇ ಖರ್ಚು ಮಾಡಿರುವ ಹಣವೆಷ್ಟು; (ವಿವರ ನೀಡುವುದು)

(ಉ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗಿದೆ ? (ತಾಲ್ಲೂಕೂವಾರು ವಿವರ ನೀಡುವುದು)

## ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನಲ್ಲಿ ಹುಲಿ ಸಂರಕ್ಷಣೆ ಅಭಯಾರಣ್ಯ ಘೋಷಣೆ ಮಾಡುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೫೭ (ಲಿಖಿಳ) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಬೆಳಗಾವಿ ಜಿಲ್ಲೆ, ಖಾನಾಪೂರ ತಾಲ್ಲೂಕಿನ ಪಶ್ಚಿಮಘಟ್ಟ ಪ್ರದೇಶದಲ್ಲಿ ಹುಲಿ ಸಂರಕ್ಷಣೆಗೆಂದು ಆಭಯಾರಣ್ಯವನ್ನು ಘೋಷಣೆ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಸದರಿ ಅಭಯಾರಣ್ಯವೆಂದು ಘೋಷಿಸಿರುವ ಪ್ರದೇಶದ ಒಟ್ಟು ವಿಸ್ತೀರ್ಣವೆಷ್ಟು ;

(ಇ) ಈ ಅಭಯಾರಣ್ಯ ಪ್ರದೇಶದಲ್ಲಿ ಒಟ್ಟು ಎಷ್ಟು ಗ್ರಾಮಗಳು, ಎಷ್ಟು ಸಣ್ಣ ಪುಟ್ಟ ಹಳ್ಳಿಗಳು ಎಷ್ಟು ಚಿಕ್ಕ ಚಿಕ್ಕ ಜನ ವಸತಿ ಪ್ರದೇಶಗಳು ಬರುತ್ತವೆ ; ಅವು ಯಾವುವು ;

(ಈ) ಸದರಿ ಪ್ರದೇಶದ ವ್ಯಾಪ್ತಿಯು ಎಷ್ಟು ಜನ ಸಂಖ್ಯೆಯನ್ನು ಹೊಂದಿದೆ ; ಇವರ ಸುರಕ್ಷತೆಗಾಗಿ ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ;

(ಉ) ಸದರಿ ಅಭಯಾರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳನ್ನು ಸ್ಥಳಾಂತರಿಸುವ ಯೋಜನೆ ಸರ್ಕಾರಕ್ಕಿದೆಯೇ ; ಇವರಿಗೆಲ್ಲಾ ಪುನ:ರ್ವಸತಿಯನ್ನು ರೂಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಊ) ಹಾಗಿದ್ದಲ್ಲಿ, ಅದಕ್ಕೆ ಎಲ್ಲಿ ಸ್ಥಳ ಗುರುತಿಸಲಾಗಿದೆ ; ಅವರಿಗೆಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ವಿವರ ಒದಗಿಸುವುದು)

## ಉತ್ತರ ಕರ್ನಾಟಕ ಬಹುತೇಕ ಏತ ನೀರಾವರಿ / ಕೆರೆ ತುಂಬಿಸುವ ಯೋಜನೆಗಳು ಪೂರ್ಣಗೊಳ್ಳದೆ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳಿಯ ಸಂಸ್ಥೆಗಳ ಕ್ಷೇತ್ರ):–**

೭೫೮ (೮೩೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಹಳ್ಳಿಗಳಿಗೆ ಕುಡಿಯುವ ನೀರಿಗೆ ಮತ್ತು ಕೃಷಿಗೆ ನೀರು ಪೂರೈಸಲು ಪ್ರಾರಂಭವಾದ ಬಹುತೇಕ ಏತ ನೀರಾವರಿ ಮತ್ತು ಕೆರೆಗಳ ನೀರು ತುಂಬಿಸುವ ಯೋಜನೆಗಳು ಇನ್ನೂ ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸನ್ ೨೦೧೩-೧೪ ರಿಂದ ೨೦೧೭-೧೮ ನೇ ಸಾಲಿನ ಅವಧಿಯಲ್ಲಿ ಸರ್ಕಾರ ೫,೮೪೫.೭ ಕೋಟಿ ರೂ.ವೆಚ್ಚ ಮಾಡಿದ್ದರೂ ಕೆರೆ ತುಂಬುವ ಯೋಜನೆಗಳು, ಏತ ನೀರಾವರಿ ಯೋಜನೆಗಳು ಅಧಿಕೃತವಾಗಿ ಕಾರ್ಯಾರಂಭ ಮಾಡದೇ ಇರಲು ಕಾರಣಗಳೇನು ;

(ಇ) ಸದರಿ ನೀರಾವರಿ ಯೋಜನೆಗಳು ಯಾವಾಗ ಅಧಿಕೃತವಾಗಿ ಪೂರ್ಣಗೊಂಡು ಈ ಭಾಗದ ಜನರು ಬಹು ನಿರೀಕ್ಷಿತ ನೀರಾವರಿ ಸೌಲಭ್ಯಗಳು ಇವರಿಗೆ ಲಭ್ಯವಾಗುವುದು ;

(ಈ) ಹುಕ್ಕೇರಿಯ ತಾಲ್ಲೂಕಿನ ೧೮ ಕೆರೆಗಳು, ಚಿಕ್ಕೋಡಿ ತಾಲ್ಲೂಕಿನ ೪ ಕೆರೆಗಳು, ರಾಯಭಾಗ ತಾಲ್ಲೂಕಿನ ೩೯ ಕೆರೆಗಳು ಬೈಲಹೊಂಗಲ ವಿಧಾನಸಭಾ ಕ್ಷೇತ್ರದ ೬೪ ಕೆರೆಗಳ ಕೆರೆ ತುಂಬುವ ಯೋಜನೆಗಳು ಅರ್ಧದಲ್ಲಿಯೇ ಮೊಟಕುಗೊಳ್ಳಲು ಕಾರಣಗಳೇನು ; (ವಿವರ ನೀಡುವುದು)

(ಉ) ಸದರಿ ನೀರಾವರಿ ಯೋಜನೆಗಳು ಯಾವ ಕಾಲಮಿತಿಯಲ್ಲಿ ಮತ್ತೆ ಆರಂಭವಾಗಿ, ಯಾವಾಗ ಪೂರ್ಣಗೊಳ್ಳಲಿವೆ ?

## ಯುವ ಜನತೆಗೆ ಸರ್ಕಾರ ನೀಡಿರುವ ಪ್ರೋತ್ಸಾಹ ಹಾಗೂ ಸವಲತ್ತುಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೫೯ (೯೦೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಕಳೆದ ೫ ವರ್ಷದಲ್ಲಿ ಯುವಕರಿಗೆ ನೀಡಿರುವ ಪ್ರೋತ್ಸಾಹಗಳೇನು ;

(ಆ) ಯುವಕರು ಅನೇಕ ಬೇಡಿಕೆಗಳನ್ನು ಇಟ್ಟಿದ್ದರೂ ಸ್ಪಂದಿಸದಿರಲು ಕಾರಣಗಳೇನು ;

(ಇ) ಯುವಕರಿಗೆ ಈ ಇಲಾಖೆಯಿಂದ ಯಾವ ಯಾವ ಸವಲತ್ತುಗಳು ನೀಡಲಾಗುವುದು ;

(ಈ) ಈ ವರ್ಷ ಕೆಲವು ಕಡೆ ಜಿಮ್ ಹಾಗೂ ಗರಡಿ ಮನೆ ನೀಡುವಂತೆ ಬೇಡಿಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವಾಗ ನೀಡಲಾಗುವುದು ?

## ಬಡ ನೇಕಾರರಿಗೆ ಕಾರ್ಮಿಕ ಇಲಾಖೆಯಿಂದ ನೀಡಿರುವ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೬೦ (೯೧೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ಅತಿ ಹೆಚ್ಚು ಬಡ, ಕೂಲಿ, ಸಂಘಟಿತ, ಅಸಂಘಟಿತ, ನೇಕಾರರು, ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೫ ವರ್ಷದಲ್ಲಿ ಈ ಬಡ ನೇಕಾರರಿಗೆ ಕಾರ್ಮಿಕ ಇಲಾಖೆ ನೀಡಿರುವ ಯೋಜನೆಗಳು ಯಾವುವು : (ವಿವರ ನೀಡುವುದು)

(ಇ) ನೇಕಾರರ ಬೇಡಿಕೆಗಳೇನು ; ಕೌಶಲ್ಯ ಅಭಿವೃದ್ಧಿ, ಉದ್ಯಮ ಶೀಲತೆ, ಯಂತ್ರ ಜೀವನ, ಈ ಯೋಜನೆಗಳನ್ನು ಯಾವ ರೀತಿ ಪ್ರಚಾರ ಮಾಡಲಾಗಿದೆ ; (ವಿವರ ನೀಡುವುದು)

(ಈ) ಈ ವರ್ಷ ಬಡ ನೇಕಾರರಿಗೆ ತೆಗೆದುಕೊಂಡಿರುವ ಯೋಜನೆಗಳು ಯಾವುವು ; ಈ ಬಗ್ಗೆ ಯಾವ ರೀತಿ ಪ್ರಚಾರ ಕೈಗೊಳ್ಳಲಾಗಿದೆ ?

## ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೬೧ (೯೧೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಗೆ ಹಿಡಕಲ್ ಜಲಾಶಯದಿಂದ ಕುಡಿಯುವ ನೀರಿನ ಯೋಜನೆ ಯಾವಾಗಿನಿಂದ ಪ್ರಾರಂಭಿಸಲಾಯಿತು ;

(ಆ) ಯೋಜನೆ ಮಾಡುವಾಗ ಪಿರನವಾಡಿ ಪಂಚಾಯ್ತಿ ಮಚ್ಚೆ ಪಂಚಾಯ್ತಿಗಳನ್ನು ಬಿಟ್ಟು ಮಾಡಲು ಕಾರಣವೇನು ;

(ಇ) ಜನರ ಬೇಡಿಕೆಗೆ ಸ್ಪಂದಿಸಿ ಕುಡಿಯುವ ನೀರಿಗೆ ಪರಿಹಾರ ಮಾಡಲು ಸೂಕ್ತ ನಿರ್ಧಾರ ಮಾಡಲಾಗುವುದೇ ;

(ಈ) ಹಾಲಿ ಹೋಗಿರುವ ಪೈಪ್ ಲೈನ್‌ನಲ್ಲಿ ಮಚ್ಚೆ ಮತ್ತು ಪಿರನವಾಡಿ ಪಂಚಾಯ್ತಿಯ ಜನರಿಗೆ ನೀರು ಕೊಡಲು ಸರ್ಕಾರ ಮುಂದಾಗುವುದೇ ?

## ಅಕ್ರಮ ಸಕ್ರಮಕ್ಕೆ ಬಂದಿರುವ ಅರ್ಜಿಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೬೨ (೯೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಅಕ್ರಮ ಸಕ್ರಮಕ್ಕೆ ಬಂದಿರುವ ಅರ್ಜಿಗಳು ಎಷ್ಟು ; ಯಾವುವು ;

(ಆ) ಇದುವರೆಗೂ ಸಕ್ರಮ ಮಾಡಿರುವ ಅರ್ಜಿಗಳೆಷ್ಟು ; ಉಳಿದಿರುವ ಅರ್ಜಿಗಳ ಬಗ್ಗೆ ಮಾಹಿತಿ ನೀಡುವುದು ;

(ಇ) ಅರ್ಜಿಗಳು ಸಮರ್ಪಕವಾಗಿದ್ದರೂ, ತಿರಸ್ಕಾರ ಮಾಡಿರುವ ಪ್ರಕರಣಗಳು ಎಷ್ಟು ; ಕಾರಣ ತಿಳಿಸುವುದು ;

(ಈ) ಉಳಿದಿರುವ ಅರ್ಜಿಗಳನ್ನು ಎಷ್ಟು ದಿನಗಳಲ್ಲಿ ಪೂರ್ಣ ಮಾಡಲಾಗುವುದು ?

## ಸಾರ್ವಜನಿಕ ರಸ್ತೆಯಲ್ಲಿರುವ ಮರ ತೆರವುಗೊಳಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೬೩ (೯೦೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಬರುವ, ಪಿರನವಾಡಿ ಗ್ರಾಮ ಪಂಚಾಯತಿಯಲ್ಲಿ ಸಾರ್ವಜನಿಕ ರಸ್ತೆಯಲ್ಲಿ ಮರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಮರವನ್ನು ತೆಗೆದುಹಾಕಿ ರಸ್ತೆ ಮಾಡಲು ಸರ್ಕಾರ ಅನುದಾನ ನೀಡಿದ್ದರೂ ಮರ ತೆಗೆಯದೆ ಇರಲು ಕಾರಣವೇನು ;

(ಇ) ಕೂಡಲೇ ಮರವನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ರಸ್ತೆ ಮಾಡಿ ಅನುಕೂಲ ಮಾಡಿ ಕೊಡಲಾಗುವುದೇ ;

(ಈ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಮಾಡಲಾಗುವುದು ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಆನೆಗಳ ದಾಳಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೬೬೪ (೮೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ಭಾಗದಲ್ಲಿ ಆನೆಗಳ ದಾಳಿ ಆಗಾಗ ನಡೆಯುತ್ತಿರುತ್ತದೆ ;

(ಆ) ಆನೆಗಳ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; ಅವರಿಗೆ ನೀಡಿದ ಪರಿಹಾರ ಧನ ಎಷ್ಟು ; ಉಂಟಾದ ಬೆಳೆ ನಷ್ಟ ಎಷ್ಟು ; ಬೆಳೆ ನಷ್ಟ ಉಂಟಾದ ರೈತರಿಗೆ ಪರಿಹಾರ ನೀಡಲಾಗಿದೆಯೇ ;

(ಇ) ಆನೆಗಳ ಹಾವಳಿಯನ್ನು ನಿಯಂತ್ರಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಲಕರಣೆ ಮತ್ತು ಸೌಲಭ್ಯಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೫ (೮೬೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕ್ರೀಡಾಪಟುಗಳಿಗೆ ಸರಿಯಾದ ರೀತಿಯಲ್ಲಿ ಸಲಕರಣೆಗಳು ಮತ್ತು ಸೌಲಭ್ಯಗಳು ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತರಬೇತುದಾರರಿಗೆ ಮೂಲ ಸೌಲಭ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾದ ಮನೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೬ (೮೬೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷದಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ವಸತಿ ಇಲಾಖೆಯಿಂದ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ;

(ಆ) ನಿರ್ಮಾಣವಾದ ಮನೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಮೀನುಗಾರರ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೬೬೭ (೮೨೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೀನುಗಾರರ ಅಭಿವೃದ್ಧಿಗೆ ಹಲವಾರು ಯೋಜನೆಗಳು ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂತಹ ಯೋಜನೆಗಳು ಯಾವುವು ; ಯೋಜನೆಯ ಅನುಕೂಲ ಪಡೆಯಲು ಅನುಸರಿಸಬೇಕಾದ ಮಾನದಂಡಗಳೇನು ; (ವಿವರ ನೀಡುವುದು)

(ಇ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಈ ಯೋಜನೆಗಳಿಗೆ ರಾಜ್ಯ ಸರ್ಕಾರ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು? (ಸಂಪೂರ್ಣ ವಿವರವನ್ನು ಯೋಜನಾವಾರು, ವರ್ಷಾವಾರು ಹಾಗೂ ಫಲಾನುಭವಿಗಳ ಸಂಖ್ಯೆ ಸಹಿತ ನೀಡುವುದು)

## ಯುವ ಸಬಲೀಕರಣದ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೬೬೮ (೮೩೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಯುವ ಸಬಲೀಕರಣಕ್ಕಾಗಿ ವಿವಿಧ ಯೋಜನೆಗಳನ್ನು ರೂಪಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂತಹ ಯೋಜನೆಗಳು ಯಾವುವು ; ಯೋಜನೆಯ ಪ್ರಯೋಜನ ಪಡೆಯಲು ಇರುವ ಮಾನದಂಡಗಳೇನು ; (ಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಗಳಿಗೆ ೨೦೧೩–೧೪ ರಿಂದ ೨೦೧೭–೧೮ ರವರೆಗೆ ಸರ್ಕಾರ ನಿಗಧಿಪಡಿಸಿದ ಮತ್ತು ಖರ್ಚು ಮಾಡಿದ ಹಣದ ಮೊತ್ತ ಎಷ್ಟು? (ಯೋಜನಾವಾರು, ವರ್ಷಾವಾರು ಹಾಗೂ ಫಲಾನುಭವಿಗಳ ಸಂಖ್ಯೆ ಸಹಿತ ವಿವರ ನೀಡುವುದು)

## ಸರ್ಕಾರಿ ಜಮೀನುಗಳ ಒತ್ತುವರಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೬೬೯ (೮೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಜಮೀನುಗಳ ಒತ್ತುವರಿ ಆಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳ ಸರ್ವೆ ಕಾರ್ಯವನ್ನು ಸರ್ಕಾರದಿಂದ ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಒತ್ತುವರಿಯಾಗಿರುವ ಜಮೀನಿನ ಒಟ್ಟು ವಿಸ್ತೀರ್ಣ ಎಷ್ಟು ; ಇದುವರೆವಿಗೆ ಸರ್ಕಾರ ಎಷ್ಟು ವಿಸ್ತೀರ್ಣದ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ತೆರವಿಗೆ ಬಾಕಿಯಿರುವ ಒತ್ತುವರಿಯಾದ ಸರ್ಕಾರಿ ಜಮೀನನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಬೆಂಗಳೂರು ವ್ಯಾಪ್ತಿಯಲ್ಲಿನ ರಾಜಕಾಲುವೆ, ಕೆರೆಗಳು ಮತ್ತು ಬಫರ್ ಜೋನ್ ಪ್ರದೇಶಗಳನ್ನು ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವವರ ವ್ಯಕ್ತಿಗಳ / ಸಂಸ್ಥೆಗಳ ವಿವರ ಮತ್ತು ಒತ್ತುವರಿ ವಿಸ್ತೀರ್ಣದ ವಿವರಗಳನ್ನು ಒದಗಿಸುವುದು ; ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮಾನ್ಯ ಸುಪ್ರೀಂ ಕೋರ್ಟ್‌ಗೆ ಡೀಮ್ಡ್ ಫಾರೆಸ್ಟ್ ಕುರಿತಾಗಿ ಸಲ್ಲಿಸಲಾದ ವಿವರಗಳು ಹಾಗೂ ಅರ್ಜಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೦ (೮೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ಯ ಸುಪ್ರೀಂ ಕೋರ್ಟ್‌ಗೆ ಡೀಮ್ಡ್ ಫಾರೆಸ್ಟ್‌ನ ಬಗ್ಗೆ ಯಾವಾಗ ಮಧ್ಯಂತರ ಅರ್ಜಿಗಳನ್ನು ಸಲ್ಲಿಸಲಾಯಿತು ; ಅರ್ಜಿಯ ಪ್ರತಿಯನ್ನು ಒದಗಿಸುವುದು ; ಸುಪ್ರೀಂ ಕೋರ್ಟ್‌ಗೆ ಸಲ್ಲಿಸಲಾದ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಡೀಮ್ಡ್ ಫಾರೆಸ್ಟ್‌ಗೆ ಒಳಪಟ್ಟ ವಿವರಗಳ ಪಟ್ಟಿಯ ಪ್ರತಿಗಳನ್ನು ಒದಗಿಸುವುದು ;

(ಆ) ಅಂದಿನಿಂದ ಇಲ್ಲಿಯ ತನಕ, ಸುಪ್ರೀಂ ಕೋರ್ಟ್‌ಗೆ, ಡೀಮ್ಡ್ ಫಾರೆಸ್ಟ್‌ನ್ನು ತೆರವುಗೊಳಿಸಲು ವಿರಹಿತಗೊಳಿಸಲು ಅಥವಾ ಸ್ಥಿರಗೊಳಿಸಲು ಸಲ್ಲಿಸಲಾದ ಮಧ್ಯಂತರ ಅರ್ಜಿಗಳ, ಅಫಿಡವಿಟ್‌ಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಪ್ರತಿಗಳನ್ನು ಒದಗಿಸುವುದು)

(ಇ) ಕುಮ್ಕಿ ಸ್ಥಳವು ಅರಣ್ಯ ಭೂಮಿ ಎನ್ನುವಂತಹ ಸುಪ್ರೀಂ ಕೋರ್ಟಿನ ಆದೇಶ ಯಾ ಇತರೆ ಯಾವುದೇ ಆದೇಶವಿದೆಯೇ ; ಪ್ರತಿ ಒದಗಿಸುವುದು ಮತ್ತು ರಾಜ್ಯ ಸರ್ಕಾರದ ಅಧಿಸೂಚನೆ ಇದೆಯೇ ; ಪ್ರತಿ ಒದಗಿಸುವುದು ;

(ಈ) ಅಕ್ರಮ–ಸಕ್ರಮದ ನಮೂನೆ ೫೩ರಲ್ಲಿ ಕೊಟ್ಟ ಅರ್ಜಿಗಳನ್ನು ಕುಮ್ಕಿ ಅರಣ್ಯ ಎಂಬ ಕಾರಣದಿಂದ ತಡೆಹಿಡಿದಿರುವುದು ನಿಜವೇ ; ಮತ್ತು ಈ ಕ್ರಮವು ಸರಿಯಾದುದೇ ; ಸರಿಯಾಗಿದ್ದಲ್ಲಿ, ಸ್ಪಷ್ಟೀಕರಣ ನೀಡುವುದು ?

## ವಾರಹಿ ನೀರಾವರಿ ಯೋಜನೆಯಲ್ಲಿ ಅಪೂರ್ಣಗೊಂಡಿರುವ ಕಾಮಗಾರಿಗಳು ಮತ್ತು ತೆಗೆದುಕೊಂಡ ಕ್ರಮದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೧ (೮೮೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾರಾಹಿ ನೀರಾವರಿ ಯೋಜನೆಯಲ್ಲಿ ಅಪೂರ್ಣಗೊಂಡ ಕಾಮಗಾರಿಗಳು ಯಾವುವು ; ಮತ್ತು ಅವುಗಳ ಗುತ್ತಿಗೆದಾರರು ಯಾರು ; (ಕಾಮಗಾರಿವಾರು ವಿವರ ನೀಡುವುದು)

(ಆ) ಅಪೂರ್ಣಗೊಂಡ ಕಾಮಗಾರಿಗಳ ಪ್ರಥಮ ಕರಾರು ಪತ್ರ ಹಾಗೂ ನಂತರದ ಕರಾರು ಪತ್ರಗಳ ವಿವರಗಳಾವುವು ; ಮತ್ತು ಕಾಮಗಾರಿಗಳ ವಿಳಂಬಕ್ಕೆ ಕಾರಣವೇನು ; (ಕರಾರು ಪತ್ರಗಳ (ಅಗ್ರಿಮೆಂಟ್‌ಗಳ) ಪ್ರತಿ ಒದಗಿಸುವುದು)

(ಇ) ಅಪೂರ್ಣವಾದ ಕಾಮಗಾರಿಗಳ ಕರಾರು ಮೊತ್ತವೆಷ್ಟು ; ಮತ್ತು ನೀಡಲಾದ EFI ಎಷ್ಟು ; ಮತ್ತು ಗುತ್ತಿಗೆದಾರರಿಗೆ ವಿಳಂಬಕ್ಕೆ ನೋಟಿಸು ನೀಡಲಾಗಿದೆಯೇ ; ಅಥವಾ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಎರಡು ದಿನಗಳಲ್ಲಿ ಮಾಡಬಹುದಾದ ಕೆಲಸಗಳನ್ನು ಎರಡು ವರ್ಷಗಳಾದರೂ ಮಾಡದಿರುವ ಗುತ್ತಿಗೆದಾರರನ್ನು ಹೊಣೆಗಾರರನ್ನಾಗಿ ಮಾಡಲಾಗುವುದೇ ; ಅಥವಾ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದೇ ?

## ಶವ ಸಂಸ್ಕಾರ ಸಹಾಯಧನ ಪಡೆಯಲು, ಅರ್ಜಿ ಸಲ್ಲಿಸುವುದಕ್ಕಾಗಿ ನಿಗಧಿಗೊಳಿಸಿರುವ ಕಾಲಮಿತಿ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೨ (೮೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಶವಸಂಸ್ಕಾರ ಸಹಾಯಧನ ಕೋರಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಇತ್ಯರ್ಥಪಡಿಸಿದ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿ ಇರಲು ಕಾರಣವೇನು; (ವರ್ಷಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಶವಸಂಸ್ಕಾರ ಸಹಾಯಧನ ಪಡೆಯಲು ಇರುವ ಮಾನದಂಡಗಳು ಯಾವುವು; ಮಾರ್ಗಸೂಚಿಯ ಪ್ರತಿ ಒದಗಿಸುವುದು ಶವಸಂಸ್ಕಾರದ ಸಹಾಯಧನ ಕೋರಿ ಬಂದ ಅರ್ಜಿಗಳನ್ನು ಇತ್ಯರ್ಥಪಡಿಸಲು ಇರುವ ಕಾಲಮಿತಿ ಎಷ್ಟು;

(ಇ) ಶವಸಂಸ್ಕಾರ ಸಹಾಯ ಧನ ಕೋರಿದ ಅರ್ಜಿಯ ಜೇಷ್ಠತೆಯನ್ನು ನಿರ್ಧರಿಸಲು ಮಾನದಂಡ ಯಾವುವು; ಮರಣ ಪ್ರಮಾಣ ಪತ್ರವನ್ನು ಮಾನದಂಡವಾಗಿರಿಸಿದರೆ, ಫಲಾನುಭವಿಗೆ ಮರಣ ಪ್ರಮಾಣ ಪತ್ರ ದೊರೆಯುವಾಗ ಬಹಳಷ್ಟು ವಿಳಂಬವಾಗುವುದರಿಂದ, ಅರ್ಜಿ ನೀಡಿದ ದಿನಾಂಕದಂದು ಜೇಷ್ಠತೆ ಪರಿಗಣಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ, ಕಾರಣವೇನು ?

## ಮಾನ್ಯ ಸುಪ್ರೀಂ ಕೋರ್ಟಿನ ತಾತ್ಕಾಲಿಕ ತಡೆಯಾಜ್ಞೆ ತೆರವುಗೊಳಿಸಲು ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೩ (೮೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ಯ ಸುಪ್ರೀಂ ಕೋರ್ಟ್, ಡಬ್ಲ್ಯೂ.ಪಿ.ಸಂಖ್ಯೆ೨೦೨/೧೯೯೫ರಲ್ಲಿ ದಿನಾಂಕ: ೦೪–೦೪–೨೦೦೮ರಂದು ನೀಡಿದ ತಾತ್ಕಾಲಿಕ ತಡೆಯಾಜ್ಞೆಯ ಮೇಲೆ ಇಲಾಖೆಯು ತೆಗೆದುಕೊಂಡ ಕ್ರಮವೇನು ; ಈ ತಡೆಯಾಜ್ಞೆಯನ್ನು ಯಾವಾಗ ತೆರುವುಗೊಳಿಸಲಾಗಿದೆ ; ತಡೆಯಾಜ್ಞೆಯ ಪ್ರತಿ ಹಾಗೂ ತೆರವುಗೊಳಿಸಿದ ಪ್ರತಿಯನ್ನು ಒದಗಿಸುವುದು ;

(ಆ) ತೆರವುಗೊಳಿಸಿದ್ದಲ್ಲಿ ಅಕ್ರಮ ಸಕ್ರಮ ಸಮಿತಿಯಲ್ಲಿ ಕುಮ್ಕಿಯನ್ನು ಮಂಜೂರು ಮಾಡದಿರಲು ಕಾರಣವೇನು ;

(ಇ) ಕಂದಾಯ ಇಲಾಖೆಯು ಈ ತನಕ ಕುಮ್ಕಿ ಸಕ್ರಮೀಕರಣ ಅಥವಾ ಸಕ್ರಮೀಕರಣ ಮತ್ತು ಡೀಮ್ಡ್ ಫಾರೆಸ್ಟ್ ತೆರವಿನ ಬಗ್ಗೆ ಯಾವುದಾದರೂ ಮಧ್ಯಂತರ ಅರ್ಜಿ ಹಾಕಿದೆಯೇ ; ಹಾಕಿದ್ದಲ್ಲಿ, ಪ್ರತಿ ಒದಗಿಸುವುದು ?

## ವಾರಾಹಿ ನೀರಾವರಿ ಯೋಜನಾ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದಡಿಯ ಕಾಮಗಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೪ (೮೮೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿಯ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ ; ಯಾವ ಯಾವ ಯೋಜನೆಯ ಕಾಮಗಾರಿಗಳು ಪ್ರಗತಿಯಲ್ಲಿವೆ ; ಇವುಗಳಿಗೆ ಆಯವ್ಯಯದಲ್ಲಿ ಕಾದಿರಿಸಿದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚವಾದ ಅನುದಾನವೆಷ್ಟು ; (ಯೋಜನೆಯ ಶೀರ್ಷಿಕೆವಾರು ಮಾಹಿತಿ ನೀಡುವುದು)

(ಆ) ವಾರಾಹಿ ನೀರಾವರಿ ಯೋಜನೆಯ ಯೋಜನಾ ಪ್ರದೇಶದಲ್ಲಿ ಎಸ್.ಸಿ.ಪಿ, ಟಿ.ಎಸ್.ಪಿ. ಘಟಕದಡಿಯಲ್ಲಿ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವರ್ಗದಡಿಯಲ್ಲಿ) ಕೈಗೊಂಡ ಕಾಮಗಾರಿಗಳು ಯಾವುವು ; ಕಳೆದ ೩ ವರ್ಷಗಳ ವರ್ಷಾವಾರು, ಕಾಮಗಾರಿವಾರು ವಿವರ ನೀಡುವುದು) ; ಇವುಗಳಿಗೆ ಒದಗಿಸಿದ ಅನುದಾನದ ವಿವರ ಒದಗಿಸುವುದು ; ಈ ಕಾಮಗಾರಿಗಳು ಪೂರ್ಣಗೊಂಡಿದೆಯೇ, ಅಪೂರ್ಣವಾಗಿದೆಯೇ, ಪ್ರಗತಿಯಲ್ಲಿವೆಯೇ, ಮಾಹಿತಿ ಒದಗಿಸುವುದು ?

## ವಿವಿಧ ಯೋಜನೆಗಳಡಿಯಲ್ಲಿ ರಾಜ್ಯದಲ್ಲಿ ಹಂಚಿಕೆಯಾಗಿರುವ ಮನೆಗಳ ಬಗ್ಗೆ

**ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೫ (೫೨೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ ರಿಂದ ಇಲ್ಲಿಯವರೆಗೆ ವಿವಿಧ ಯೋಜನೆಗಳಡಿಯಲ್ಲಿ ರಾಜ್ಯದ ಗ್ರಾಮೀಣ ಪ್ರದೇಶ ಹಾಗೂ ನಗರ ಪ್ರದೇಶಗಳಲ್ಲಿ ಎಷ್ಟು ಮನೆಗಳನ್ನು ಸರ್ಕಾರ ಮಂಜೂರು ಮಾಡಿರುತ್ತದೆ; (ವಿವರ ನೀಡುವುದು)

(ಆ) ಗ್ರಾಮೀಣ ಪ್ರದೇಶಗಳಲ್ಲಿರುವ ಕಚ್ಚಾ ಮನೆಗಳ ಉನ್ನತೀಕರಣಕ್ಕಾಗಿ ಇರುವ ಯೋಜನೆ ಯಾವುದು; ಈ ಯೋಜನೆಗೆ ಹೆಚ್ಚಿನ ಹಣವನ್ನು ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

(ಇ) ಶಿವಮೊಗ್ಗ ಜಿಲ್ಲೆಗೆ ಒಟ್ಟು ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ; (ಗ್ರಾಮೀಣ ಪ್ರದೇಶ ಮತ್ತು ನಗರ ಪ್ರದೇಶವಾರು ವಿವರ ನೀಡುವುದು)

(ಈ) ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಸತಿ ಸಮುಚ್ಚಯಗಳನ್ನು ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಪೂರ್ಣ ವಿವರ ನೀಡುವುದು?

## ತುಂಗಭದ್ರ ನದಿ ನೀರನ್ನು ಕೆರೆಗಳಿಗೆ ತುಂಬಿಸುವ ಕುರಿತು

**ಶ್ರೀ ಆರ್ ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೬ (೫೨೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಹೊಸೂರು ಹೋಬಳಿ, ತಾಳಗುಂದ ಹೋಬಳಿ ಹಾಗೂ ಉಡುಗಣಿ ಹೋಬಳಿಗಳಲ್ಲಿರುವ ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನು ತುಂಬಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಇದರ ಯೋಜನಾ ವೆಚ್ಚ ಎಷ್ಟು; (ವಿವರ ನೀಡುವುದು)

(ಆ) ಸದರಿ ಹೋಬಳಿಗಳಲ್ಲಿ ಜನ ಸಾಮಾನ್ಯರಿಗೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ೨೦೧೩ ರಿಂದ ೨೦೧೮ ರವರೆಗೆ ಶಿವಮೊಗ್ಗ ಜಿಲ್ಲೆಯಲ್ಲಿ ಕೆರೆ ತುಂಬಿಸುವ ಯೋಜನೆಗಳನ್ನು ಅನುಷ್ಠಾನ ಮಾಡಲಾಗಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿ ಬಡವರಿಗೆ ಮನೆಗಳನ್ನು ಮಂಜೂರು ಮಾಡುವ ಕುರಿತು

**ಶ್ರೀ ಆರ್ ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೭ (೫೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಯೋಜನೆಗಳಡಿಯಲ್ಲಿ ಮನೆಗಳನ್ನು ಮಂಜೂರು ಮಾಡಲು ಇರುವ ಮಾನದಂಡ ಯಾವುದು ;

(ಆ) ಹೊಸದಾಗಿ ನಿಗಧಿಪಡಿಸಿರುವ ಮಾನದಂಡದಲ್ಲಿ ಬಿ.ಪಿ.ಎಲ್ ಕುಟುಂಬದವರ ಆದಾಯ ೩೨ ಸಾವಿರಕ್ಕಿಂತ ಹೆಚ್ಚು ಇದ್ದಲ್ಲಿ ಅಂತಹವರುಗಳಿಗೆ ಮನೆಗಳನ್ನು ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ (ವಿವರ ನೀಡುವುದು)

(ಇ) ಇದನ್ನು ಮಾರ್ಪಾಡು ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ;

## ಫಾರಂ ೫೦ ಹಾಗೂ ೫೩ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಕುರಿತು

**ಶ್ರೀ ಎಂ.ಕೆ.ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೮ (೫೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಫಾರಂ ೫೦ ಹಾಗೂ ೫೩ ರಲ್ಲಿ ಸಲ್ಲಿಕೆಯಾಗಿದ್ದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಮಂಜೂರಾಗಿರುವ ಪ್ರಕರಣಗಳು, ವಜಾಗೊಂಡಿರುವ ಪ್ರಕರಣಗಳು ಹಾಗೂ ಸಮಿತಿ ಮುಂದೆ ಮಂಡಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಗರ್‌ಹುಕುಂ ಸಕ್ರಮೀಕರಣ ಸಮಿತಿಯಲ್ಲಿ ಮಂಜೂರಾಗಿ ಸಾಗುವಳಿ ಚೀಟಿ ನೀಡಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಸಾಗುವಳಿ ಚೀಟಿ ನೀಡಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸಾಗುವಳಿ ಚೀಟಿ ನೀಡಲು ಬಾಕಿ ಇರಲು ಕಾರಣಗಳೇನು? (ವಿವರ ನೀಡುವುದು)

## ಹೊಸಹಳ್ಳಿ ಗ್ರಾಮ ಸರ್ವೆ ನಂ. ೯೫/೩ರಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಸ್ಮಶಾನದ ಬಗ್ಗೆ

**ಶ್ರೀ ಎಂ.ಕೆ.ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೭ (೬೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲ್ಲೂಕಿನ ವಿರುಪಾಕ್ಷಿಪುರ ಹೋಬಳಿ, ಹೊಸಹಳ್ಳಿ ಗ್ರಾಮ ಸರ್ವೆ ನಂ.೯೫/೩ರಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಸ್ಮಶಾನ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸ್ಮಶಾನದಲ್ಲಿ ಪರಿಶಿಷ್ಟ ಜಾತಿಯ ಜನಾಂಗದವರನ್ನು ಸಮಾಧಿ ಮಾಡಲಾಗುತ್ತಿತ್ತೆ;

(ಇ) ಹಾಗಿದ್ದಲ್ಲಿ, ಸಮಾಧಿಗೆ ಪೂಜಿಸಲು ಬರುವ ಅಕ್ಕುರು ಗ್ರಾಮದ ವಾಸಿಗಳು ಈ ಜಾಗವನ್ನು ಒತ್ತುವರಿ ಮಾಡಿಕೊಂಡಿರುವುದು ನಿಜವೆ;

(ಈ) ಸ್ಮಶಾನ ಜಾಗವನ್ನು ಒತ್ತುವರಿ ಮಾಡಿಕೊಂಡವರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ?

## ರೈತರು/ಭೂಮಾಲೀಕರಿಗೂ ನಕ್ಷೆ, ಪೋಡಿ, ಸರ್ವೆ ಕುರಿತು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೦ (೫೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ರೈತರು/ಭೂಮಾಲೀಕರುಗಳಿಗೆ ನಕ್ಷೆ, ಪೋಡಿ, ಸರ್ವೆ ಕಾರ್ಯಗಳಿಗಾಗಿ ಸರ್ಕಾರದಿಂದ ನಿಗಧಿಯಾದ ಶುಲ್ಕ ಎಷ್ಟು; ಸದರಿ ಕಾರ್ಯಗಳನ್ನು ಪೂರ್ಣಗೊಳಿಸಲು ಇರುವ ಕಾಲಾವಧಿ ಎಷ್ಟು; (ಗ್ರಾಮೀಣ ಹಾಗೂ ನಗರಗಳ ಪ್ರತ್ಯೇಕ ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ರೈತರಿಂದ ಸರ್ವೆ ಕಾರ್ಯಕ್ಕಾಗಿ ಭೂ ಮಾಪಕರು/ಅಧಿಕಾರಿಗಳು ನಿರಂತರವಾಗಿ ಹಣ ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಇ) ೧೧ಇ ಹಾಗೂ ತತ್ಕಾಲ ಮೂಲಕ ಪೋಡಿಗಳಿಗಾಗಿ ಸಲ್ಲಿಸಿದ ಅರ್ಜಿಗಳು ನಿಗಧಿತ ಅವಧಿಯೊಳಗೆ ಪೂರ್ಣವಾಗದೆ ರೈತರು ತಿಂಗಳುಗಟ್ಟಲೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು? ( ಮಾಹಿತಿ ನೀಡುವುದು)

## ಸರ್ಕಾರಿ ಜಮೀನು ರಿಜಿಸ್ಟರ್ ಆಗುತ್ತಿರುವ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೮೧ (೫೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಸರ್ಕಾರಿ ಜಮೀನುಗಳು ಅಂದರೆ ಗೋಮಾಳ, ದೇವಸ್ಥಾನದ ಕಟ್ಟಡ ನಿರ್ಮಾಣಕ್ಕಾಗಿ ಹಾಗೂ ಗ್ರಾಮಠಾಣದ ಜಮೀನುಗಳ ರಕ್ಷಣೆಗೆ ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಸರ್ಕಾರಿ ಜಮೀನನ್ನು ಖಾಸಗಿಯವರು ಒತ್ತುವರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ವೆ ನಂಬರುಗಳೊಂದಿಗೆ ಒತ್ತುವರಿಯಾಗಿರುವ ಜಮೀನು ಎಷ್ಟು; ಒತ್ತುವರಿದಾರರನ್ನು ತೆರವುಗೊಳಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಇ) ಗೋಮಾಳ ಜಮೀನುಗಳನ್ನು ಉಪನೋಂದಣಾಧಿಕಾರಿಗಳು ರಿಜಿಸ್ಟರ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸ್ಪಷ್ಟ ಮಾಹಿತಿ ನೀಡುವುದು?

## ಬೀದರ್ ಜಿಲ್ಲೆಯಲ್ಲಿನ ನೀರಾವರಿ ಪ್ರದೇಶಗಳ ಕುರಿತು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೮೨ (೫೨೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ನೀರಾವರಿಗೆ ಯೋಗ್ಯವಾಗಿರುವ ಒಟ್ಟು ಭೂಮಿ ಎಷ್ಟು; ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ನೀರಾವರಿಗಾಗಿ ಎಷ್ಟು ಹಣ ಬಿಡುಗಡೆ/ ಖರ್ಚು ಮಾಡಲಾಗಿದೆ; (ವರ್ಷವಾರು ಯೋಜನೆವಾರು ಅಂಕಿ ಅಂಶಗಳೊಂದಿಗೆ ಸ್ಪಷ್ಟ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಮೂರು ವರ್ಷಗಳಲ್ಲಿ ಎಷ್ಟು ಪ್ರದೇಶ ನೀರಾವರಿಗೆ ಒಳಪಟ್ಟಿದೆ; ಇನ್ನೂ ಎಷ್ಟು ಪ್ರದೇಶ ನೀರಾವರಿಗೆ ಒಳ ಬೇಕಾಗಿದೆ; ಇದಕ್ಕಾಗಿ ಸರ್ಕಾರದ ಯೋಜನೆಗಳಾವುವು; (ವಿವರ ನೀಡುವುದು)

(ಇ) ಕಾರಂಜಿ ಡ್ಯಾಂ ನೀರಿನ ಬಳಕೆಗೆ ಹಾಗೂ ನೀರಾವರಿಗಾಗಿ ಎಷ್ಟು ಅನುದಾನ ಬಿಡುಗಡೆ/ಖರ್ಚು ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಮಾಜರಾ ನದಿ ನೀರಿನ ಬಳಕೆಗೆ ಹಾಗೂ ನೀರಾವರಿಗಾಗಿ ಎಷ್ಟು ಹಣ ಬಿಡುಗಡೆ/ಖರ್ಚು ಮಾಡಲಾಗಿದೆ? (ಅಂಕಿ ಅಂಶಗಳೊಂದಿಗೆ ಸ್ಪಷ್ಟ ಮಾಹಿತಿ ಒದಗಿಸುವುದು)

## ಮೀನುಗಾರರ ಅಭಿವೃದ್ಧಿ ಯೋಜನೆಗಳ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೮೩ (೫೨೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯಾವ ಯೋಜನೆಗಳನ್ನು ಸರ್ಕಾರ ರೂಪಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರರಿಗೆ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು; (ಸ್ಪಷ್ಟ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ; ಕಲ್ಪಿಸಿದ್ದಲ್ಲಿ ಅದರ (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ; ಹಾಗೂ ಯಾವ ಸ್ಥಳಗಳಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ; ಮಾಡುತ್ತಿರುವ ಸಾಕಾಣಿದಾರರಿಗೆ ಎಷ್ಟು ಪ್ರಮಾಣದಲ್ಲಿ ಸಬ್ಸಿಡಿ ನೀಡಲಾಗುತ್ತಿದೆ; ಇಲ್ಲಿಯವರೆಗೆ ಸಬ್ಸಿಡಿ ನೀಡಲಾಗಿರುವ ಸಾಕಾಣೆದಾರರ ಸಂಖ್ಯೆ ಎಷ್ಟು? (ಅಂಕಿ ಅಂಶಗಳೊಂದಿಗೆ ಸ್ಪಷ್ಟ ಮಾಹಿತಿ ನೀಡುವುದು)

## ಪೋಡು ಮುಕ್ತ ಗ್ರಾಮ ಯೋಜನೆ ಅನುಷ್ಠಾನ ಪ್ರಕ್ರಿಯೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೮೪ (೮೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಪೋಡು ಮುಕ್ತ ಗ್ರಾಮ" ಯೋಜನೆ ಪ್ರಾರಂಭವಾಗಿದ್ದು ಯಾವಾಗ; (ವಿವರ ನೀಡುವುದು)

(ಆ) ಈವರೆಗೆ ಯಾವ ಯಾವ ಹಂತಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ; ಇನ್ನು ಎಷ್ಟು ಗ್ರಾಮಗಳು ಬಾಕಿ ಇವೆ;

(ಇ) ಈ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಯಶಸ್ವಿಗೊಳಿಸಲು ಮತ್ತು ಪೂರ್ಣಗೊಳಿಸಲು ಗುರಿ ನಿಗಧಿಪಡಿಸಲಾಗಿದೆಯೇ;

(ಈ) ಈ ಯೋಜನೆ ಅನುಷ್ಠಾನ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಬೆಂಗಳೂರು ಜಿಲ್ಲೆಯಲ್ಲಿ ಅಸಂಘಟಿತ ಕಾರ್ಮಿಕರ ನೋಂದಾವಣೆಯಲ್ಲಿ ವಿಳಂಬವಾಗುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೮೫ (೮೮೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಆ) ಯಾವ ಯಾವ ಕೆಲಸ ಮಾಡುವವರನ್ನು ಅಸಂಘಟಿತ ಕಾರ್ಮಿಕರೆಂದು ಗುರುತಿಸಲಾಗಿದೆ;

(ಆ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಜನ ಅಸಂಘಟಿತ ಕಾರ್ಮಿಕರಿದ್ದಾರೆ; (ವಿವರ ನೀಡುವುದು)

(ಇ) ಎಷ್ಟು ಜನರಿಗೆ ನೋಂದಾವಣಿ ಮಾಡಿಸಿ ಗುರುತಿನ ಚೀಟಿ ನೀಡಲಾಗಿದೆ;

(ಈ) ಇನ್ನಷ್ಟು ವೇಗ ಮತ್ತು ಸಮರ್ಪಕವಾಗಿ ನೋಂದಾವಣೆ ಮಾಡಿಸಲು ಏನು ಕ್ರಮ ಕೈಗೊಳ್ಳಲಾಗುವುದು;

(ಉ) ಬೆಂಗಳೂರಿನ ಎಲ್ಲೆಲ್ಲಿ ನೋಂದಾವಣಿ ಮಾಡಿಸಲು ಅವಕಾಶವಿದೆ? (ಆನ್‌ಲೈನ್ ನೋಂದಾವಣೆ ಹೊರತುಪಡಿಸಿ) (ವಿವರ ನೀಡುವುದು)

## ಹಿರಣ್ಯ ಕೇಶಿ ನದಿಯ ಚಿತ್ರಿ ಅಣೆಕಟ್ಟನ್ನು ಎತ್ತರಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೮೬ (೮೭೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿರಣ್ಯಕೇಶಿ ನದಿಯ ಚಿತ್ರಿ ಅಣೆಕಟ್ಟು ಎತ್ತರಿಸುವ ಕುರಿತು ಮಹಾರಾಷ್ಟ್ರ ಸರ್ಕಾರದಿಂದ ಪ್ರಸ್ತಾಪವನ್ನು ಯಾವಾಗ ಮಾಡಲಾಯಿತು; (ಈ ಕುರಿತು ವಿವರ ನೀಡುವುದು)

(ಆ) ಕಳೆದ ಏಳು ವರ್ಷಗಳಿಂದ ಈ ಕುರಿತು ಯಾವ ರೀತಿಯ ಮಾತುಕತೆಗಳಾಗಿವೆ; ಸದರಿ ಪ್ರಸ್ತಾಪ ಯಾವ ಹಂತದಲ್ಲಿದೆ;

(ಇ) ಚಿತ್ರಿ ಅಣೆಕಟ್ಟನ್ನು ಎತ್ತರಿಸುವುದರಿಂದ, ಕರ್ನಾಟಕ ರಾಜ್ಯದ ಜನತೆಗೆ ಯಾವ ರೀತಿಯ ಪ್ರಯೋಜನವಾಗಲಿದೆ? (ವಿವರ ನೀಡುವುದು)

## ಡೀಮ್ಡ್ ಅರಣ್ಯ ಪ್ರದೇಶಗಳಲ್ಲಿ ವ್ಯವಸಾಯ ಮಾಡುತ್ತಿರುವವರಿಗೆ ಅನುಕೂಲ ಕಲ್ಪಿಸಿಕೊಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೮೭(ಎ) (೮೩೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಪ್ರದೇಶಕ್ಕೂ–ಡೀಮ್ಡ್ ಅರಣ್ಯ ಪ್ರದೇಶಕ್ಕೂ ಇರುವ ವ್ಯತ್ಯಾಸವೇನು;

(ಆ) ಡೀಮ್ಡ್ ಅರಣ್ಯ ಪ್ರದೇಶದ ಒಟ್ಟು ವಿಸ್ತೀರ್ಣ ಎಷ್ಟು; (ವಿವರ ನೀಡುವುದು)

(ಇ) ರಾಮನಗರ ಜಿಲ್ಲೆ ವ್ಯಾಪ್ತಿಯಲ್ಲಿರುವ ಡೀಮ್ಡ್ ಅರಣ್ಯ ಪ್ರದೇಶದ ವ್ಯಾಪ್ತಿ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಮಾಗಡಿ ತಾಲ್ಲೂಕಿನ ವ್ಯಾಪ್ತಿಗೆ ಸೇರಿದಂತೆ ಎಷ್ಟು ಎಕರೆಯನ್ನು ಡೀಮ್ಡ್ ಅರಣ್ಯ ಪ್ರದೇಶಕ್ಕೆ ಸೇರಿಸಲಾಗಿದೆ; ವಿವರ ನೀಡುವುದು; ಇದರ ನಕಾಶೆ ಹಾಗೂ ಚಕ್ಕುಬಂದಿಯ ವಿವರ ನೀಡುವುದು;

(ಉ) ಈ ಸಂಬಂಧ ಮಾಗಡಿ ತಾಲ್ಲೂಕು ವ್ಯಾಪ್ತಿಯ ಡೀಮ್ಡ್ ಅರಣ್ಯ ಪ್ರದೇಶವನ್ನು ನೋಟಿಫಿಕೇಷನ್ ಅಥವಾ ಡೀನೋಟಿಫಿಕೇಷನ್ ಮಾಡಿದ್ದಲ್ಲಿ, ವಿವರ ನೀಡುವುದು;

(ಊ) ಇಲ್ಲಿ ಹಲವಾರು ದಶಕಗಳಿಂದ ವ್ಯವಸಾಯ ಮಾಡಿಕೊಂಡು ಬರುತ್ತಿರುವ ರೈತರು ತೊಂದರೆಗೆ ಸಿಲುಕುವುದಿಲ್ಲವೇ; ಈ ರೀತಿಯ ಜಮೀನುಗಳಲ್ಲಿ ಅವರಿಗೆ ನೀಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ಕಾರ್ಖಾನೆಗಳಿಂದ ಕೆರೆಗಳಿಗೆ ವಿಷಕಾರಿ ತ್ಯಾಜ್ಯಗಳನ್ನು ಬಿಡುತ್ತಿರುವ ಬಗ್ಗೆ

**ಶ್ರೀ ಪಿ.ಆರ್ ರಮೇಶ್ (ನಾಮನಿರ್ದೇಶನ ಹೊಂದಿದವರು):–**

೬೮೭ (೯೦೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಕೆರೆಗಳ ಸುತ್ತಮುತ್ತ ಸ್ಥಾಪಿಸಿರುವ ಕಾರ್ಖಾನೆ ಹಾಗೂ ಕೈಗಾರಿಕೆಗಳ ಸಂಖ್ಯೆ ಎಷ್ಟು; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಸುತ್ತಮುತ್ತ ಇರುವ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿ ಕಾರ್ಖಾನೆಗಳಿಂದ ಉತ್ಪಾದನೆಯಾಗುತ್ತಿರುವ ಕಲುಷಿತ/ವಿಷಕಾರಿ ತ್ಯಾಜ್ಯವನ್ನು ಕೆರೆಗಳಿಗೆ ಬಿಡುತ್ತಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು; (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕಲುಷಿತ ವಿಷಕಾರಿ ತ್ಯಾಜ್ಯವನ್ನು ಶುದ್ಧೀಕರಿಸಲು ಶುದ್ಧೀಕರಣ ಘಟಕ ಹೊಂದಿರುವ ಹಾಗೂ ಹೊಂದದೇ ಇರುವ ಕಾರ್ಖಾನೆಗಳ ಸಂಖ್ಯೆ ಎಷ್ಟು? (ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಭಟ್ಕಳ ಎ.ಸಿ ಕಛೇರಿಯಲ್ಲಿ ವಿ.ಆರ್.ಎಸ್. ಸೌಲಭ್ಯ ನೀಡುತ್ತಿರುವ ಬಗ್ಗೆ

**ಶ್ರೀ ಪಿ.ಆರ್ ರಮೇಶ್ (ನಾಮನಿರ್ದೇಶನ ಹೊಂದಿದವರು):–**

೬೮೮ (೮೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಟ್ಕಳ ಎ.ಸಿ. ಆಫೀಸಿನಲ್ಲಿ ಎಷ್ಟು ತಹಶೀಲ್ದಾರ್‌ಗಳು ವಿ.ಆರ್.ಎಸ್. ಪಡೆದಿರುತ್ತಾರೆ; ಇವರುಗಳಿಗೆ ವಿ.ಆರ್.ಎಸ್. ಪಡೆಯಲು ಸರ್ಕಾರ ಯಾವ ಷರತ್ತು ಅನುಮತಿ ನೀಡಿ ಇವರುಗಳನ್ನು ಸೇವೆಯಿಂದ ಬಿಡುಗಡೆ ಮಾಡಲಾಗಿದೆ; ಇವರುಗಳ ಮೇಲ್ಯಾ ಆರೋಪಗಳಿದ್ದಲ್ಲಿ ಅಂತಹವರುಗಳಿಗೆ ಏತಕ್ಕಾಗಿ ವಿ.ಆರ್.ಎಸ್.ಗೆ ಅನುಮತಿ ನೀಡಲಾಗಿದೆ;

(ಆ) ವಿ.ಆರ್.ಎಸ್. ನೀಡಿ ಸೇವೆಯಿಂದ ಬಿಡುಗಡೆಗೊಳಿಸಿದ ಮೇಲೆ ಇವರ ನಿವೃತ್ತಿ ವೇತನ ಹಾಗೂ ನಿವೃತ್ತಿ ಸೌಲಭ್ಯಗಳನ್ನು ತಡೆಹಿಡಿಯಲು ನಿಯಮದಲ್ಲಿ ಅವಕಾಶ ವಿದೆಯೇ;

(ಇ) ನಿವೃತ್ತಿಯಾಗಿ ನಾಲ್ಕು ತಿಂಗಳಾದರೂ ಇದುವರೆವಿಗೂ ನಿವೃತ್ತಿ ಸೌಲಭ್ಯವನ್ನು ನೀಡದೇ ತಡೆಹಿಡಿದಿರುವ ಅಧಿಕಾರಿ ಯಾರು; ಅವರ ಮೇಲೆ ಯಾವ ಶಿಸ್ತಿನ ಕ್ರಮ ಕೈಗೊಳ್ಳಲಾಗಿದೆ; ನಿವೃತ್ತಿ ಸೌಲಭ್ಯವನ್ನು ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?

## ಕಡಲ ಮೀನ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೬೪೯ (೮೪೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಮೀನುಗಾರಿಕೆ ಇಲಾಖೆಗೆ ಆಯವ್ಯಯದಲ್ಲಿ ಪ್ರತಿ ವರ್ಷ ನೀಡಿರುವ ಅನುದಾನ ಎಷ್ಟು; ಇದರಲ್ಲಿ ಬಳಕೆಯಾಗಿರುವ ಮತ್ತು ಉಳಿದಿರುವ ಅನುದಾನ ಎಷ್ಟು;

(ಆ) ಕರ್ನಾಟಕದಲ್ಲಿ ೦೧/೦೫/೨೦೧೩ ರಿಂದ ಇಲ್ಲಿಯವರೆಗೆ ಎಷ್ಟು ಫಿಶ್ ಮೀಲ್, ಮೀನಿನ ಎಣ್ಣೆ ಹಾಗೂ ಇತರೆ ಸಾಗರ ಉತ್ಪನ್ನಗಳ ರಫ್ತು ಮಾಡಲಾಗಿರುತ್ತದೆ; ಇದರಿಂದ ರಾಜ್ಯ ಸರ್ಕಾರಕ್ಕೆ ಪ್ರತಿ ವರ್ಷ ಬರುತ್ತಿರುವ ಆದಾಯ ಎಷ್ಟು; ಕರ್ನಾಟಕದಲ್ಲಿ ಪ್ರತಿ ವರ್ಷ ಎಷ್ಟು ಮೆಟ್ರಿಕ್ ಲಕ್ಷ ಟನ್ ಕಡಲ ಮೀನು ಉತ್ಪಾದನೆ ಆಗುತ್ತಿದೆ;

(ಇ) ಕರ್ನಾಟಕದಲ್ಲಿ ಎಷ್ಟು ಮೀನುಗಾರಿಕೆ ದೋಣಿಗಳು ಇರುತ್ತವೆ; ಪ್ರತಿ ವರ್ಷ ಇವರಿಗೆ ಡೀಸಲ್ ಸಹಾಯಧನದ ಮೂಲಕ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು;

(ಈ) ಕರ್ನಾಟಕದಲ್ಲಿ ಎಷ್ಟು ವಿಧದ ಒಳನಾಡು ಮೀನುಗಾರಿಕೆಗಳು ಇರುತ್ತವೆ; ಇವುಗಳಿಂದ ಪ್ರತಿ ವರ್ಷ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು;

(ಉ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಕೆರೆಗಳಲ್ಲಿ ಮೀನುಗಾರಿಕೆಯನ್ನು ಮಾಡಲಾಗುತ್ತಿದೆ; ಇದರಿಂದ ಪ್ರತಿ ವರ್ಷ ಎಷ್ಟು ಆದಾಯ ಬರುತ್ತಿದೆ? (ತುಮಕೂರು ಜಿಲ್ಲೆಯ ಮೀನುಗಾರಿಕೆ ಕೆರೆಗಳ ಹಾಗೂ ಗುತ್ತಿಗೆದಾರರ ವಿವರಗಳನ್ನು ನೀಡತಕ್ಕದ್ದು)

## ಐ.ಟಿ.ಐ ಉದ್ಯೋಗಿಗಳ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೬೯೦ (೮೪೭) ಮಾನ್ಯ ಕಾರ್ಮಿಕರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ಯಾವಾಗ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ; ಸದರಿ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ನ್ಯಾಯಾಲಯಗಳು ಆದೇಶ ನೀಡಿರುತ್ತವೆಯೇ; ನೀಡಿದ್ದಲ್ಲಿ, ಇದರ ಪಾಲನೆ ಆಗಿರುತ್ತದೆಯೇ;

(ಆ) ಉದ್ಯೋಗ ಮತ್ತು ತರಬೇತಿ ಇಲಾಖೆಯ ಉದ್ಯೋಗಿಗಳ ಪದೋನ್ನತಿಗೆ ಸಂಬಂಧಪಟ್ಟಂತೆ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣಗಳು ಬಾಕಿ ಇರುತ್ತದೆಯೇ; ಪ್ರಕರಣವನ್ನು ಮುಕ್ತಾಯಗೊಳಿಸಲು ಇಲಾಖೆಯು ಯಾವ ಕ್ರಮ ಕೈಗೊಂಡಿರುತ್ತದೆ; ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ಪದೋನ್ನತಿಯನ್ನು ನೀಡಲಾಗಿರುತ್ತದೆಯೇ;

(ಇ) ಈ ಇಲಾಖೆಯಲ್ಲಿ ಕಿರಿಯ ತರಬೇತಿ ಅಧಿಕಾರಿ ಹುದ್ದೆಯಿಂದ ಪ್ರಾಚಾರ್ಯರ ಹುದ್ದೆಗೆ ಮುಂಬಡ್ತಿ ನೀಡಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ; ಪ್ರಸ್ತುತ ಎಷ್ಟು ಮಂದಿಗೆ ಪದೋನ್ನತಿ ನೀಡಬೇಕಾಗಿರುತ್ತದೆ;

(ಈ) ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಕಿರಿಯ ತರಬೇತಿ ಅಧಿಕಾರಿ, ಪ್ರಿನ್ಸಿಪಾಲ್ ಗ್ರೇಡ್–೨, ಉಪ ಪ್ರಾಂಶುಪಾಲರು, ಸಹಾಯಕ ನಿರ್ದೇಶಕರು, ಸಹಾಯಕ ತರಬೇತುದಾರರು ಎಷ್ಟು ಜನ ಮತ್ತು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ, ಇವರಲ್ಲಿ ಎಷ್ಟು ಮಂದಿಗೆ ಪದೋನ್ನತಿ ಬಾಕಿ ಇರುತ್ತದೆ; (ಪೂರ್ಣವಾದ ಹೆಸರು ಸಹಿತ ಮಾಹಿತಿ ನೀಡುವುದು) ಮತ್ತು ಇವರಿಗೆ ಡಿ.ಜೆ.ಇ.ಟಿ ವೇತನ ಶ್ರೇಣಿ ನೀಡಲಾಗುತ್ತಿದೆಯೇ?

## ಗ್ರಾಮೀಣ ಅರಣ್ಯ ಪ್ರದೇಶದ ಅಭಿವೃದ್ಧಿ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೬೯೧ (೮೪೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಅರಣ್ಯ ಇಲಾಖೆ ಮತ್ತು ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ಎಷ್ಟು ಚದುರ ಕಿ.ಮೀ. ಪ್ರದೇಶದಲ್ಲಿ ಗ್ರಾಮೀಣ ಅರಣ್ಯ ಪ್ರದೇಶವನ್ನು ಬೆಳೆಸಲಾಗಿರುತ್ತದೆ; ಗ್ರಾಮೀಣ ಅರಣ್ಯ ಪ್ರದೇಶದ ಅಭಿವೃದ್ಧಿಗೆ ಸರ್ಕಾರ ಇಲ್ಲಿಯವರೆಗೆ ಎಷ್ಟು ಹಣ ವಿನಿಯೋಗಿಸಿದೆ; ಸದರಿ ಅರಣ್ಯ ಬೆಳವಣಿಗೆಯಿಂದ ಸರ್ಕಾರಕ್ಕೆ ಎಷ್ಟು ಹಣ ವಾಪಸ್ಸು ಬಂದಿರುತ್ತದೆ;

(ಆ) ಗ್ರಾಮೀಣ ಪ್ರದೇಶದ ಅರಣ್ಯ ಅಭಿವೃದ್ಧಿಗೆ ರಾಜ್ಯ ಸರ್ಕಾರದ ಯಾವ ಯಾವ ಯೋಜನೆಗಳು ಜಾರಿಯಲ್ಲಿರುತ್ತವೆ; ಸರ್ಕಾರವು

ಗ್ರಾಮೀಣ ಪ್ರದೇಶ ಅಭಿವೃದ್ಧಿಗಾಗಿ ಯಾವ ಯಾವ ಶಾಲಾ ಕಾಲೇಜುಗಳನ್ನು, ಸ್ಥಳೀಯ ಸಂಸ್ಥೆಗಳನ್ನು ಮತ್ತು ಸರ್ಕಾರೇತರ ಸಂಸ್ಥೆಗಳನ್ನು ಭಾಗಿಯಾಗಿ ಮಾಡಿಕೊಂಡಿರುತ್ತದೆ; ಸದರಿ ಗ್ರಾಮೀಣ ಅರಣ್ಯ ಪ್ರದೇಶದ ಅಭಿವೃದ್ಧಿಯ ಮೂಲಕ ಯಾವ ಯಾವ ಸಂಸ್ಥೆಗಳು ಮರ ಕಡಿತದ ಲಾಭದ ಹಣವನ್ನು ಸರ್ಕಾರಕ್ಕೆ ಪಾವತಿ ಮಾಡಿರುತ್ತವೆ;

(ಇ) ಕೋಲಾರ ಜಿಲ್ಲೆ, ಮಾಲೂರು ತಾಲ್ಲೂಕು ಟೇಕಲ್ ಹೋಬಳಿಯ ಗುಂಡ್ಲಹಳ್ಳಿ ಗ್ರಾಮದ ಗೋಮಾಳ ಸರ್ವೆ ನಂ.೬೬ರಲ್ಲಿ ಯಾವ ವರ್ಷ ಎಷ್ಟು ಪ್ರದೇಶದಲ್ಲಿ ನೆಡುತೋಪು ಬೆಳೆಸಲು ಆದೇಶ ನೀಡಲಾಗಿತ್ತು; ಆದೇಶ ನೀಡಿದ್ದಲ್ಲಿ, ಇದರ ನಿರ್ವಹಣೆಯ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿತ್ತು; ಹಾಲಿ ಅಲ್ಲಿ ನೆಡತೋಪು ಇರುತ್ತದೆಯೇ; ಇಲ್ಲದೇ ಇದ್ದಲ್ಲಿ ಇದರ ನಷ್ಟಕ್ಕೆ ಯಾರನ್ನು ಜವಾಬ್ದಾರರನ್ನಾಗಿ ಮಾಡಿರುತ್ತೀರಿ;

(ಈ) ಗುಂಡ್ಲಹಳ್ಳಿ ಗ್ರಾಮದ ಗೋಮಾಳ ಪ್ರದೇಶದ ನೆಡುತೋಪು ಪ್ರದೇಶದಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದೆಯೇ; ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಣ್ಣ ನೀರಾವರಿ ಇಲಾಖೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೬೯೨ (೮೪೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ತುಮಕೂರು ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಯೋಜನೆಗಳಿಗೆ

ಎಷ್ಟು ಅನುದಾನ ನೀಡಲಾಗಿದೆ; ಇವುಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ; ಬಾಕಿ ಇರುವ ಕಾಮಗಾರಿಗಳು ಎಷ್ಟು; (ವರ್ಷವಾರು, ಯೋಜನಾವಾರು, ಕಾಮಗಾರಿವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ಇರುವ ಕೆರೆಗಳು ಎಷ್ಟು ಇವುಗಳ ಅಭಿವೃದ್ಧಿಗೆ ಮತ್ತು ಹೂಳು ತೆಗೆಯಲು ೨೦೧೩-೧೪ ರಿಂದ ಇಲ್ಲಿಯುವರೆಗೆ ಒದಗಿಸಲಾಗಿರುವ ಅನುದಾನ ಎಷ್ಟು; ಬಿಡುಗಡೆಯಾಗಿರುವ ಹಣ ಎಷ್ಟು; ಇವುಗಳಲ್ಲಿ ಬಾಕಿ ಇರುವ ಕಾಮಗಾರಿಗಳು ಎಷ್ಟು; (ವರ್ಷಾವಾರು, ಅನುದಾನವಾರು, ಕಾಮಗಾರಿವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಕೆರೆಗಳನ್ನು ಒತ್ತುವರಿ ಮಾಡಲಾಗಿದೆ; ಮಾಡಿದ್ದಲ್ಲಿ, ಒತ್ತುವರಿ ತೆರವಿಗೆ ಏನು ಕ್ರಮ ಕೈಗೊಳ್ಳಲಾಗಿದೆ; (ಕೆರೆಗಳ ಸಹಿತವಾಗಿ ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕೆರೆಗಳ ಅಭಿವೃದ್ಧಿಗೆ ಮತ್ತು ಹೂಳು ತೆಗೆಯಲು ಸಣ್ಣ ನೀರಾವರಿ ಇಲಾಖೆಯಿಂದ ಕಳೆದ ೨೦೧೩-೧೪ ರಿಂದ ಇಲ್ಲಿಯವರೆಗೆ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಬಾಕಿರುವ ಕಾಮಗಾರಿಗಳು ಎಷ್ಟು?

## ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಸ್ಮಶಾನ ಜಾಗದ ಒತ್ತುವರಿ ಬಗ್ಗೆ

**ಶ್ರೀ ಎಂ.ಪಿ.ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೬೫೩ (೫೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಮಶಾನಕ್ಕೆ ಜಾಗ ಒದಗಿಸಲಾಗಿದೆಯೇ;

(ಆ) ರಾಜ್ಯದ ಯಾವ ಯಾವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಮಶಾನಕ್ಕೆ ಜಾಗ ಇರುವುದಿಲ್ಲ; (ಮಾಹಿತಿ ನೀಡುವುದು)

(ಇ) ಸಾರ್ವಜನಿಕ ಸ್ಮಶಾನಕ್ಕೆ ಜಾಗ ಇಲ್ಲದಿದ್ದಲ್ಲಿ, ಸರ್ಕಾರಿ ಜಾಗವನ್ನು ಮೀಸಲಿಡಲಾಗಿದೆಯೇ; (ವಿವರ ನೀಡುವುದು)

(ಈ) ಈಗಾಗಲೇ ಸ್ಮಶಾನಕ್ಕೆ ಮಂಜೂರಾಗಿರುವ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಯಾವ ಗ್ರಾಮಗಳಲ್ಲಿ ಸ್ಮಶಾನಕ್ಕೆ ಮೀಸಲಿಟ್ಟ ಜಾಗವನ್ನು ಒತ್ತುವರಿ ಮಾಡಲಾಗಿದೆ; ಒತ್ತುವರಿಯನ್ನು ಬಿಡಿಸಲು ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)

(ಉ) ಈ ಬಗ್ಗೆ ಸರ್ಕಾರ ಯಾವ ಆದೇಶವನ್ನು ಜಾರಿಗೊಳಿಸಿದೆ?

## ರಾಜ್ಯದಲ್ಲಿನ ಅಕ್ರಮ ಸಕ್ರಮ ಯೋಜನೆಯ ೯೪ ಸಿ ಅರ್ಜಿಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೪ (೫೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಿಂದ ರಾಜ್ಯದಲ್ಲಿನ ತಾಲ್ಲೂಕು ಕೇಂದ್ರಗಳಲ್ಲಿ ದಿನಾಂಕ : ೨೭–೦೧–೨೦೧೮ರವರೆಗೆ ೯೪ಸಿ ಅಡಿಯಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಅರ್ಜಿಗಳಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು ; ವಿಲೇವಾರಿಗೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿಯಿರಲು ಸಕಾರಣಗಳೇನು ;

(ಇ) ಬಂದ ಅರ್ಜಿಗಳಲ್ಲಿ ತಿರಸ್ಕೃತವಾದ ಅರ್ಜಿಗಳೆಷ್ಟು ; ಅವುಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ವಸತಿ ಮಂಜೂರಾತಿ ಹಾಗೂ ನಿರ್ಮಾಣಕ್ಕೆ ಅನುಮತಿಗೆ ಹಕ್ಕುಪತ್ರ ಬೇಕಾಗಿದ್ದು, ೯೪ಸಿ ಅಡಿಯಲ್ಲಿ ಅರ್ಜಿ ಹಾಕಿ ವಿಲೇವಾರಿಯಾಗದೇ ಇರುವವರಿಗೆ ಸಮಸ್ಯೆಯಾಗುತ್ತಿದ್ದು, ಎಷ್ಟು ನಿಗಧಿತ ಸಮಯದೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡಿ ಹಕ್ಕು ಪತ್ರ ನೀಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅತಿವೃಷ್ಟಿ ಮತ್ತು ಅನಾವೃಷ್ಟಿಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೬೯೫ (೫೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪ನೇ ಸಾಲಿನಿಂದ ಇಲ್ಲಿಯವರೆಗೆ ಬರ ನಿರ್ವಹಣೆ, ಅತಿವೃಷ್ಟಿ ಮತ್ತು ಅನಾವೃಷ್ಟಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಕಂದಾಯ ಇಲಾಖೆಗೆ ಬಿಡುಗಡೆಯಾಗಿರುವ ಹಣವೆಷ್ಟು ; ಇದಕ್ಕಾಗಿ ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ;

(ಆ) ಬರ ಎದುರಿಸುತ್ತಿರುವ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; ಹಾಗೆಯೇ ಬಿಡುಗಡೆಯಾದ ಹಣದಿಂದ ಬರವನ್ನು ಎಷ್ಟರ ಮಟ್ಟಿಗೆ ನೀಗಿಸಲಾಗಿದೆ ;

(ಇ) ಬರ ನಿರ್ವಹಣೆಗೆ ಬಿಡುಗಡೆಯಾಗಿರುವ ಹಣವನ್ನು ಯಾವ ರೀತಿಯಲ್ಲಿ ಸದುಪಯೋಗಪಡಿಸಿಕೊಳ್ಳಲಾಗಿದೆ ? (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಾರವಾರ, ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿರುವ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರು (ಪದವೀಧರರ ಕ್ಷೇತ್ರ) :–**

೬೯೬ (೮೮೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ, ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿರುವ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಜಿಲ್ಲಾ ಹಾಗೂ ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು ;

(ಆ) ಈ ಯೋಜನೆಗೆ ಪ್ರತಿ ಕೆರೆಗೆ ಖರ್ಚು ಮಾಡಿದ ವೆಚ್ಚ ಎಷ್ಟು ? (ವಿವರ ನೀಡುವುದು)

## ಖಾಸಗಿ ಅನುದಾನಿತ ಐ.ಟಿ.ಐ. ಸಿಬ್ಬಂದಿಗಳ ಬೇಡಿಕೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರು (ಪದವೀಧರರ ಕ್ಷೇತ್ರ) :–**

೬೯೭ (೮೮೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಅನುದಾನಿತ ಐ.ಟಿ.ಐ. ಸಿಬ್ಬಂದಿಗಳಿಗೆ ೨೦ ವರ್ಷದ ಟೈಂ ಬಾಂಡ್ ಸೌಲಭ್ಯವನ್ನು ನೀಡಲಾಗಿದೆಯೇ ; ಈ ಸೌಲಭ್ಯ ನೀಡುವಲ್ಲಿ ವಿಳಂಬವಾಗಿದ್ದರೆ ಅದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಅ) ಐ.ಟಿ.ಐ. ಸಿಬ್ಬಂದಿಗೆ ಪ್ರತಿ ತಿಂಗಳು ನಿಗಧಿತ ವೇಳೆಯಲ್ಲಿ ವೇತನ ಬಿಡುಗಡೆ ಮಾಡುವುದು ಮತ್ತು ಪರೀಕ್ಷಾ ಸಂಭಾವನೆಗಳನ್ನು ಪರೀಕ್ಷಾ ಕಾರ್ಯ ಮುಗಿದ ನಂತರ ಕೂಡಲೇ ಬಿಡುಗಡೆ ಮಾಡುವ ವ್ಯವಸ್ಥೆಯನ್ನು ಜಾರಿಗೆ ತರುವಲ್ಲಿ ಏನಾದರೂ ತೊಂದರೆಗಳು ಇದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಅನುದಾನಿತ ಐ.ಟಿ.ಐ. ಸಿಬ್ಬಂದಿಗಳನ್ನು ಎ.ಐ.ಟಿ.ಟಿ. ಪರೀಕ್ಷೆಯಲ್ಲಿ ಪ್ರಾಕ್ಟಿಕಲ್ ಎಕ್ಸಾಮಿನರ್ ಆಗಿ ನೇಮಕ ಮಾಡಲಾಗುತ್ತಿದೆಯೇ ?

## ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ ಬೇಡಿಕೆ ಅರ್ಜಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೮ (೮೧೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ರಾಜ್ಯದಾದ್ಯಂತ ನಿವೇಶನಗಳ ಬೇಡಿಕೆ ಸಮೀಕ್ಷೆ ಅರ್ಜಿಗಳನ್ನು ಯಾವಾಗ ಆಹ್ವಾನಿಸಲಾಗಿದೆ ;

(ಆ) ಇದರ ಸಂಬಂಧ ನಿವೇಶನ ಬೇಡಿಕೆಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಅರ್ಜಿಗಳ ಜೊತೆಯಲ್ಲಿ ಜನರು ಕರ್ನಾಟಕ ಗೃಹ ಮಂಡಳಿಗೆ ಪಾವತಿಸಿದ ನೋಂದಣಿ/ಅರ್ಜಿ ಶುಲ್ಕ ಎಷ್ಟು ; ಈ ಹಣ ಯಾವ ಖಾತೆಗೆ ಜಮೆಯಾಗಿದೆ ;

(ಈ) ಅರ್ಜಿ ಸಲ್ಲಿಸಿದ ಎಲ್ಲರಿಗೂ ನಿವೇಶನ ನೀಡಲಾಗಿದೆಯೇ ; ನೀಡದಿರಲು ಕಾರಣಗಳೇನು ; ಅವರ ಹಣವನ್ನು ಯಾವಾಗ ಹಿಂತಿರುಗಿಸಲಾಗುವುದು ?

## ರಾಜ್ಯದಲ್ಲಿರುವ ನಿವೇಶನ ರಹಿತರ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯ (೮೧೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ನಿವೇಶನ ರಹಿತರ ಸಂಖ್ಯೆ ಎಷ್ಟು ;

(ಆ) ಪ್ರತಿ ವರ್ಷ ಎಷ್ಟು ಜನ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡಲು ಕಾನೂನಿನಡಿ ಅವಕಾಶ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಾಲಿ ಸರ್ಕಾರವು ಅಧಿಕಾರಕ್ಕೆ ಬಂದ ಮೇಲೆ ಎಷ್ಟು ನಿವೇಶನ ರಹಿತರಿಗೆ ನಿವೇಶನಗಳನ್ನು ನೀಡಲಾಗಿದೆ ; (ವಿವರ ನೀಡುವುದು)

(ಈ) ನಿವೇಶನ ಹಂಚಿಕೆಗಾಗಿ ಬಾಕಿ ಇರುವ ಪ್ರಕರಣಗಳಿಗೆ ಇರುವ ಅಡೆತಡೆಗಳೇನು ; ಹಾಗೂ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ?

## LAND ACQUISITION UNDER LA ACT

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೭೦ (೮೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(a) Regarding rhw land acquisition Under LA Act in favour of Bank Officers and Officials House Building Co-Operative Society, Bengaluru in Yelachenahally and Jaraganahally villages, Uttarahally Hobli, Bengaluru South Taluk, furnish the date of Notification under section 4(1) and 6 (1) with total extent, Date of Award passed, Amount of Award total ;

(b) Whether land owners have received the award amount ; if so, details such as name of the land owner, Survey No, Extent Award amount, date of payment etc may be given ;

(c) If award amount not received by the land owners, whether the amount still with SLAO or deposited in the treasury/court details may be given ?

## REGARDING LAND ACQUISITION

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೭೦೧ (೮೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(a) Land acquired in favour of Bank Officers and Officials House Building Co-Operative Society, Bengaluru in Yelachenahally and Jaraganahally villages, Uttrahally Hobli, Bengaluru South Taluk ;

(b) Date of notification under section 16(2) of LA Act published ;

(c) Whether Government has taken (not paper possession) actual physical possession of the acquired land, if so, when ; details may be provided ;

(d) Whether (Vacant) actually physical possession vests with the Government even now ;

(e) If not who are in the actual possession of the acquired property at present and what action Government proposes to take to get the unauthorized occupants vacated from the land ;

(f) In case Government cannot take vacant possession and handover to the Society what will be the fate of the society which has struggled for the past 35 years and also successfully contested and own all the cases up to Supreme Court ;

(g) What will be the next course of action Government proposes in this regard ;

(h) Will Government proposes any formula for compromising the issue between the society and present occupant ; If so what formula ?

## ಗೃಹ ಇಲಾಖೆಯಿಂದ (ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿ ವರ್ಗದ) ಹೌಸಿಂಗ್ ಬೋರ್ಡ್‌ಗೆ ನಿವೇಶನ ಕೋರಿ ಅರ್ಜಿ ಸಲ್ಲಿಸಿರುವ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೭೦೨ (೬೪೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೌಸಿಂಗ್ ಬೋರ್ಡಿನಿಂದ ಬೆಂಗಳೂರು ಗ್ರಾಮಾಂತರದ ನೆಲಮಂಗಲದಲ್ಲಿ ಹಾಗೂ ಮೈಸೂರು, ಬನ್ನೂರು ರಸ್ತೆ, ಭಗತ್

ಹಳ್ಳಿ ಭಾಗದಲ್ಲಿ ನಿವೇಶನ ಕೋರಿ ಗೃಹ ಇಲಾಖೆಯಿಂದ (ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿ ವರ್ಗದ) ಹೆಸರು ನೋಂದಾಯಿಸಿಕೊಂಡಿರುವ ಒಟ್ಟು ಸದಸ್ಯರುಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಎಷ್ಟು ಸದಸ್ಯರುಗಳಿಂದ ನಿವೇಶನ ಕೋರಿ ಅರ್ಜಿ ಸಲ್ಲಿಸಲಾಗಿದೆ ; ನಿವೇಶನದ ಮೌಲ್ಯ ಎಷ್ಟು ; (ಆಳತೆವಾರು ವಿವರ ನೀಡುವುದು)

(ಇ) ಸದಸ್ಯರುಗಳಿಂದ ಈಗಾಗಲೇ ಪಾವತಿಯಾಗಿರುವ ಹಣ ಎಷ್ಟು ; (ದಿನಾಂಕ ಸಹಿತ ವಿವರ ನೀಡುವುದು) ಆ ಪೈಕಿ ಎಷ್ಟು ಅರ್ಜಿದಾರರಿಗೆ ನಿವೇಶನವನ್ನು ಹಂಚಿಕೆ ಮಾಡಲಾಗಿದೆ ; ಇಲ್ಲದಿದ್ದಲ್ಲಿ, ಕಾರಣವೇನು ; ಯಾವ ಕಾಲಮಿತಿಯೊಳಗೆ ಹಂಚಿಕೆ ಮಾಡಲಾಗುವುದು ?

## ಕರ್ನಾಟಕ ಭೂ ಕಂದಾಯ ಕಾಯ್ದೆ ೧೯೬೪ರ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೦೩ (೫೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಭೂ ಕಂದಾಯ ಕಾಯ್ದೆ, ೧೯೬೪ರ ಕಲಂ, ೯೪ಎ, ೯೪ಬಿ ಅನ್ವಯ ನಮೂನೆ ೫೦ ಮತ್ತು ೫೩ರಲ್ಲಿ ಎಷ್ಟು ಜನ ರೈತರು ಬಗರ್ ಹುಕುಂ ಸಾಗುವಳಿಯ ಸಕ್ರಮಕ್ಕಾಗಿ ಅರ್ಜಿಗಳನ್ನು ಸಲ್ಲಿಸಿದ್ದರು ; ಎಷ್ಟು ಎಕರೆ ಪ್ರದೇಶವನ್ನು ಅದು ಒಳಗೊಂಡಿರುತ್ತದೆ ;

(ಆ) ಯಾವ ಯಾವ ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಸಂಖ್ಯೆಯಲ್ಲಿ ಅರ್ಜಿಗಳನ್ನು ಸಲ್ಲಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇದುವರೆಗೆ ಎಷ್ಟು ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆ ; ಆ ಪೈಕಿ ಎಷ್ಟು ಎಕರೆ ಭೂಮಿಯನ್ನು ಸಕ್ರಮಗೊಳಿಸಿ ಆದೇಶಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಸಣ್ಣ ನೀರಾವರಿ ಕೆರೆ ಕುಂಟೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೦೪ (೫೧೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಸೇರಿದ ಕೆರೆ ಕುಂಟೆ ಮುಂತಾದವು ಯಾವ ಯಾವ ಗ್ರಾಮದಲ್ಲಿ ಅಸ್ತಿತ್ವದಲ್ಲಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸದರಿ ಕೆರೆ–ಕುಂಟೆಗಳ ದುರಸ್ಥಿ ಮತ್ತು ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅದಕ್ಕಾಗಿ ವೆಚ್ಚ ಮಾಡಿರುವ ಹಣವೆಷ್ಟು ; (ಕೆರೆ ಕುಂಟೆವಾರು ವಿವರ ನೀಡುವುದು)

(ಇ) ೨೦೧೪–೧೫, ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಿಂದ ಈವರೆವಿಗೆ ಕೆರೆ–ಕುಂಟೆಗಳಿಗೆ ತುಂಬಿಸಲಾದ ನೀರಿನ ಪ್ರಮಾಣವೆಷ್ಟು ; ಆ ನೀರನ್ನು ಸದ್ಬಳಕೆ ಮಾಡಿಕೊಂಡ ಜಮೀನಿನ ವಿಸ್ತೀರ್ಣವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಆನೆ–ಮಾನವ ಸಂಘರ್ಷ ತಡೆಗಟ್ಟಲು ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦೫ (೮೯೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಆನೆ–ಮಾನವ ಸಂಘರ್ಷದಿಂದ ಜೀವಹಾನಿ ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಪದೇ ಪದೇ ನಡೆಯುತ್ತಿರುವ ಆನೆ ದಾಳಿಯನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಸಮಸ್ಯೆಗೆ ಶಾಶ್ವತ ಪರಿಹಾರ ರೂಪಿಸಲು ಸಾಧ್ಯವಿಲ್ಲವೇ ;

(ಈ) ಸಾಧ್ಯವಿದ್ದಲ್ಲಿ, ಶಾಶ್ವತ ಪರಿಹಾರ ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾರಂಗಿ ಜಲಾಶಯ ನಿರ್ಮಾಣದಿಂದ ಜಾಗ ಕಳೆದುಕೊಂಡವರಿಗೆ ಪುನರ್ವಸತಿ ಕಲ್ಪಿಸದೆ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦೬ (೮೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೪೦ ವರ್ಷಗಳ ಹಿಂದೆ ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಹಾರಂಗಿಯಲ್ಲಿ ಹಾರಂಗಿ ಜಲಾಶಯ ನಿರ್ಮಾಣವಾದ ಸಂದರ್ಭದಲ್ಲಿ ಜಾಗ ಕಳೆದುಕೊಂಡು ನಿರಾಶ್ರಿತರಾದವರಿಗೆ ಇದುವರೆಗೂ ಪುನರ್ವಸತಿ ಕಲ್ಪಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಜಾಗ ಕಳೆದುಕೊಂಡು ನಿರಾಶ್ರಿತರಾದವರ ಸಂಖ್ಯೆ ಎಷ್ಟು ; ಹಾಗೂ ಇದುವರೆಗೂ ಪುನರ್ವಸತಿ ಕಲ್ಪಿಸಿರುವವರ ಸಂಖ್ಯೆ ಎಷ್ಟು ಹಾಗೂ ಇನ್ನೂ ಪುನರ್ವಸತಿ ಸಿಗಬೇಕಾದವರ ಸಂಖ್ಯೆ ಎಷ್ಟು ;

(ಇ) ಜಾಗ ಕಳೆದುಕೊಂಡ ನಿರಾಶ್ರಿತರು ಹಾರಂಗಿ ನಾಲೆಯ ದಡದಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದು, ಇಂದಿಗೂ ಪುನರ್ವಸತಿಯಿಂದ ವಂಚಿತರಾಗಿದ್ದು, ಇವರಿಗೆ ಯಾವ ಕಾಲಮಿತಿಯೊಳಗೆ ಪುನರ್ವಸತಿ ಕಲ್ಪಿಸಲಾಗುವುದು ?

## ಕೊಡಗಿನಲ್ಲಿ ಪ್ರತಿವರ್ಷ ನಡೆಯುವ ಪ್ರತಿಷ್ಠಿತ ಕೊಡವ ಹಾಕಿ ಹಬ್ಬಕ್ಕೆ ರಾಜ್ಯದ ಮುಂಗಡ ಪತ್ರದಲ್ಲಿ ಅನುದಾನವನ್ನು ಘೋಷಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦೭ (೮೪೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗಿನಲ್ಲಿ ಪ್ರತಿವರ್ಷ ನಡೆಯುವ ಪ್ರತಿಷ್ಠಿತ ಕೊಡವ ಹಾಕಿ ಹಬ್ಬಕ್ಕೆ ರಾಜ್ಯದ ಮುಂಗಡ ಪತ್ರದಲ್ಲಿ ಅನುದಾನವನ್ನು ಘೋಷಣೆ ಮಾಡಲಾಗುವುದೇ ;

(ಆ) ರಾಜ್ಯದ ಮುಂಗಡ ಪತ್ರದಲ್ಲಿ ಕೊಡವ ಹಾಕಿ ಹಬ್ಬಕ್ಕೆ ಅನುದಾನವನ್ನು ಘೋಷಣೆ ಮಾಡಿ ಹಾಕಿ ಕ್ರೀಡೆಗೆ ಉತ್ತೇಜನ ನೀಡಲಾಗುವುದೇ ;

(ಇ) ಯಾವ ಕಾಲಮಿತಿಯೊಳಗೆ ಈ ಕುರಿತು ಕ್ರಮ ಕೈಗೊಳ್ಳಲಾಗುವುದು ?

## ಗೋಮಾಳದ ಜಮೀನನ್ನು ಅರಣ್ಯ ಇಲಾಖೆಗೆ ವಹಿಸಿರುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦೮ (೮೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗೋವಾಳ/ಗುಂಡುತೋಪು ಇತ್ಯಾದಿಗಳಿಗೆ ನಿಗಧಿಪಡಿಸಿದ ಸರ್ಕಾರಿ ಜಮೀನನ್ನು ಸಾಮಾಜಿಕ ಅರಣ್ಯ ಇಲಾಖೆಗೆ ಒಟ್ಟು ಎಷ್ಟು ಎಕರೆ ಜಮೀನನ್ನು ನೀಡಲಾಗಿದೆ ;

(ಆ) ಹೀಗೆ ಅರಣ್ಯ ಇಲಾಖೆಗೆ ನೀಡಿದ ಜಮೀನಿನಲ್ಲಿ ಸಾರ್ವಜನಿಕರು ಮನೆ ಕಟ್ಟಿಕೊಂಡಲ್ಲಿ, ಅವರಿಗೆ ಸಕ್ರಮಾತಿ ಆದೇಶ ನೀಡದಿರಲು ಕಾರಣವೇನು ;

(ಇ) ಸರ್ಕಾರವೇ ಅರಣ್ಯ ನಿರ್ವಹಣೆಗಾಗಿ ವಹಿಸಿದ ಜಮೀನನ್ನು ಹಿಂಪಡೆಯಲು ಸುಗ್ರೀವಾಜ್ಞೆ ಕಾಯ್ದೆಯ ಅಧಿಸೂಚನೆಯನ್ನು ಹೊರಡಿಸಲಾಗುವುದೇ ;

(ಈ) ಮನೆ ಕಟ್ಟಿಕೊಂಡಿರುವವರಿಗೆ ಅರಣ್ಯ ಇಲಾಖೆ ಬಳಸದೆ ಇರುವ ಜಮೀನನ್ನು ಹಿಂದಕ್ಕೆ ಪಡೆಯಲು ಕಾನೂನನ್ನು ರೂಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ವಿವಿಧ ಉದ್ದೇಶಗಳಿಗೆ ಹಂಚಿಕೆಯಾಗಿರುವ ಜಮೀನಿನ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦೯ (೮೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ವಿವಿಧ ಉದ್ದೇಶಗಳಿಗಾಗಿ ಸರ್ಕಾರದಿಂದ ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಿರುವ ಜಮೀನು ಎಷ್ಟು;

(ಆ) ಯಾವ ಯಾವ ಸಂಘ ಸಂಸ್ಥೆಗಳಿಗೆ ಯಾವ ಯಾವ ದಿನಾಂಕಗಳಂದು ಎಷ್ಟು ಎಕರೆ ಹಾಗೂ ಯಾವ ಬೆಲೆ ನಿಗಧಿಪಡಿಸಿ ಮಂಜೂರು ಮಾಡಲಾಗಿದೆ ;

(ಇ) ಸರ್ಕಾರ ಮಂಜೂರು ಮಾಡಿರುವ ಜಮೀನಿನ ದರವನ್ನು ಪಾವತಿ ಮಾಡಲು ಕೊನೆಯ ದಿನಾಂಕ ನಿಗಧಿಪಡಿಸಿದೆಯೇ ;

(ಈ) ಹಾಗಿದ್ದಲ್ಲಿ, ಈ ಸಂಘ ಸಂಸ್ಥೆಗಳು ಹಣವನ್ನು ಪಾವತಿಸಿದ ದಿನಾಂಕಗಳು ಯಾವುವು ;

(ಉ) ಸರ್ಕಾರ ಮಂಜೂರು ಮಾಡಿದ ಈ ಜಮೀನುಗಳನ್ನು ಎಷ್ಟು ಸಂಸ್ಥೆಗಳು ಉದ್ದೇಶಿತ ಯೋಜನೆಗಳನ್ನು ಪೂರ್ಣಗೊಳಿಸಿದೆ ; ಇನ್ನೂ ಪೂರ್ಣಗೊಳ್ಳದಿರುವ ಸಂಸ್ಥೆಗಳ ಹೆಸರು ವಿಳಾಸದ ಮಾಹಿತಿಯನ್ನು ಒದಗಿಸುವುದು ;

(ಊ) ನಿಗಧಿಪಡಿಸಿದ ಕಾಲಾವಧಿಯಲ್ಲಿ ಶುಲ್ಕ ಕಟ್ಟದೆ ಇರುವ ಸಂಸ್ಥೆಗಳು ಯಾವುವು ; ಅವುಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ಸ್ಮಶಾನಕ್ಕೆ ಜಮೀನು ಮಂಜೂರಾತಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೧೦ (೮೨೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳು ವಾಸಿಸುವ ಗ್ರಾಮಗಳಿಗೆ ಪ್ರತ್ಯೇಕ ಸ್ಮಶಾನದ ವ್ಯವಸ್ಥೆ ಮಾಡಲು ಸರ್ಕಾರ ತೀರ್ಮಾನಿಸಿದೆಯೇ ;

(ಆ) ಹಾಗಿದ್ದಲ್ಲಿ, ಇದುವರೆವಿಗೂ ಯಾವ ಯಾವ ಗ್ರಾಮಗಳಲ್ಲಿ ಸ್ಮಶಾನಕ್ಕೆ ಭೂಮಿಯನ್ನು ಕಾಯ್ದಿರಿಸಲಾಗಿದೆ ; ಹಾಗೂ ಎಷ್ಟು ಗ್ರಾಮಗಳಿಗೆ ಈಗಾಗಲೇ ಜಮೀನನ್ನು ಮಂಜೂರು ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಜಮೀನುಗಳ ಹದ್ದುಬಸ್ತು ಕೋರಿ ಬಂದಿರುವ ಅರ್ಜಿಗಳ ವಿಲೇವಾರಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೧೧ (೮೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಿಂದ ೨೦೧೭–೧೮ ಸಾಲಿನವರೆಗೆ ರೈತರ ಜಮೀನಿನ ಹದ್ದುಬಸ್ತು ಕೋರಿ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಅರ್ಜಿದಾರರ ಹೆಸರು ಮತ್ತು ವಿಳಾಸ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ನಿಗಧಿತ ಅವಧಿಯಲ್ಲಿ ಜಮೀನಿನ ಹದ್ದುಬಸ್ತು ಮಾಡದೆ ಇರುವುದರಿಂದ, ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಹದ್ದುಬಸ್ತು ಕಾರ್ಯವನ್ನು ಪೂರ್ಣಗೊಳಿಸಿ ರೈತರಿಗೆ ಅನುಕೂಲ ಕಲ್ಪಿಸಿಕೊಡಲಾಗುವುದು ;

(ಈ) ಭೂ ಮಾಪಕರ ಕೊರತೆಯಿಂದಾಗಿ ಜಮೀನಿನ ಹದ್ದುಬಸ್ತು ಕಾರ್ಯವು ಪೂರ್ಣವಾಗಿ ಸ್ಥಗಿತಗೊಳ್ಳಲು ಕಾರಣಗಳೇನು ;

(ಉ) ರೈತರ ಜಮೀನಿನ ಹದ್ದುಬಸ್ತು ಕಾರ್ಯವನ್ನು ಪೂರ್ಣಗೊಳ್ಳಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ಗುತ್ತಿಗೆದಾರರಿಗೆ ಹಣ ಪಾವತಿ ಮಾಡದೇ ಇರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೨ (೫೩೦) ಮಾನ್ಯ ಅರಣ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೦–೧೧ನೇ ಸಾಲಿನಲ್ಲಿ ಕೆನರಾ ವೃತ್ತದ ಹಳಿಯಾಳ ವಿಭಾಗದ ಕಿಲ್ಲಾ ಗಾರ್ಡನ್ ಹಾಗೂ ಮರಡಿಗುಡ್ಡಾದಲ್ಲಿ ಎರೆಡರಡು ಶೌಚಾಲಯ ನಿರ್ಮಾಣ ಮಾಡಿರುವ ಗುತ್ತಿಗೆದಾರರಿಗೆ ಇಲ್ಲಿಯವರೆಗೆ ಅನುದಾನ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅನುದಾನ ಬಿಡುಗಡೆ ಮಾಡಲು ಸಂಬಂಧಿಸಿದ ಇಲಾಖೆಗೆ ಸೂಕ್ತ ನಿರ್ದೇಶನ ನೀಡುವುದು ? (ವಿವರ ನೀಡುವುದು)

## ಕೂಲಿ ಕಾರ್ಮಿಕರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೩ (೫೩೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಕೂಲಿ ಕಾರ್ಮಿಕರ ಸಂಖ್ಯೆ ಎಷ್ಟು ; (ಪುರುಷರ, ಮಹಿಳೆಯರ ಹಾಗೂ ಅಂಗವಿಕಲರ ವರ್ಗವಾರು ಮಾಹಿತಿ ನೀಡುವುದು)

(ಆ) ಮಹಿಳಾ ಮತ್ತು ಅಂಗವಿಕಲ ಕೂಲಿ ಕಾರ್ಮಿಕರಿಗೆ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳಾವುವು ; ಅಥವಾ ಯಾವುದಾದರು ವಿಶೇಷ ಯೋಜನೆಗಳನ್ನು ರೂಪಿಸುವ ಇಂಗಿತ ಸರ್ಕಾರದ ಮುಂದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಆರೋಗ್ಯ ವಿಮಾ ಕಾರ್ಡುಗಳ ಬೇಡಿಕೆ ಇದ್ದರೂ ಸಹ ಎಲ್ಲಾ ವರ್ಗದ ಕೂಲಿ ಕಾರ್ಮಿಕರಿಗೆ ಸರಿಯಾಗಿ ಹಂಚಿಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಬೆಲೆಬಾಳುವ ಸಾಗುವಾನಿ ಮರ ಅಕ್ರಮ ಸಾಗಾಣಿಕೆ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೪ (೫೧೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆನರಾ ವೃತ್ತದ ಹಳಿಯಾಳ ವಿಭಾಗದ ಸಾಬ್ರಾಣಿ ವಲಯದಲ್ಲಿ ಬೆಲೆಬಾಳುವ ಸಾಗವಾನಿ ಮರದ ತುಂಡುಗಳು ಪೋಲೀಸ್ ವಾಹನದಲ್ಲಿ ಸಿಕ್ಕಿದ್ದು, ಇದಕ್ಕೆ ಸಂಬಂಧಿಸಿದ ಇಲಾಖೆಯವರು ತನಿಖೆಯಲ್ಲಿ ಹಸ್ತಕ್ಷೇಪ ಮಾಡುತ್ತಿರುವುದು ನಿಜವೇ ; (ವಿವರ ನೀಡುವುದು)

(ಆ) ಸದರಿ ಬೆಲೆ ಬಾಳುವ ಮರಗಳ ಅಕ್ರಮ ಸಾಗಾಣಿಕೆ ಪೊಲೀಸ್ ವಾಹನದಲ್ಲಿ ಆದ ಬಗ್ಗೆ ಪೊಲೀಸ್ ಇಲಾಖೆಯ ವಾಹನ ಚಾಲಕನ ಮೇಲೆ ಕ್ರಮ ಕೈಗೊಂಡಿದ್ದು, ಸದರಿ ವಾಹನವನ್ನು ಯಾವ ಕಾರಣಕ್ಕಾಗಿ ಮುಟ್ಟುಗೋಲು ಹಾಕಿಕೊಂಡಿರುವುದಿಲ್ಲ ; ಇದಕ್ಕೆ ನಿಯಮಾವಳಿಯಲ್ಲಿ ಅವಕಾಶವಿದೆಯೇ ; (ವಿವರ ನೀಡುವುದು)

(ಇ) ಸದರಿ ವಾಹನದಲ್ಲಿ ಅಕ್ರಮ ಬೆಲೆ ಬಾಳುವ ಸಾಗವಾನಿ ಮರದ ಸಾಗಾಣಿಕೆಯಲ್ಲಿ ಯಾವುದೇ ಅಧಿಕಾರಿಯ ನೇರ ಶಾಮೀಲಾತಿ ಇರುತ್ತದೆಯೆಂಬ ಮಹತ್ವದ ದಾಖಲೆ ಸಂಬಂಧಿಸಿದ ಅರಣ್ಯ ಇಲಾಖೆಯ ಅಧಿಕಾರಿಯ ಹತ್ತಿರ ಇದ್ದರೂ ಸಹ ಸರಿಯಾದ ತನಿಖೆ ಮಾಡದೇ, ಸರಿಯಾದ ಕ್ರಮ ಕೈಗೊಳ್ಳದಿರುವುದು ಅರಣ್ಯಾಧಿಕಾರಿಯ ಮೇಲೆ ಸಂಶಯಕ್ಕೆ ಆಸ್ಪದವಾಗಿರುವುದರಿಂದ, ಸದರಿ ವಿಷಯದಲ್ಲಿ ಸರ್ಕಾರ ಸಮಗ್ರ, ತನಿಖೆ ಮಾಡಿ ಅದರಲ್ಲಿ ಭಾಗಿಯಾಗಿರುವವರ ಮೇಲೆ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಸದರಿ ಬೆಲೆ ಬಾಳುವ ಮರ ಅಕ್ರಮವಾಗಿ ಸಂಗ್ರಹಿಸಿದ ಬಗ್ಗೆ ಅಲ್ಲಿಗೆ ಹೋದ ಪೊಲೀಸ್ ಅಧಿಕಾರಿ ಸಂಬಂಧಿಸಿದ ಅರಣ್ಯ ಇಲಾಖೆ ಅಧಿಕಾರಿಗೆ ನಿರ್ದೇಶನ ನೀಡುವುದನ್ನು ಬಿಟ್ಟು ಪೊಲೀಸ್ ವಾಹನದಲ್ಲಿ ಅಷ್ಟೊಂದು ಅಕ್ರಮ ಕಟ್ಟಿಗೆ ತರುವುದು ಸಂಶಯಕ್ಕೆ ಆಸ್ಪದವಾಗಿರುವ ವಿಷಯ ಸಾರ್ವಜನಿಕ ವಲಯದಲ್ಲಿ ತಿಳಿದು ಬಂದಿದ್ದು, ಸದರಿ ವಿಷಯದಲ್ಲಿ ಸಮಗ್ರ ತನಿಖೆ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಕಾರವಾರ ಜಿಲ್ಲೆಯಲ್ಲಿ ವಿಧವೆ ವೇತನ, ವೃದ್ಧಾಪ್ಯ ವೇತನ ಬಾಕಿ ಇರುವುದರ ವಿವರ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೫ (೫೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ವಿಧವಾ ವೇತನ, ವೃದ್ಧಾಪ್ಯ ವೇತನ ಹಾಗೂ ಅಂಗವಿಕಲರ ವೇತನವನ್ನು ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಇದುವರೆಗೂ ವೇತನಕ್ಕಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರಲು ಕಾರಣಗಳೇನು ? (ತಾಲ್ಲೂಕುವಾರು ಬಾಕಿ ಇರುವ ಅರ್ಜಿಗಳವಾರು, ಹೆಸರು ಸಂಪೂರ್ಣ ವಿವರ ನೀಡುವುದು)

## ೧೯೭೮ರ ಪೂರ್ವದಿಂದ ಸಾಗುವಳಿ ಮಾಡುತ್ತಿರುವ ಜಮೀನು ಮಂಜೂರಿ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೬ (೫೩೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಜಿಲ್ಲೆಯ ಧಾರವಾಡ ತಾಲ್ಲೂಕಿನ ದೊಪೆನಟ್ಟಿ ಗ್ರಾಮದ ಬ್ಲಾಕ್ ನಂ:– ೧೦೭ ಮತ್ತು ೧೦೮ ರಲ್ಲಿಯ ಒಟ್ಟು ೫–೨೯–೦೦ ಕ್ಷೇತ್ರ ಜಮೀನನ್ನು ತಲೆಮಾರುಗಳ ಹಿಂದಿನಿಂದಲೂ

ಅತಿಕ್ರಮಿಸಿ ಕಬ್ಜಾ ವಹಿವಾಟಿನಲ್ಲಿ ಇಟ್ಟುಕೊಂಡು ಸಾಗುವಳಿ ಮಾಡುತ್ತಾ ಬಂದಿರುವ ಬಡ ರೈತರು ಈಗ ಅರಣ್ಯ ಇಲಾಖೆಯವರು ಖುಲ್ಲಾ ಮಾಡಲು ಪ್ರಯತ್ನಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಸ್ಥಳದಲ್ಲಿ ಸಾಗುವಳಿ ಮಾಡುತ್ತಿರುವ ಬಗ್ಗೆ ಸುಮಾರು ೧೯೭೮ರ ಪೂರ್ವದಿಂದಲೂ ಪಹಣಿ ಪತ್ರಿಕೆಯಲ್ಲಿ ಕೆಲವೊಂದು ರೈತರ ಹೆಸರು ದಾಖಲಾಗಿದ್ದರು. ಅವರುಗಳನ್ನು ಹೊರ ಹಾಕುತ್ತಿರುವುದುದರಿಂದ ಬಡ ರೈತರಿಗೆ ತೊಂದರೆಯಾಗಿರುವುದನ್ನು ಸರ್ಕಾರ ಗಮನಿಸಿ ಇಲಾಖೆಯಿಂದ ವರದಿ ಪಡೆದುಕೊಂಡು ಬಡ ರೈತರಿಗೆ ಅನುಕೂಲ ಮಾಡಿಕೊಡುವುದೇ ; (ವಿವರ ನೀಡುವುದು)

(ಇ) ದಿನಾಂಕ: ೨೭/೦೪/೧೯೭೮ರ ಪೂರ್ವದಲ್ಲಿ ೩೦ ಕುಟುಂಬಗಳ ಅತಿ ಕ್ರಮಣ ಕುರಿತು ಮಾಡಿರುವ ಯಾದಿಯಲ್ಲಿ ಒಬ್ಬರಿಗೆ ಸಕ್ರಮವಾಗಿರುವ ವಿಷಯ ತಿಳಿದು ಬಂದಿದ್ದು, ಉಳಿದವರಿಗೆ ಅನ್ಯಾಯವಾಗಿರುವುದರ ಕುರಿತು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ? (ದಾಖಲಾತಿಗಳೊಂದಿಗೆ ವಿವರ ನೀಡುವುದು)

## ಅಸಂಘಟಿತ ಕಾರ್ಮಿಕರ ಕಲ್ಯಾಣ ಯೋಜನೆಯ ಕುರಿತು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೭೧೭ (೮೨೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಸಂಘಟಿತ ವಲಯದಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾರ್ಮಿಕರ ಸಮೀಕ್ಷೆ ನಡೆಸಲಾಗಿದೆಯೇ ; ಕಳೆದ ೦೩ ವರ್ಷಗಳಿಂದ ಸರ್ಕಾರವು ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಯೋಜನೆಗಳ ಅಡಿಯಲ್ಲಿ ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಇ) ಸದರಿ ಕಾರ್ಮಿಕರ ಭದ್ರತೆಗೆ ಇರುವ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ಹಮ್ಮಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

## ಕರ್ನಾಟಕ ರಾಜ್ಯವನ್ನು ಬಾಲ ಕಾರ್ಮಿಕ ಮುಕ್ತ ರಾಜ್ಯವನ್ನಾಗಿ ಮಾಡುವ ಕುರಿತು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೭೧೮ (೮೨೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯವನ್ನು ಬಾಲ ಕಾರ್ಮಿಕ ಮುಕ್ತ ರಾಜ್ಯವನ್ನಾಗಿ ಮಾಡುವ ಕುರಿತು ಸರ್ಕಾರವು ರೂಪಿಸಿರುವ ಕ್ರಿಯಾ ಯೋಜನೆಗಳಾವುವು ;

(ಆ) ಈ ಕ್ರಿಯಾ ಯೋಜನೆ ಮತ್ತು ರಾಷ್ಟ್ರೀಯ ಬಾಲಕಾರ್ಮಿಕ ಕ್ರಿಯಾ ಯೋಜನೆಗಳ ಮೂಲಕ ಕಳೆದ ೦೫ ವರ್ಷಗಳಲ್ಲಿ ಎಷ್ಟು ಮಕ್ಕಳನ್ನು ಬಿಡುಗಡೆಗೊಳಿಸಿ ಶಾಲೆಗಳಿಗೆ ಸೇರಿಸಲಾಗಿದೆ ;

(ಇ) ಬಾಲ ಕಾರ್ಮಿಕರನ್ನು ನೇಮಿಸಿಕೊಂಡ ಮಾಲೀಕರುಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಮತ್ತು ಎಷ್ಟು ಅಪರಾಧಿಗಳನ್ನು ಶಿಕ್ಷಿಸಲಾಗಿದೆ ; (ಜಿಲ್ಲಾವಾರು ೦೫ ವರ್ಷಗಳ ವಿವರ ನೀಡುವುದು)

(ಈ) ರಾಷ್ಟ್ರೀಯ ಮತ್ತು ರಾಜ್ಯ ಬಾಲ ಕಾರ್ಮಿಕ ಯೋಜನೆಯಡಿ ಚಾಲನೆಯಲ್ಲಿರುವ ವಿಶೇಷ ವಸತಿ ಶಾಲೆಗಳು ಮತ್ತು ಅವುಗಳಲ್ಲಿ ಪುನರ್ವಸತಿಗೊಳಿಸಿರುವ ಮಕ್ಕಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ೫ ವರ್ಷಗಳ ವಿವರ ನೀಡುವುದು)

## ಮೀನುಗಾರಿಕೆ ಇಲಾಖೆಯಲ್ಲಿನ ಮತ್ಸಾಶ್ರಯ ಯೋಜನೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೭೯ (೮೨೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೫ ವರ್ಷಗಳಿಂದ ಆಯವ್ಯಯದಲ್ಲಿ ಮೀನುಗಾರಿಕೆ ಇಲಾಖೆಗೆ ಎಷ್ಟು ಅನುದಾನ ನೀಡಲಾಗಿದೆ ;

(ಆ) ರಾಜ್ಯದಲ್ಲಿ ಈ ವರ್ಷ ಮೀನುಗಾರರಿಗೆ ಮತ್ಸಾಶ್ರಯ ಯೋಜನೆಯಡಿಯಲ್ಲಿ ಎಷ್ಟು ಮನೆಗಳ ನಿರ್ಮಾಣ ಮಾಡಲಾಗಿದೆ ;

(ಇ) ಕರಾವಳಿ ಪ್ರದೇಶಗಳಲ್ಲಿ ಹೆಚ್ಚಿನ ಮೀನುಗಾರರು ಇರುವ ಪ್ರದೇಶಗಳಲ್ಲಿ ವಸತಿ ಸೌಕರ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ?

## ಅಧಿನಿಯಮ ೯೪ ಸಿ ಯಡಿಯಲ್ಲಿ ಮನೆಗಳನ್ನು ಸಕ್ರಮಗೊಳಿಸುವ ಬಗ್ಗೆ

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೭೨೦ (೮೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಸರ್ಕಾರಿ ಜಾಗದಲ್ಲಿ ಮನೆ ನಿರ್ಮಿಸಿ ವಾಸವಾಗಿರುವ ಕುಟುಂಬಗಳ ಮನೆಗಳನ್ನು ಸಕ್ರಮಗೊಳಿಸುವ ಸಲುವಾಗಿ ಈಗಾಗಲೇ ಭೂ ಕಂದಾಯ ಅಧಿನಿಯಮ ೯೪ ಸಿ ಯಡಿಯಲ್ಲಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಅಂಕಿ ಅಂಶಗಳನ್ನು ನೀಡುವುದು)

(ಆ) ಈ ಅಧಿನಿಯಮದಡಿಯಲ್ಲಿ ರಾಜ್ಯದ ಪ್ರದೇಶಾನುಸಾರ ನೀತಿಗಳನ್ನು ರೂಪಿಸಲಾಗಿದೆಯೇ ಅಥವಾ ಏಕರೂಪ ನೀತಿ ಜಾರಿಯಲ್ಲಿದೆಯೇ ; (ಮಾಹಿತಿ ನೀಡುವುದು)

(ಇ) ಎಷ್ಟು ಕುಟುಂಬಗಳಿಗೆ ಮನೆ ಸಕ್ರಮಗೊಳಿಸಿ ಹಕ್ಕುಪತ್ರ ನೀಡಲಾಗಿದೆ ; ಇನ್ನು ಎಷ್ಟು ಬಾಕಿ ಇದೆ ; ಬಾಕಿಯಿರುವ ಅರ್ಜಿಗಳನ್ನು ಯಾವಾಗ ವಿಲೇವಾರಿ ಮಾಡಲಾಗುವುದು ; ಕಳೆದ ಮೂರು ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು ?

## ಕಡು ಬಡವರು ಮೃತರಾದಾಗ ಅಂತ್ಯಕ್ರಿಯೆಗೆ ಪರಿಹಾರ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨೧ (೮೭೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಡುಬಡವರು ಮೃತಪಟ್ಟಾಗ ಅಂತ್ಯ ಸಂಸ್ಕಾರ ನಡೆಸಲು ಸರ್ಕಾರವು ಯಾವ ಯೋಜನೆಯನ್ನು ಎಂದಿನಿಂದ ಜಾರಿಗೆ ತಂದಿರುತ್ತದೆ ;

(ಆ) ಈ ಯೊಜನೆಯಡಿ ಇದುವರೆವಿಗೂ ಎಷ್ಟು ಫಲಾನುಭವಿಗಳು ಇದರ ಉಪಯೋಗವನ್ನು ಪಡೆದುಕೊಂಡಿರುತ್ತಾರೆ ;

(ಇ) ಬಾಕಿ ಇರುವ ಫಲಾನುಭವಿಗಳಿಗೆ ಹಣವನ್ನು ಪಾವತಿಸಲಾಗುವುದು ಯಾವಾಗ ?

## ಕೆರೆ ಒತ್ತುವರಿ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೭೨೨ (೯೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಬಿಸ್ಕೂರು ಗ್ರಾಮದ ಕೆರೆ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಒತ್ತುವರಿ ಮಾಡಿರುವವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಕೆರೆಯನ್ನು ಒತ್ತುವರಿ ಮಾಡುವುದರಲ್ಲಿ ಯಾರ್‍ಯಾರು ಶಾಮೀಲಾಗಿರುತ್ತಾರೆ ; (ವಿವರ ನೀಡುವುದು)

(ಈ) ಸದರಿ ಕೆರೆಯನ್ನು ಪುನರುಜ್ಜೀವನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಸ್ತೆ ಮಧ್ಯೆ ಇರುವ ತೆರೆದ ಬಾವಿಯನ್ನು ಮುಚ್ಚುವ ಬಗ್ಗೆ

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೭೨೩ (೮೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಾಂಡವಪುರ ತಾಲ್ಲೂಕು, ಮೇಲುಕೋಟೆ ಹೋಬಳಿ, ಕದಲಗೆರೆಯಿಂದ ಕಾಡೇನಹಳ್ಳಿಗೆ ಹೋಗುವ ದಾರಿ ಮಧ್ಯದಲ್ಲಿ ರಸ್ತೆ ಪಕ್ಕದಲ್ಲಿಯೇ ತೆರೆದ ಬಾವಿ ಇದ್ದು, ದಾರಿ ಹೋಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ದಾರಿಯಲ್ಲಿ ಪ್ರತಿನಿತ್ಯ ನೂರಾರು ವಾಹನಗಳು ಸಂಚರಿಸುತ್ತಿದ್ದು, ವಾಹನಗಳು ವೇಗವಾಗಿ ಹೋಗುವುದರಿಂದ, ಅಪಘಾತಗಳು ಈ ರಸ್ತೆಯಲ್ಲಿ ಹೆಚ್ಚಾಗಿ ಸಂಭವಿಸುತ್ತಿರುವುದರಿಂದ, ಈ ಕುರಿತು ತೆಗೆದುಕೊಂಡ ಕ್ರಮಗಳೇನು ;

(ಇ) ರಾತ್ರಿ ವೇಳೆಯಲ್ಲಿ ಬರುವ ವಾಹನ ಸವಾರರು ಮತ್ತು ಪಾದಚಾರಿಗಳಿಗೆ ಸರಿಯಾಗಿ ದಾರಿಕಾಣದೆ ಸದರಿ ತೆರದ ಬಾವಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಾವಿಯನ್ನು ಮುಚ್ಚುವ ಕೆಲಸ ಸರ್ಕಾರದ ಮುಂದಿದೆಯೇ ; ಸದರಿ ಬಾವಿಯನ್ನು ಮುಚ್ಚಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಕ್ರೀಡಾ ಪಟುಗಳಿಗಾಗಿ ಖರೀದಿಸಲಾದ ಸಾಮಾಗ್ರಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೪ (೮೫೧) ಮಾನ್ಯ ಯುವ ಸಬಲೀಕರಣ ಹಾಗೂ ಕ್ರೀಡಾ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕಳೆದ ೩ ವರ್ಷಗಳಿಂದ ಕ್ರೀಡಾಪಟುಗಳಿಗಾಗಿ ಖರೀದಿಸಲಾದ ಕ್ರೀಡಾ ಹಾಗೂ ಇತರೆ ಸಾಮಾಗ್ರಿಗಳು ಯಾವುವು ; (ಸಾಮಾಗ್ರಿವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಸಾಮಾಗ್ರಿಗಳ ಖರೀದಿಗಾಗಿ ಟೆಂಡರ್ ಕರೆಯಲಾಗಿದೆಯೇ ; ಕರೆದಿದ್ದಲ್ಲಿ, ಟೆಂಡರ್ ಅಧಿಸೂಚನೆ ದಿನಾಂಕ ಹಾಗೂ ಟೆಂಡರ್‌ನಲ್ಲಿ ಭಾಗವಹಿಸಿದ ಸಂಸ್ಥೆಗಳ ಸಂಪೂರ್ಣ ವಿವರ ನೀಡುವುದು ;

(ಇ) ಸಾಮಾಗ್ರಿಗಳ ಖರೀದಿಗಾಗಿ ಕಳೆದ ೩ ವರ್ಷಗಳಲ್ಲಿ ತಗುಲಿದ ವೆಚ್ಚ ಎಷ್ಟು ಮತ್ತು ಯಾವ ಸಂಸ್ಥೆಯಿಂದ ಖರೀದಿ ಮಾಡಲಾಗಿದೆ ; (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಖರೀದಿಸಲಾದ ಸಾಮಾಗ್ರಿಗಳು ಇಲ್ಲಿಯವರೆಗೆ ಬಳಕೆಯಾಗದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದರೆ, ಬಳಕೆ ಮಾಡದೆ ಇರುವುದಕ್ಕೆ ಕಾರಣವೇನು ; (ಸಂಪೂರ್ಣ ವಿವರ ನೀಡುವುದು)

(ಉ) ಸದರಿ ಕ್ರೀಡಾಪಟುಗಳಿಗೆ ತರಬೇತುದಾರರನ್ನು ನೇಮಕ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದರೆ, ಯಾವ ಕಾಲಮಿತಿಯೊಳಗೆ ತರಬೇತುದಾರರನ್ನು ನೇಮಕ ಮಾಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಅನುಮೋದನೆಯಾದ ಯೋಜನೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೫ (೮೫೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನಮಂತ್ರಿ ಅವಾಸ್ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯದಲ್ಲಿ ಮನೆ ನಿರ್ಮಾಣಕ್ಕಾಗಿ ಅನುಮೋದನೆಯಾದ ಯೋಜನೆಗಳು ಎಷ್ಟು ; ಅವು ಯಾವುವು ; (ವಿವರ ನೀಡುವುದು)

(ಆ) ಈ ಯೋಜನೆಗಳ ಮೊತ್ತ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಒಂದು ಮನೆಯ ನಿರ್ಮಾಣಕ್ಕಾಗಿ ತಗಲುವ ವೆಚ್ಚವೆಷ್ಟು ; ಇದಕ್ಕೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಪ್ರಧಾನಮಂತ್ರಿ ಆವಾಸ್ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೬ (೮೫೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ (ಗ್ರಾಮೀಣ) ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ;

(ಆ) ೨೦೧೭–೧೮ನೇ ಸಾಲಿನಲ್ಲಿ ಧಾರವಾಡ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ (ಗ್ರಾಮೀಣ) ಫಲಾನುಭವಿಗಳನ್ನು ಆಯ್ಕೆ ಮಾಡದಿರುವ ಗ್ರಾಮಪಂಚಾಯತಿಗಳು ಎಷ್ಟು ; ಯಾವುವು ; ಆಯ್ಕೆ ಮಾಡದಿರಲು ಕಾರಣವೇನು ; (ವಿವರ ನೀಡುವುದು)

(ಇ) ಫಲಾನುಭವಿಗಳನ್ನು ಆಯ್ಕೆ ಮಾಡಿ ಜಿ.ಪಿ.ಎಸ್ ಮಾಡದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಜಿ.ಪಿ.ಎಸ್ ಮಾಡದಿರಲು ಕಾರಣವೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಹನಿ ನೀರಾವರಿ ಯೋಜನೆಯ ಕಾಮಗಾರಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೭ (೮೫೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಕಳೆದ ३ ವರ್ಷಗಳಲ್ಲಿ ಹನಿ ನೀರಾವರಿ ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಇದಕ್ಕೆ ತಗುಲಿದ ವೆಚ್ಚವೆಷ್ಟು ; (ವರ್ಷಾವಾರು, ಜಿಲ್ಲೆವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳಿಂದ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವರ್ಷಾವಾರು ವಿವರ ನೀಡುವುದು)

(ಇ) ಈ ಕಾಮಗಾರಿಗಳಿಂದ ಜಾರಿ ಮಾಡುವಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅಕ್ರಮ ತಡೆಗಟ್ಟಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಂದಾಯ ಗ್ರಾಮಗಳ ಘೋಷಣೆ ಹಾಗೂ ಅಭಿವೃದ್ಧಿ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೮ (೮೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಂದಾಯ ಗ್ರಾಮಗಳನ್ನು ಘೋಷಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇಲ್ಲಿಯವರೆಗೆ ಎಷ್ಟು ಕಂದಾಯ ಗ್ರಾಮಗಳನ್ನು ಘೋಷಿಸಲಾಗಿದೆ ; (ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು)

(ಆ) ಕಂದಾಯ ಗ್ರಾಮಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಜಿಲ್ಲೆಗಳಲ್ಲಿರುವ ತಾಂಡಗಳು ಎಷ್ಟು ; ಅವುಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಈ) ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರಕ್ಕೆ ಯಾವಾಗ ಪ್ರಸ್ತಾವನೆ ಸಲ್ಲಿಕೆಯಾಗಿದೆ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಬರಪೀಡಿತ ತಾಲ್ಲೂಕುಗಳ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨೯ (೫೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಯ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ ; ಈ ತಾಲ್ಲೂಕುಗಳಲ್ಲಿ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬರಪೀಡಿತ ತಾಲ್ಲೂಕುಗಳಿಗೆ ಸರ್ಕಾರ ಪರಿಹಾರ ಕ್ರಮಗಳಿಗಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಕೈಗೊಳ್ಳಲಾಗಿರುವ ಪರಿಹಾರ ಕ್ರಮಗಳೇನು ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ಹೊಸ ತಾಲ್ಲೂಕು ಹಾಗೂ ಜಿಲ್ಲೆಗಳ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೩೦ (೬೫೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದೆ ಕಾರ್ಯನಿರ್ವಹಿಸುತ್ತಿದ್ದಂತಹ ಜಿಲ್ಲೆ ಮತ್ತು ತಾಲ್ಲೂಕುಗಳ ವಿವರ ನೀಡುವುದು ;

(ಆ) ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಸೃಜಿಸಲಾಗಿರುವ ಜಿಲ್ಲಾವಾರು ತಾಲ್ಲೂಕುಗಳ ವಿವರ ನೀಡುವುದು ;

(ಇ) ಸದರಿ ತಾಲ್ಲೂಕುಗಳು ಯಾವ ದಿನಾಂಕದಿಂದ ಕಾರ್ಯಾರಂಭವಾಗಿವೆ ; ಸದರಿ ತಾಲ್ಲೂಕುಗಳಿಗೆ ಅಧಿಕಾರಿ/ ಅಗತ್ಯವಾದ ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಈ) ಇನ್ನು ಹೊಸದಾಗಿ ತಾಲ್ಲೂಕು ಸೃಜಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಬಾಕಿ ಇದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಅರಣ್ಯ ಇಲಾಖೆಗೆ ಮೀಸಲಿಟ್ಟ ಹಣದ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೩೧ (೫೧೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಅರಣ್ಯ ಇಲಾಖೆಗೆ ಮೀಸಲಿಟ್ಟ ಹಣವೆಷ್ಟು ; ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; ಖರ್ಚು ಮಾಡಿದ ಹಣವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸರ್ಕಾರವು ನಿಗಧಿಪಡಿಸಿ ಬಿಡುಗಡೆ ಮಾಡಿದ ಅನುದಾನವೆಷ್ಟು ; ಈ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು ; ಇತ್ತೀಚಿನ ಪ್ರಗತಿಯ ಸಂಪೂರ್ಣ ಯೋಜನೆಗಳ ವಿವರಗಳನ್ನು ವರ್ಷಾವಾರು ನೀಡುವುದು ?

## ರಾಮನಗರ ಜಿಲ್ಲೆಯ ಕೆರೆಗಳ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೩೨ (೫೧೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಮನಗರ ಜಿಲ್ಲೆ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೊಳಪಡುವ ಕೆರೆಗಳಾವುವು ; ರೈತರ ಹಾಗೂ ಜಾನುವಾರುಗಳ ಕುಡಿಯುವ ನೀರಿನ ಮೂಲವಾದ ಈ ಕೆರೆಗಳನ್ನು ಪೂರ್ಣ ಸ್ವಚ್ಛಗೊಳಿಸಿ ಹೂಳು ತೆಗೆದು ನೀರು ಸಂಗ್ರಹ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಸಣ್ಣ ನೀರಾವರಿ ಇಲಾಖೆ ವತಿಯಿಂದ ಕೆರೆಗಳ ಅಭಿವೃದ್ಧಿ/ನಿರ್ವಹಣೆ/ದುರಸ್ಥಿ ಪಡಿಸಲು ಅನುದಾನವನ್ನೇನಾದರೂ ಸರ್ಕಾರ ಬಿಡುಗಡೆಗೊಳಿಸಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರವು ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿ/ ನಿರ್ವಹಣೆ/ದುರಸ್ಥಿ ಪಡಿಸಲು ಬಿಡುಗಡೆ ಮಾಡಿ ಖರ್ಚು ಮಾಡಿರುವ ಅನುದಾನವೆಷ್ಟು ; ವಿಧಾನಸಭಾ ಕ್ಷೇತ್ರವಾರು ಕಾಮಗಾರಿಗಳ ಇತ್ತೀಚಿನ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು ?

## ಕಣ್ವ ಹಾಗೂ ಮಂಚನಬೆಲೆ ಜಲಾಶಯಗಳ ನೀರಿನ ಪ್ರಮಾಣದ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೩೩ (೫೧೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲ್ಲೂಕಿನ ಕಣ್ವ ಜಲಾಶಯ ಹಾಗೂ ಮಂಚನಬೆಲೆ ಜಲಾಶಯಗಳು ನಿರ್ಮಾಣವಾದಾಗ ಇದ್ದ ನೀರು ಶೇಖರಣೆಯ ಗರಿಷ್ಠ ಪ್ರಮಾಣವೆಷ್ಟು ಹಾಗೂ ಈಗಿನ ಪ್ರಮಾಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಎರಡು ಜಲಾಶಯಗಳಲ್ಲಿ ಹಲವಾರು ವರ್ಷಗಳಿಂದ ತುಂಬಿರುವ ಹೂಳನ್ನು ತೆಗೆಯಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಕಣ್ವ ಜಲಾಶಯಕ್ಕೆ ಏತ ನೀರಾವರಿ ಮೂಲಕ ನೀರು ತುಂಬಿಸುವ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು. ಈ ಯೋಜನೆಗೆ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಖರ್ಚು ಮಾಡಿದ ಹಣವೆಷ್ಟು ; ಕಾಮಗಾರಿಗಳ ಇತ್ತೀಚಿನ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಈ ಯೋಜನೆಯ ಕಾಮಗಾರಿಯನ್ನು ನಿರ್ವಹಿಸಲು ಯಾವ ಸಂಸ್ಥೆ/ಗುತ್ತಿಗೆದಾರರಿಗೆ ಎಷ್ಟು ಮೊತ್ತಕ್ಕೆ ಟೆಂಡರ್ ವಹಿಸಲಾಗಿದೆ ; ಟೆಂಡರ್‌ನಲ್ಲಿ ಭಾಗವಹಿಸಿದ ಸಂಸ್ಥೆಗಳಾವುವು ? (ಸಂಪೂರ್ಣ ವಿವರ ನೀಡುವುದು)

## ಬಂಡೀಪುರ, ನಾಗರಹೊಳೆ, ಮಲೆಮಹದೇಶ್ವರ ಬೆಟ್ಟ, ಬಿಳಿಗಿರಿರಂಗನಬೆಟ್ಟ ಅಭಯಾರಣ್ಯಗಳಲ್ಲಿ ವನ್ಯ ಪ್ರಾಣಿಗಳ ಸಾವು

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೪ (೮೭೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಒಂದು ವರ್ಷದಲ್ಲಿ (ಇದುವರೆಗೆ) ಬಂಡೀಪುರ, ನಾಗರಹೊಳೆ, ಮಲೆಮಹದೇಶ್ವರ ಬೆಟ್ಟ, ಬಿಳಿಗಿರಿರಂಗನಬೆಟ್ಟ ಅಭಯಾರಣ್ಯಗಳಲ್ಲಿ ಎಷ್ಟು ವನ್ಯ ಪ್ರಾಣಿಗಳು (ಆನೆ, ಹುಲಿ, ಕರಿಚಿರತೆ, ಚಿರತೆ ಇತ್ಯಾದಿ) ಸಾವಿಗೀಡಾಗಿವೆ ; ವನ್ಯ ಜೀವಿಗಳ ಸಾವಿಗೆ ಕಾರಣಗಳೇನು ;

(ಆ) ಈ ಅಭಯಾರಣ್ಯಗಳಿಗೆ ಮಂಜೂರಾಗಿರುವ ಭರ್ತಿಯಾಗಿ ಸೇವೆ ಸಲ್ಲಿಸುತ್ತಿರುವ ಹಾಗೂ ಖಾಲಿ ಇರುವ ಅರಣ್ಯಾಧಿಕಾರಿಗಳು, ಅಧೀನ ಸಿಬ್ಬಂದಿವರ್ಗದ ಹುದ್ದೆಗಳ ಸಂಖ್ಯೆ ಎಷ್ಟು ; ಸಾಕಷ್ಟು ಸಂಖ್ಯೆಯಲ್ಲಿ ವನಪಾಲಕರು (ಅರಣ್ಯದ ಗಾರ್ಡ್‌ಗಳು) ಇಲ್ಲದಿರುವುದು ಇದಕ್ಕೆ ಒಂದು ಮುಖ್ಯ ಕಾರಣವಲ್ಲವೆ ; ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದೇ ;

(ಇ) ಈಚೆಗೆ ನಡೆದ ವನ್ಯ ಜೀವಿ ಗಣತಿಯಲ್ಲಿ ಈ ರಾಷ್ಟ್ರೀಯ ಸಂರಕ್ಷಿತ ಅರಣ್ಯಗಳಲ್ಲಿ ಕಂಡು ಬಂದ ಹುಲಿ, ಆನೆ, ಚಿರತೆ ಹಾಗೂ ಇತರ ಅಪರೂಪದ ವನ್ಯಜೀವಿಗಳ ಸಂಖ್ಯೆ ಎಷ್ಟು ; ಹುಲಿಗಳ ಸಂಖ್ಯೆ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

## ಕಬಿನಿ ನಾಲೆಯಿಂದ ಹಂಪಾಪುರ ಮತ್ತು ಚಾಮುಂಡೇಶ್ವರಿ ಕ್ಷೇತ್ರದ ೨೯ ಕೆರೆಗಳಿಗೆ ನೀರು ತುಂಬಿಸುವ ಯೋಜನೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೫ (೮೭೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಬಿನಿ ನಾಲೆಯಿಂದ ಹಂಪಾಪುರ ಹಾಗೂ ಮೈಸೂರು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಹಳ್ಳಿಗಳ ೨೯ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ ಅದರ ರೂಪುರೇಷೆಗಳು ಒದಗಿಸಿರುವ ಅನುದಾನ, ಕಾಮಗಾರಿಯ ಹಂತದ ವಿವರಗಳನ್ನು ನೀಡುವುದು ;

(ಆ) ಈ ಯೋಜನೆಯಿಂದ ಯಾವ ಯಾವ ಗ್ರಾಮಗಳ ಕೆರೆಗಳಿಗೆ ನೀರು ತುಂಬಿಸಲು ಉದ್ದೇಶಿಸಲಾಗಿದೆ ; ಆ ಗ್ರಾಮಗಳ ಪಟ್ಟಿಯನ್ನು ನೀಡುವುದು ; ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ ?

## ಗುಂಡ್ಲುಪೇಟೆ ತಾಲ್ಲೂಕು ರಾಘವಾಪುರ ಕೆರೆ ನಿರ್ವಹಣಾ ಕಾಮಗಾರಿಯಲ್ಲಿ ಭ್ರಷ್ಟಾಚಾರ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೬ (೮೭೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗುಂಡ್ಲುಪೇಟೆ ತಾಲ್ಲೂಕು ರಾಘವಾಪುರ ಕೆರೆಯ ವಿಸ್ತೀರ್ಣ ಎಷ್ಟು ; ಕೆರೆಯ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣ ಎಷ್ಟು ; ಈ ಕೆರೆಯ ಹೂಳೆತ್ತುವ ದುರಸ್ಥಿ ಹಾಗೂ ನಿರ್ವಹಣೆ ಮಾಡಲಾದ ಯಾವ ಯಾವ ಕಾಮಗಾರಿಗಳಿಗೆ ಕಳೆದ ಮೂರು ವರ್ಷದಲ್ಲಿ ಮಂಜೂರು ಮಾಡಿ ಒದಗಿಸಿದ ಹಾಗೂ ಖರ್ಚಾಗಿರುವ ಹಣ ಎಷ್ಟು ; ಪ್ರತಿಯೊಂದು ಕಾಮಗಾರಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ಈ ಕೆರೆಯ ಏರಿ, ನೀರು ತುಂಬುವ ಮೊದಲೇ ಬಿರುಕು ಬಿಡಲು ಪ್ರಾರಂಭವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ; ನೀರು ತುಂಬಿದ ನಂತರ ಕೆರೆಯ ಏರಿ ಒಡೆದು ಅಪಾಯವಾಗುವ ಸಾಧ್ಯತೆಗಳಿವೆಯೇ ; ಕೆರೆ ಏರಿ, ಸೇತುವೆ, ರಿವಿಟ್‌ಮೆಂಟ್, ತಡೆಗೋಡೆ ಮೊದಲಾದ ಕಾಮಗಾರಿಗಳ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಜರುಗಿಸಲಾಗುವುದೇ ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0318/1,000 ಪ್ರತಿಗಳು/15–02–2018